ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

KB 12 YEARS 2013

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 12 ಸಂಚಿಕೆ : 309
4–6–2025 ಬುಧವಾರ

₹3 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 12 ISSUE : 309

## ಮೌಲ್ಯಾಧಾರಿತ ಶಿಕ್ಷಣ ನೀಡುವುದು ಪೊಲೀಸ್ ಪಬ್ಲಿಕ್ ಶಾಲೆಯ ಗುರಿ

### ಎಸ್ಪಿ ಉಮಾ ಪ್ರಶಾಂತ್




ದಾವಣಗೆರೆ ಜಿಲ್ಲೆ, ಹರಿಹರ ತಾಲೂಕಿನ ಕೊಂಡಜ್ಜಿ ಗ್ರಾಮದ ಪೊಲೀಸ್ ಪಬ್ಲಿಕ್ ಶಾಲೆಯ ಪುನಾರಾರಂಭದ ಕಾರ್ಯಕ್ರಮ ಉದ್ಘಾಟಿಸಿದ ಜಿಲ್ಲೆಯ ಪೊಲೀಸ್ ವರಿಷ್ಠಾಧಿಕಾರಿಗಳಾದ ಶ್ರೀಮತಿ ಉಮಾ ಪ್ರಶಾಂತ್ ಐಪಿಎಸ್ ರವರು ಪೊಲೀಸ್ ಪಬ್ಲಿಕ್ ಶಾಲೆಯ ನಿರ್ಮಾಣದ ಉದ್ದೇಶಗಳನ್ನು ತಿಳಿಸುತ್ತಾ ಮಕ್ಕಳಲ್ಲಿ ಶಿಸ್ತು ಮೂಡಿಸುವುದು, ಮೌಲ್ಯಾಧಾರಿತ ಶಿಕ್ಷಣ ನೀಡುವ ಮೂಲಕ ಪ್ರತಿ ಮಗುವನ್ನು ವಿಶ್ವದರ್ಜೆ ಎತ್ತರಕ್ಕೆ ಬೆಳೆಸುವುದಾಗಿದೆ ಎಂದು ಹೇಳಿದರು. ನಮ್ಮ ಶಾಲೆಯ ಶಿಕ್ಷಕರು ಪ್ರತಿ ಮಗುವನ್ನು ವೈಯಕ್ತಿಕ ಕಾಳಜಿ ಮಾಡುವ ಮೂಲಕ ಮಕ್ಕಳ ಸಮಗ್ರ ಬೆಳವಣಿಗೆಗೆ ಶ್ರಮಿಸುತ್ತಿದ್ದಾರೆ ಎಂದು ಶ್ಲಾಘಿಸಿದರು. ಶಾಲೆಯ ಮಕ್ಕಳು ಶೈಕ್ಷಣಿಕ ಕ್ಷೇತ್ರವಲ್ಲದೆ ಕ್ರೀಡೆ, ವಿಜ್ಞಾನ ,ಸಾಮಾಜಿಕ ಕ್ಷೇತ್ರದಲ್ಲೂ ಮುಂಚೂಣಿಯಲ್ಲಿದ್ದಾರೆ ಎಂದು ಸಂತಸ ಪಟ್ಟರು.

ಶಾಲಾ ಮಕ್ಕಳು ಅತ್ಯಂತ ಉತ್ಸಾಹದಿಂದ ಮೊದಲ ದಿನದ ಸಂಭ್ರಮಕ್ಕೆ ಸಾಕ್ಷಿಯಾದರು. ಕಾರ್ಯಕ್ರಮದಲ್ಲಿ ಜಿಲ್ಲೆಯ ಡಿಎಆರ್ ಡಿವೈಎಸ್ಪಿ ಆದ ಪ್ರಕಾಶ್ ಪಿ ಬಿ ಹಾಗೂ ಶಾಲೆಯ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ಉಪಸ್ಥಿತರಿದ್ದರು.

## ಇಂದು ನಾಲ್ವಡಿ ಕೃಷ್ಣರಾಜ ಒಡೆಯರ್ ಜನ್ಮದಿನಾಚರಣೆ

**ದಾವಣಗೆರೆ:** ಕನ್ನಡ ಸಾಹಿತ್ಯ ಪರಿಷತ್ತಿನ ಸಂಸ್ಥಾಪಕರಾದ ನಾಲ್ವಡಿ ಕೃಷ್ಣರಾಜ ಒಡೆಯರ್ ರವರ 141 ನೇ ಜಯಂತೋತ್ಸವ ಸಮಾರಂಭವನ್ನು ಇಂದು ಸಂಜೆ 5 ಗಂಟೆಗೆ ನಗರದ ಕುವೆಂಪು ಕನ್ನಡ ಭವನದಲ್ಲಿ ಜಿಲ್ಲಾ ಕಸಾಪ ಅಧ್ಯಕ್ಷ ಬಿ. ವಾಮದೇವಪ್ಪ ಅವರ ಅಧ್ಯಕ್ಷತೆಯಲ್ಲಿ ಆಯೋಜಿಸಲಾಗಿದೆ. ದಾವಣಗೆರೆಯ ಸರಕಾರಿ ಪ್ರಥಮ ದರ್ಜೆ ಕಾಲೇಜು ಮತ್ತು ಸ್ನಾತಕೋತ್ತರ ಕೇಂದ್ರದ ಕನ್ನಡ ವಿಭಾಗದ ಸಹ ಪ್ರಾಧ್ಯಾಪಕ ಡಾ. ಎನ್. ಕರಿಬಸಪ್ಪ ಅವರು ನಾಲ್ವಡಿ ಕೃಷ್ಣರಾಜ ಒಡೆಯರ್ ಅವರು ಕನ್ನಡ ನಾಡು ನುಡಿಗೆ ನೀಡಿದ ಕೊಡುಗೆಗಳ ಬಗ್ಗೆ ಉಪನ್ಯಾಸ ನೀಡುವರು. ಸಾಧಕರಾದ ಬಿ. ದಿಳ್ಯಪ್ಪ ಹಾಗೂ ವಿದುಷಿ ಡಾ. ಮಂಗಳಾ ಶೇಖರ್ ಅವರನ್ನು ಸನ್ಮಾನಿಸಲಾಗುವುದು. ದಾವಣಗೆರೆ ತಾಲ್ಲೂಕು ಅಧ್ಯಕ್ಷೆ ಸುಮತಿ ಜಯಪ್ಪ ಸಮಾರಂಭದಲ್ಲಿ ಉಪಸ್ಥಿತರಿರುವರು.

### ಸ್ಮಾರ್ಟ್‌ಸಿಟಿಯಲ್ಲಿ ವಾಹನ ಹೆಚ್ಚಳ

## ಸುಗಮ ಸಂಚಾರಕ್ಕಾಗಿ ನೂತನ ಟ್ರಕ್ ಟರ್ಮಿನಲ್

**ದಾವಣಗೆರೆ :** ದಾವಣಗೆರೆ ನಗರವನ್ನು ಸುಂದರವಾಗಿಸಲು ಸುತ್ತಲೂ ವರ್ತುಲ ರಸ್ತೆಗಳನ್ನು ನಿರ್ಮಿಸಲಾಗಿದ್ದು ಸುಗಮ ಸಂಚಾರ ಮತ್ತು ವಾಹನಗಳ ನಿಲುಗಡೆಗೆ ಅನುಕೂಲವಾಗುವಂತೆ ಆದಷ್ಟು ಶೀಘ್ರವಾಗಿ ಟ್ರಕ್ ಟರ್ಮಿನಲ್ ನಿರ್ಮಾಣಕ್ಕೆ 4 ರಿಂದ 5 ಎಕರೆ ಜಾಗವನ್ನು ಗುರುತಿಸಲು ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿ–ಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್. ಮಲ್ಲಿಕಾರ್ಜುನ್ ಸೂಚನೆ ನೀಡಿ–ದರು.



ಅವರು ಮಂಗಳವಾರ ದಾವಣಗೆರೆ–ಹರಿಹರ ನಗರಾಭಿವೃದ್ದಿ ಪ್ರಾಧಿಕಾರದ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಅತ್ಯಾಧುನಿಕವಾಗಿ ನಗರದ ವಿನ್ಯಾಸವನ್ನು ನಿರ್ಮಾಣ ಮಾಡುವುದು ಮತ್ತು ಒಳಚರಂಡಿ, ನೀರಿನ ಸಂಪರ್ಕ, ರಸ್ತೆ ಸಂಪರ್ಕ, ವಾಯುವಿಹಾರಕ್ಕೆ ಉದ್ಯಾನವನಗಳ ನಿರ್ಮಾಣ ಸೇರಿದಂತೆ ನಗರವನ್ನು ಸ್ವಚ್ಚ ಮತ್ತು ಸುಂದರವಾಗಿ ನಿರ್ಮಾಣ ಮಾಡುವಲ್ಲಿ ಪ್ರಾಧಿಕಾರದ ಪಾತ್ರ ಮಹತ್ವದ್ದಾಗಿದೆ. ಈ ನಿಟ್ಟಿನಲ್ಲಿ ಎಲ್ಲಾ ವಿನ್ಯಾಸಗಳನ್ನು ಪರಿಶೀಲನೆ ನಡೆಸಿ ಭವಿಷ್ಯದ ದೃಷ್ಟಿಯಿಂದ ನೂತನ ಬಡಾವಣೆಗಳಿಗೆ ಅನುಮೋದನೆ ನೀಡಬೇಕು ಎಂದರು.

ದಾವಣಗೆರೆಯಲ್ಲಿ ಟ್ರಕ್ ಟರ್ಮಿನಲ್‌ನ ಕೊರತೆ ಇದ್ದು ಅನೇಕ ದಿನಗಳ ಬೇಡಿಕೆ ಇದಾಗಿದೆ. ನಗರಾಭಿವೃದ್ದಿ ಪ್ರಾಧಿಕಾರದಿಂದಲೇ ಇದಕ್ಕೆ ಬೇಕಾದ ಕನಿಷ್ಠ 4–5 ಎಕರೆ ಜಾಗವನ್ನು ಗುರುತಿಸಬೇಕೆಂದರು.

ದಾವಣಗೆರೆ ನಗರ ಪಾಲಿಕೆಯಾಗಿದ್ದು ಸ್ಮಾರ್ಟ್‌ಸಿಟಿಯಾಗಿದೆ, ಇಲ್ಲಿ ಬಡವರು, ಮಧ್ಯಮ ವರ್ಗದವರೂ ಕೈಗೆಟುಕುವ ದರದಲ್ಲಿ ಮನೆಯನ್ನು ನಿರ್ಮಿಸಿಕೊಳ್ಳಲು ಮತ್ತು ವಾಸಿಸಲು ಅನುಕೂಲವಾಗುವಂತೆ ಪ್ರಾಧಿಕಾರದಿಂದ ಅಪಾರ್ಟ್ ಮೆಂಟ್‌ಗಳ ನಿರ್ಮಾಣ ಮಾಡಲು ಉದ್ದೇಶಿಸಲಾಗಿದೆ. ಮೊದಲ ಹಂತದಲ್ಲಿ ಜೆ.ಹೆಚ್.ಪಟೇಲ್ ಬಡಾವಣೆಯಲ್ಲಿ ನಿರ್ಮಾಣ ಮಾಡಲು ಡಿಪಿಆರ್ ತಯಾರಿಸಲು ಸೂಚನೆ ನೀಡಲಾಗಿದೆ. ಮತ್ತು ಖಾಸಗಿಯವರ ಸಹಭಾಗಿತ್ವದಲ್ಲಿಯು ಪ್ರಾಧಿಕಾರದಿಂದ ಹೊಸ ಬಡಾವಣೆಗಳನ್ನು ನಿರ್ಮಿಸಲು ಸಹ ಉದ್ದೇಶಿಸಲಾಗಿದೆ ಎಂದರು.

### ಕರವೇಯಿಂದ ಗೀತಾಂಜಲಿ ಚಿತ್ರಮಂದಿರಕ್ಕೆ ಮುತ್ತಿಗೆ:

## ಥಗ್ಸ್ ಲೈಫ್ ಪೋಸ್ಟರ್ ಹರಿದು ಆಕ್ರೋಶ

**ದಾವಣಗೆರೆ:** ತಮಿಳು ಭಾಷೆಯಿಂದ ಕನ್ನಡ ಹುಟ್ಟಿತು ಎಂದು ಭಾಷಾ ಪಂಡಿತನಂತೆ ಹೇಳಿಕೆ ನೀಡಿ, ಕನ್ನಡಿಗರ ಆಕ್ರೋಶಕ್ಕೀಡಾದ ಕಮಲ್ ಹಾಸನ್ ನಟಿಸಿರುವ ಥಗ್ಸ್ ಲೈಫ್ ಚಿತ್ರದ ಬಿಡುಗಡೆಗೆ ತಯಾರಿ ನಡೆಸಿದ್ದ ನಗರದ ಗೀತಾಂಜಲಿ ಚಿತ್ರಮಂದಿರಕ್ಕೆ ಕರ್ನಾಟಕ ರಕ್ಷಣಾ ವೇದಿಕೆ ಜಿಲ್ಲಾ ಘಟಕದಿಂದ ಚಿತ್ರಮಂದಿರಕ್ಕೆ ಮುತ್ತಿಗೆ ಹಾಕಿ ಪ್ರತಿಭಟಿಸಲಾಯಿತು.






ಮಂಗಳವಾರ ಬೆಳಿಗ್ಗೆ ಕರವೇ ಜಿಲ್ಲಾಧ್ಯಕ್ಷ ಎಂ.ಎಸ್. ರಾಮೇಗೌಡ ನೇತೃತ್ವದಲ್ಲಿ ಪ್ರತಿಭಟನಾ ಮೆರವಣಿಗೆ ಆಗಮಿಸಿ, ಚಿತ್ರಮಂದಿರದಲ್ಲಿ ಅಂಟಿಸಿದ್ದ ಥಗ್ಸ್ ಲೈಫ್ ಚಿತ್ರದ ಪೋಸ್ಟರ್ ಗಳನ್ನು ಕಿತ್ತು ಹರಿದು ಹಾಕಿದರಲ್ಲದೆ, ಚಿತ್ರಮಂದಿರದ ಗ್ಲಾಸ್ ಒಡೆದು ಆಕ್ರೋಶ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಕರವೇ ಜಿಲ್ಲಾಧ್ಯಕ್ಷ ರಾಮೇಗೌಡ, ಕನ್ನಡಕ್ಕೆ ಅವಮಾನ ಮಾಡಿದ ಅವಿವೇಕಿ ಕಮಲ್ ಹಾಸನ್ ಥಗ್ಸ್ ಲೈಫ್ ಚಿತ್ರ ಬಿಡುಗಡೆ–ಯಾದರೆ ಚಿತ್ರಮಂದಿರಗಳಿಗೆ ಬೆಂಕಿ ಹಚ್ಚುವ ಎಚ್ಚರಿಕೆ ನೀಡಿದ್ದರೂ ಕೂಡ ಗೀತಾಂಜಲಿ ಚಿತ್ರ ಮಂದಿರದಲ್ಲಿ ಕಮಲ್ ಚಿತ್ರ ಬಿಡುಗ–ಡೆಗೆ ತಯಾರಿ ನಡೆಸಿರುವುದು ನಾಡದ್ರೋಹಿ ಕೆಲಸ. ಕಮಲ್ ಕ್ಷಮೆ ಕೇಳುವವರೆಗೂ ಥಗ್ಸ್ ಲೈಫ್ ಸಿನಿಮಾವನ್ನು ಕರ್ನಾಟಕದಲ್ಲಿ ಬಿಡುಗಡೆ ಮಾಡಿದರೆ ಚಿತ್ರ ಮಂದಿರದ ಮಾಲೀಕರಿಗೆ, ವ್ಯವಸ್ಥಾಪಕರ ಮುಖಕ್ಕೆ ಮಸಿ ಬಳಿಯಲಾಗುವುದು. ಈ ವಿಚಾರದಲ್ಲಿ ಜೈಲಿಗೆ ಹೋದರು ಹೆದರುವುದಿಲ್ಲ ಎಂದು ಎಚ್ಚರಿಸಿದರು. ದಾವಣಗೆರೆ ನಗರದ ಅಶೋಕ, ತ್ರಿಶೂಲ್, ತ್ರಿನೇತ್ರ, ಎಸ್ಸೆಸ್ ಮಾಲ್ ನ ಮೂವಿ ಟೈಂ ಸೇರಿದಂತೆ ಯಾವುದೇ ಚಿತ್ರಮಂದಿರದಲ್ಲೂ ಥಗ್ ಲೈಫ್ ಸಿನಿಮಾವನ್ನು ಯಾವುದೇ ಕಾರಣ–ಕ್ಕೂ ಪ್ರದರ್ಶನ ಮಾಡಬಾರದು. ಇದಕ್ಕೂ ಮೀರಿ ಚಿತ್ರ ಬಿಡುಗಡೆ ಮಾಡಿದರೆ ಮುಂದೆ ಆಗುವ ಅನಾಹುತಗಳಿಗೆ ಚಿತ್ರಮಂದಿರ ಮಾಲೀಕರೇ ಹೊಣೆಗಾರರಾಗಬೇಕು ಎಂದು ಸ್ಪಷ್ಟಪಡಿಸಿದರು.

ಪ್ರತಿಭಟನೆಯಲ್ಲಿ ಮಹಿಳಾ ಘಟಕದ ಮಂಜುಳಾ ಮಾಂತೇಶ್ , ಮೀನಾಕ್ಷಮ್ಮ , ಸರೋಜಮ್ಮ, ಗೋಪಾಲ್ ದೇವರಮನೆ,. ಜಬಿ ಉಲ್ಲಾ, ಗಿರೀಶ್ ಕುಮಾರ್, ಆಟೋ ರಫೀಕ್, ಸುರೇಶ್, ತುಳಸಿ ರಾಮ್, ರಾಕಿ, ವಿನಯ್, ಚಂದ್ರು, ಗುರುಮೂರ್ತಿ, ಮುಸ್ತಫ ಇಬ್ರಾಹಿಂ, ಸಾಧಿಕ್, ಹಬ್ಬು, ಪೈಲ್ವಾನ್ ಜಬಿವುಲ್ಲಾ, ನಾಗರಾಜ್ , ಸುರೇಶ್, ರಮೇಶ, ರಾಕೇಶ್, ಅಕ್ಷಯ್, ಬಸವರಾಜು, ಅಬ್ಬು ಮಂಜುನಾಥ್ , ದಾದಾಪೀರ್, ಕಾಲ್ ಲಾಲ್ ಚೌದ್ರಿ, ಮಹೇಂದ್ರ ಸೇರಿದಂತೆ ಇನ್ನಿತರ



# ಇಂದಿನ ರಾಶಿ ಭವಿಷ್ಯ

### ಮೇಷ ರಾಶಿ

ಆರೋಗ್ಯವು ಇತರರೊಂದಿಗೆ ಸಂತೋಷವನ್ನು ಹಂಚಿಕೊಳ್ಳುವ ಮೂಲಕ ಅರಳುತ್ತದೆ. ಇಂವು ನಿಮಗೆ ನಿಮ್ಮ ಸಹೋದರ ಅಥವಾ ಸಹೋದರಿಯ ಸಹಾಯದಿಂದ ಹಣದ ಲಾಭವಾಗುವ ಸಾಧ್ಯತೆ ಇದೆ ನೀವು ಕುಟುಂಬದ ಸದಸ್ಯರ ಜೊತೆ ಸ್ವಲ್ಪ ತೊಂದರೆ ಹೊಂದಿದ್ದರೂ ಇದು ನಿಮ್ಮ ಮನಶ್ಶಾಂತಿಯನ್ನು ಹಾಳು ಮಾಡಲು ಅವಕಾಶ ನೀಡಬೇಡಿ. ನಿಮ್ಮ ಸಂಗಾತಿಯು ಇಂದು ಇಡೀ ದಿನ ನಿಮ್ಮ ಬಗ್ಗೆ ಚಿಂತಿಸುತ್ತೀರಿ.

### ವೃಷಭ ರಾಶಿ

ನಿಮ್ಮ ಆರೋಗ್ಯ ಸುಧಾರಿಸಲು ಸಹಕಾರಿಯಾಗುವ ಕೆಲಸಗಳನ್ನು ಮಾಡಬಹುದಾದ ಒಂದು ದಿನ. ಈ ರಾಶಿಚಕ್ರಕ್ಕೆ ಸಂಬಂಧಿಸಿದ ಕೆಲವರು ಇಂದು ಭೂಮಿಗೆ ಸಂಬಂಧಿಸಿದ ವಿಷಯದ ಬಗ್ಗೆ ಹಣವನ್ನು ಖರ್ಚುಮಾಡಬಹುದು ನಿಮ್ಮ ಕುಟುಂಬಕ್ಕೆ ಸೂಕ್ತ ಸಮಯ ನೀಡಿ. ನೀವು ಅವರ ಸಲುವಾಗಿ ಕಾಳಜಿ ವಹಿಸುತ್ತೀರೆಂದು ಅವರಿಗೆ ಅರ್ಥವಾಗಲಿ. ಅವರೊಂದಿಗೆ ನಿಮ್ಮ ಗುಣಮಟ್ಟದ ಸಮಯ ಕಳೆಯಿರಿ.

### ಮಿಥುನ ರಾಶಿ

ನಿಮ್ಮ ಬಗ್ಗೆ ನಿಮಗೇ ಉತ್ತಮ ಅಭಿಪ್ರಾಯ ಬರಲು ಕೆಲಸಗಳನ್ನು ಮಾಡಲು ಒಂದು ಅದ್ಭುತ ದಿನ. ಉದ್ಯೋಗಕ್ಕೆ ಸಂಬಂಧಿಸಿರುವ ಜನರಿಗೆ ಇಂದು ಹಣದ ಬಹಳಷ್ಟು ಅಗತ್ಯವಿರುತ್ತದೆ ಆದರೆ ಹಿಂದಿನ ದಿನಗಳಲ್ಲಿ ಮಾಡಲಾಗಿರುವ ಅನಗತ್ಯ ಖರ್ಚುಗಳ ಕಾರಣದಿಂದಾಗಿ ಅವರ ಹತ್ತಿರ ಸಾಕಷ್ಟು ಹಣ ಇರುವುದಿಲ್ಲ. ಇಂದು ನೀವು ಸೀಮಿತ ತಾಳ್ಮೆ ಹೊಂದಿರುತ್ತೀರಿ ಆದರೆ ಕಠಿಣ ಅಥವಾ ಅಸಮತೋಲಿತ ಪದಗಳು ನಿಮ್ಮ ಸುತ್ತಲಿನ ಜನರ ಅಸಮಾಧಾನಕ್ಕೆ ಕಾರಣವಾಗಬಹುದಾದ್ದರಿಂದ ಎಚ್ಚರಿಕೆಯಿಂದಿರಿ.

### ಕರ್ಕ ರಾಶಿ

ಮೋಜಿಗಾಗಿ ಹೊರಹೋಗುವವರಿಗೆ ಸಂತೋಷ ಮತ್ತು ಆನಂದವನ್ನು ಹಂಚಿಕೊಳ್ಳಿ. ನಿಮ್ಮ ಹಣ ಖರ್ಚಾಗುತ್ತಿದೆ ಎಂಬುದರ ಮೇಲೆ ನಿಗಾ ಇರಿಸುವ ಅಗತ್ಯವಿದೆ ಇಲ್ಲದಿದ್ದರೆ ಮುಂಬರುವ ಸಮಯದಲ್ಲಿ ನೀವು ತೊಂದರೆಗೊಳಗಾಗಬಹುದು ನಿಮ್ಮ ಕುಟುಂಬದೊಂದಿಗೆ ಸಾಮಾಜಿಕ ಚಟುವಟಿಕೆ ಎಲ್ಲರನ್ನೂ ಆರಾಮವಾಗಿ ಮತ್ತು ಆಹ್ಲಾದಕರ ಮನಸ್ಥಿತಿಯಲ್ಲಿಡುತ್ತದೆ. ಇಂದು ಯಾರನ್ನೂ ಚುಡಾಯಿಸಬೇಡಿ.

### ಸಿಂಹ ರಾಶಿ

ಇಂದು ನೀವು ಆರಾಮವಾಗಿರಬೇಕು ಹಾಗೂ ನಿಕಟ ಸ್ನೇಹಿತರು ಮತ್ತು ಕುಟುಂಬದ ಎಲ್ಲಾ ಸದಸ್ಯರನ್ನು ಸಂತೋಷವಾಗಿರಿಸಲು ಪ್ರಯತ್ನಿಸಬೇಕು. ಸಣ್ಣ ಉದ್ಯೋಗವನ್ನು ಮಾಡುವ ಜನರು, ಇಂದು ತಮ್ಮ ಆಪ್ತರಿಂದ ಯಾವುದೇ ಸಲಹೆಯನ್ನು ಪಡೆಯಬಹುದು. ಇದರಿಂದ ಅವರಿಗೆ ಆರ್ಥಿಕವಾಗಿ ಲಾಭ ಪಡೆಯುವ ಸಾಧ್ಯತೆ ಇದೆ. ಇಂದು ನೀವು ಹೆಚ್ಚು ಪ್ರಯತ್ನ ಮಾಡಬೇಕಾಗಿ ಬಂದರೂ ಕೂಡ ಮಕ್ಕಳ ಸಂಗದಲ್ಲಿ ನಿಮ್ಮ ಬಿಡುವಿನ ಸಮಯ ಕಳೆಯಲು ಪ್ರಯತ್ನಿಸಬೇಕು.

### ಕನ್ಯಾ ರಾಶಿ

ಕ್ರೀಡೆಗಳು ಮತ್ತು ಇತರ ಹೊರಾಂಗಣ ಚಟುವಟಿಕೆಗಳಲ್ಲಿ ಭಾಗವಹಿಸುವುದು ನಿಮ್ಮ ಕಳೆದುಕೊಂಡ ಚೈತನ್ಯವನ್ನು ಸಂಗ್ರಹಿಸಲು ಸಹಾಯ ಮಾಡುತ್ತದೆ. ಹಣ ನಿಮಗೆ ಅಗತ್ಯವಾಗಿದೆ ಆದರೆ ನಿಮ್ಮ ಸಂಬಂಧಗಳನ್ನು ಹಾಳುಮಾಡುವಷ್ಟು ಹಣದ ಬಗ್ಗೆ ಗಂಭೀರವಾಗಬೇಡಿ. ನಿಮ್ಮ ಅಸಡ್ಡೆಯ ವರ್ತನೆ ಪೋಷಕರನ್ನು ಚಿಂತೆಗೀಡು ಮಾಡಬಹುದು.

### ತುಲಾ ರಾಶಿ

ನೀವು ಸಂದಿಗ್ಧ ಪರಿಸ್ಥಿತಿಯನ್ನು ಎದುರಿಸಿದಲ್ಲಿ ಖಿನ್ನತೆಗೊಳಗಾಗಬೇಡಿ. ಆಹಾರದ ಸ್ವಾದಕ್ಕೆ ಉಪ್ಪು ಬೇಕಾದ ಹಾಗೆ ಅತೃಪ್ತಿಯಿಂದ ಮಾತ್ರ ನೀವು ಸಂತೋಷದ ಮೌಲ್ಯವನ್ನು ಅರ್ಥ ಮಾಡಿಕೊಳ್ಳುತ್ತೀರಿ. ನಿಮ್ಮ ಮನಸ್ಥಿತಿಯನ್ನು ಬದಲಾಯಿಸಲು ಕೆಲವು ಸಾಮಾಜಿಕ ಸಮಾರಂಭಗಳಿಗೆ ಹಾಜರಾಗಿ. ಅನಿರೀಕ್ಷಿತ ಬಿಲ್‌ಗಳು ಹಣಕಾಸಿನಹೊರೆಯನ್ನು ಹೆಚ್ಚಿಸುತ್ತದೆ. ಸ್ನೇಹಿತರು ಮತ್ತು ಕುಟುಂಬದ ಸದಸ್ಯರು ನಿಮ್ಮ ಹೆಚ್ಚಿನ ಸಮಯ ತೆಗೆದುಕೊಳ್ಳುತ್ತಾರೆ.

### ವೃಶ್ಚಿಕ ರಾಶಿ

ಎಣ್ಣೆಯುಕ್ತ ಮತ್ತು ಮಸಾಲೆಯುಕ್ತ ಆಹಾರ ತಪ್ಪಿಸಿ. ವಿದೇಶದಲ್ಲಿ ವ್ಯಾಪಾರ ಮಾಡುವ ಈ ರಾಶಿಚಕ್ರದ ಜನರಿಗೆ ಇಂದು ಸಾಕಷ್ಟು ಹಣದ ಲಾಭವನ್ನು ಪಡೆಯಬಹುದು. ನಿಮ್ಮ ಜ್ಞಾನದಾಹ ನಿಮಗೆ ಹೊಸ ಸ್ನೇಹಿತರನ್ನು ಪಡೆಯಲು ಸಹಾಯ ಮಾಡುತ್ತದೆ. ನೀವು ಸಂತೋಷ ನೀಡುವ ಮೂಲಕ ಮತ್ತು ಹಿಂದಿನ ತಪ್ಪುಗಳನ್ನು ಮನ್ನಿಸುವ ಮೂಲಕ ನಿಮ್ಮ ಜೀವನವನ್ನು ಸಮರ್ಥಗೊಳಿಸಲಿದ್ದೀರಿ.

### ಧನು ರಾಶಿ

ಕಿಕ್ಕಿರಿದ ಬಸ್‌ನಲ್ಲಿ ಪ್ರಯಾಣಿಸುವಾಗ ರಕ್ತದೊತ್ತಡವಿರುವ ರೋಗಿಗಳು ಅವರ ಆರೋಗ್ಯದ ಬಗ್ಗೆ ಹೆಚ್ಚು ಎಚ್ಚರಿಕೆ ವಹಿಸಬೇಕು. ಇಂದು ಸುಮ್ಮನೆ ಕುಳಿತುಕೊಳ್ಳುವ ಬದಲು –ಏಕೆ ಏನನ್ನಾದರೂ ಮಾಡಬಾರದು ಇದು ನಿಮ್ಮ ಗಳಿಕೆಯ ಶಕ್ತಿಯನ್ನು ಸುಧಾರಿಸುತ್ತದೆ. ನಿಮ್ಮನ್ನು ಈ ಮೊದಲು ಆಮಂತ್ರಿಸಿರದಿದ್ದಲ್ಲಿ ಆಮಂತ್ರಿಸಿದಲ್ಲಿ –ಆಹ್ವಾನವನ್ನು ಸಭ್ಯತೆಯಿಂದ ಸ್ವೀಕರಿಸಿ. ಪ್ರೀತಿ ಮಿತಿಯಿಲ್ಲದ್ದಾಗಿದೆ, ಅಪಾರವಾಗಿದೆ;ನೀವು ಈ ಮುಂಚೆ ಈ ವಿಷಯಗಳನ್ನು ಕೇಳಿರಬೇಕು. ಆದರೆ ಇಂದು, ನೀವು ಇದನ್ನು ಅನುಭವಿಸುತ್ತೀರಿ.

### ಮಕರ ರಾಶಿ

ನಿಮ್ಮ ಆಹಾರವನ್ನು ನಿಯಂತ್ರಣದಲ್ಲಿರಿಸಿಕೊಳ್ಳಿ ಮತ್ತು ಫಿಟ್ ಆಗಿ ಉಳಿಯಲು ವ್ಯಾಯಾಮ ಮಾಡಿ. ಇಂದು ನೀವು ಆಲ್ಕೊಹಾಲ್ಯುಕ್ತ ಮದ್ಯವನ್ನು ಸೇವಿಸಬಾರದು, ಮಾದಕತೆಯ ಸಂದರ್ಭದಲ್ಲಿ ನೀವು ಯಾವುದೇ ಬೆಲೆಬಾಳುವ ವಸ್ತುಗಳನ್ನು ಕಳೆದುಕೊಳ್ಳಬಹುದು. ಕುಟುಂಬದ ಸದಸ್ಯರು ಅಥವಾ ಸಂಗಾತಿ ಕೆಲವು ಆತಂಕಗಳನ್ನು ಉಂಟುಮಾಡುತ್ತಾರೆ. ಯಾರಾದರೂ ನಿಮ್ಮ ಹೆಸರು ಕೆಡಿಸಲು ಪ್ರಯತ್ನಿಸಬಹುದದ್ದರಿಂದ ಜಾಗರೂಕರಾಗಿರಿ. ಇಂದು ನೀವು ಅಂದುಕೊಂಡಿದ್ದಕ್ಕಿಂತಲೂ ಹೆಚ್ಚು ನಿಮ್ಮ ಜೀವನದಲ್ಲಿ ತೆರೆಮರೆಯಲ್ಲಿ ನಡೆಯುತ್ತಿದೆ.

### ಕುಂಭ ರಾಶಿ

ಒತ್ತಡದ ಕೆಲಸದ ವೇಳಾಪಟ್ಟಿ ನಿಮ್ಮ ಸಹನೆಯನ್ನು ಕೆಣಕಬಹುದು. ಇಂದು ಮಾಡಿದ ಹೂಡಿಕೆ ನಿಮ್ಮ ಅಭ್ಯುದಯ ಮತ್ತು ಆರ್ಥಿಕ ಭದ್ರತೆಯನ್ನು ಹೆಚ್ಚಿಸುತ್ತದೆ. ಸಂಬಂಧಿಕರು ಮತ್ತು ಸ್ನೇಹಿತರಿಂದ ಅನಿರೀಕ್ಷಿತ ಉಡುಗೊರೆಗಳು. ನಿಮ್ಮ ಮನದನ್ನೆಯ ವಿಚಿತ್ರ ನಡವಳಿಕೆ ನಿಮ್ಮ ಮನಸ್ಥಿತಿಗೆ ಅಸಮಾಧಾನ ತರಬಹುದು. ಇಂದು ಹೆಚ್ಚಿನ ಸಾಧನೆ ಮತ್ತು ಉನ್ನತ ಪ್ರೊಫೈಲ್‌ಗೆ ಒಂದು ಒಳ್ಳೆಯ ದಿನ. ನಿಮ್ಮ ಜೀವನದಲ್ಲಿ ನಂತರ ವಿಷಾದಿಸಬಹುದಾದ ಆತುರದ ನಿರ್ಧಾರಗಳನ್ನು ಕೈಗೊಳ್ಳಬೇಡಿ. ಇಂದು ನಿಮ್ಮ ಮದುವೆಯಲ್ಲಿನ ಒಂದು ಕಠಿಣ ಸಮಯವಾಗಿರಬಹುದು.

### ಮೀನ ರಾಶಿ

ನಿಮ್ಮ ಸಾಮಾನ್ಯ ಜ್ಞಾನದ ಜೊತೆಗೆ ನಿಮ್ಮ ನಿರಂತರ ಪ್ರಯತ್ನ ಖಂಡಿತವಾಗಿಯೂ ಯಶಸ್ಸು ತರುವುದರಿಂದ ತಾಳ್ಮೆಯಿಂದಿರಿ. ನಿಮ್ಮ ಸಹೋದರ–ಸಹೋದರಿಯರಲ್ಲಿ ಒಬ್ಬರು ಇಂದು ನಿಮ್ಮಿಂದ ಹಣವನ್ನು ಎರವಲು ಪಡೆಯಬಹುದು, ನೀವು ಅವರಿಗೆ ಹಣವನ್ನು ಸಾಲವಾಗಿ ಕೊಡುತ್ತೀರಿ ಆದರೆ ಇದರಿಂದ ನಿಮ್ಮ ಆರ್ಥಿಕ ಪರಿಸ್ಥಿತಿ ಹದಗೆಡಬಹುದು. ಕುಟುಂಬದ ಸದಸ್ಯರು ನಿಮ್ಮ ಜೀವನದಲ್ಲಿ ಒಂದು ವಿಸೇಷ ಸ್ಥಾನವನ್ನು ಹೊಂದಿರುತ್ತಾರೆ.

ಪ್ರಾಥಮಿಕ ಹಾಗೂ ಪ್ರೌಢಶಾಲಾ ಮುಖ್ಯ ಶಿಕ್ಷಕರು ಹಾಗೂ ಅಧ್ಯಕ್ಷರುಗಳಿಗೆ ಶಾಲಾ ಶಿಕ್ಷಣದಲ್ಲಿ ಮೌಲ್ಯ ಶಿಕ್ಷಣ ಕುರಿತು ಕಾರ್ಯಾಗಾರ

# ಶಿಕ್ಷಕರು ವಿದ್ಯಾರ್ಥಿಗಳಿಗೆ ಮೌಲ್ಯಯುತ ಶಿಕ್ಷಣವನ್ನು ನೀಡಿ ಸದೃಡ ದೇಶವನ್ನು ನಿರ್ಮಾಸಿಬೇಕು:ಸಚಿವ ಎಚ್ ಕೆ ಪಾಟೀಲ

**ಗದಗ:** ಶಿಕ್ಷಕರು ವಿದ್ಯಾರ್ಥಿಗಳಿಗೆ ಮೌಲ್ಯಯುತ ಶಿಕ್ಷಣವನ್ನು ನೀಡಿ ಸದೃಡ ದೇಶವನ್ನು ನಿರ್ಮಾಸಿಬೇಕು ಎಂದು ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್. ಕೆ.ಪಾಟೀಲ ಅವರು ಹೇಳಿದರು.




ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್ ನಲ್ಲಿ ಸೋಮವಾರ ಗದಗ ತಾಲೂಕಿನ ಪ್ರಾಥಮಿಕ ಹಾಗೂ ಪ್ರೌಢಶಾಲಾ ಮುಖ್ಯ ಶಿಕ್ಷಕರು ಹಾಗೂ ಅಧ್ಯಕ್ಷರುಗಳಿಗೆ ಶಾಲಾ ಶಿಕ್ಷಣದಲ್ಲಿ ಮೌಲ್ಯ ಶಿಕ್ಷಣ ಕುರಿತು ಕಾರ್ಯಗಾರದಲ್ಲಿ ಭಾಗವಹಿ ಅವರು ಮಾತನಾಡಿದರು.

ಶಿಕ್ಷಕರು ಮೌಲ್ಯಗಳನ್ನು ಮೌಲ್ಯಯುತ ಶಿಕ್ಷಣ,ಆದರ್ಶ,ನಿಯತ್ತು ಕಲಿಸುವುದು ಭಾಷಣದ ಮೂಲಕ ಹೇಳುವುದು ತುಂಬಾ ಸುಲಭ ಮಕ್ಕಳಿಗೆ 13–14 ವಯಸ್ಸು ತುಂಬಿದಾಗ ಶಿಕ್ಷಕರು ಹೇಳುವುದು ಸರಿನಾ ತಪ್ಪಾ ಹಾಗು ಕಠಿಣವಾದ ಕೆಲಸವನ್ನು ನಮ್ಮ ಹಿರಿಯರು ಯಾವ ರೀತಿ ಮಾಡುತ್ತಾರೆ ಎಂದು ಸೂಕ್ಷ್ಮವಾಗಿ ಗಮನಿಸುತ್ತಿರುತ್ತಾರೆ,ನಾವು ಮಾಡುವ ಕಾರ್ಯಗಳು ಮಕ್ಕಳ ಮೇಲೆ ಪರಿಣಾಮ ಬೀರುತ್ತವೆ ಹಾಗಾಗಿ ನಾವು ಮೌಲ್ಯಗಳನ್ನು ಅಳವಡಿಸಿಕೊಳ್ಳಬೇಕು ಅಂದಾಗ ಮಾತ್ರ ಆದರ್ಶ ಸಮಾಜ ನಿರ್ಮಾಣವಾಗುತ್ತದೆ ಎಂದು ಹೇಳಿದರು.

ಆದರ್ಶ ಪ್ರಾಮಾಣಿಕತೆ ನಂಬಿಕೆ ಎನ್ನುವ ಮೌಲ್ಯಗಳ ಕುರಿತು ಮಾತನಾಡಲು ಹೆದರಿಕೆ ಬರುವ ಸಮಯದಲ್ಲಿ ಗದಗ ತಾಲೂಕಿನ ಶಿಕ್ಷಕರು ವಿದ್ಯಾರ್ಥಿಗಳ ಬದುಕನ್ನು ಬದಲಾಯಿಸಲು ವಿಶೇಷ ಪ್ರಯತ್ನ ಮಾಡುತ್ತಿರುವುದು ತುಂಬಾ ಸಂತೋಷ ಸಂಗತಿ ಹಾಗು ಶಿಕ್ಷಕರು ಯಾವ ಸೇನಾನಿಗಳಿಗಿಂತ ಸಣ್ಣವರಲ್ಲ,ಶಿಕ್ಷಕರು ಮಕ್ಕಳಿಗೆ ಪರಿಣಾಮಕಾರಿಯಾಗಿ ಕಲಿಸಲು ದೈರ್ಯದಿಂದ ಮುನ್ನುಗಬೇಕು ಎಂದರು.

ಅಬ್ರಾಹಂ ಲಿಂಕನ್ ಅವರು ಶಿಕ್ಷಕರಿಗೆ ಪತ್ರ ಬರೆದು ನನ್ನ ಮಗನಿಗೆ ಸುಲಭವಾಗಿ ಉತ್ತೀರ್ಣವಾಗಲು ಕಲಿಸಬೇಡಿ ಅವನಿಗೆ ಸೋಲನ್ನು ಹೇಗೆ ಎದುರಿಸಬೇಕು ಉತ್ತಮ ನೀತಿ ಪಾಠ ನೀಡಿ ಎಂದು ಮುಕ್ತವಾಗಿ ಹೇಳುವಂತಹ ಪಾಲಕರು ಈಗ ನಮ್ಮಲ್ಲಿ ಕಡಿಮೆ ಯಾಗಿದ್ದಾರೆ ಕಾಲ ಬದಲಾಗಿದೆ ಇಂದು ಬೆಳಿಗ್ಗೆ ಶಾಲೆಯಿಂದ ಹೋರಗುಳಿದ ಮಕ್ಕಳನ್ನು ಸ್ವತಃ ಸಚಿವರ ಕಾರಿನಲ್ಲಿ ಕುರಿಸುಕೊಂಡು ಶಾಲೆಗೆ ಕರೆದುಕೊಂಡು ಹೋಗಿ ದಾಖಲಿಸಿ ದಿನಾಲು ಶಾಲೆಗೆ ಬರುತ್ತೆನೆ ಎಂದು ಪ್ರತಿಜ್ಞೆ ಮಾಡಲಾಗಿದೆ ಎಂದು ಹೇಳಿದರು.

ಶಾಲಾ ಮಕ್ಕಳಿಗೆ ಬಿಸಿಯೂಟ ಸಮವಸ್ತ್ರ ಶೂ ಹಾಲು ಹೀಗೆ ನಾನಾ ಯೋಜನೆಗಳನ್ನು ತಂದು ಅನೇಕ ವಿದ್ಯಾರ್ಥಿಗಳನ್ನು ಶಾಲೆಗೆ ಕರೆತರಲಾಗಿದೆ ಇನ್ನು ಬಾಕಿ ಉಳಿದ ವಿದ್ಯಾರ್ಥಿಗಳನ್ನು ಶಾಲೆಗೆ ಪುನಃ ಕರೆತಂದು ವಿದ್ಯಾರ್ಥಿಗಳಿಗೆ ಶಿಕ್ಷಣ ನೀಡಬೇಕು ಎಂದು ನುಡಿದರು.

ಸ್ವಾಮಿ ನಿರ್ಭಯನಂದ ಸ್ವಾಮಿ ಮಾತನಾಡಿ ನಮ್ಮ ದೇಶದ ಶಿಕ್ಷಣ ವ್ಯವಸ್ಥೆಯನ್ನು ಮೊದಲು ಬದಲಾಯಿಸಬೇಕು ಮಗು ಮಾತೃ ಭಾಷೆಯಲ್ಲಿಯೇ ತಮ್ಮ ಪ್ರಾಥಮಿಕ ಶಾಲೆಯನ್ನು ಕಲಿಯಬೇಕು,ಸ್ವಾಮಿ ವಿವೇಕಾಂದರ ಕಲ್ಪನೆಯ ಭಾರತ,ನಿರ್ಮಾಣ ಮಾಡಲು ನಮ್ಮೆಲ್ಲರ ಮಾರ್ಗದರ್ಶನ ಸದಾ ಇರುತ್ತದೆ ಎಂದು ಸುದಿರ್ಘವಾಗಿ ಪೂರ್ವಗ್ರಹ ವಿಲ್ಲದೆ ವಿಷಯಗಳನ್ನು ಪ್ರಸ್ತುತ ಪಡಿಸಿದರು.

ಜೆ ಕೆ ಜಮಾದರ ಅವರು ಮಾತನಾಡಿ ಶಿಕ್ಷಣದ ಮೂಲ ಉದ್ದೇಶ ಒಬ್ಬ ಕಾಡು ಮನುಷ್ಯನನ್ನು ನಾಡು ಮನುಷ್ಯನನ್ನಾಗಿ ಬುದ್ಧಿವಂತರಾಗಿ ಹೃದಯವಂತರಾಗಿ ಸಮಾಜಪ್ರೀಯ ವ್ಯಕ್ತಿ ಯನ್ನಾಗಿ ನಿರ್ಮಿಸುವುದು ಕೆ ಎಚ್ ಪಾಟೀಲ ಪ್ರತಿಷ್ಠಾನ ಮೂಲಕ ಸಾಕಷ್ಟು ಕಾರ್ಯಕ್ರಮಗಳನ್ನು ಈಗಾಗಲೇ ಕೈಗೊಳ್ಳಲಾಗಿದೆ.ಪ್ರಾಥಮಿಕ ಶಾಲೆಯಲ್ಲಿ ಮಕ್ಕಳಿಗೆ ಮೌಲ್ಯಗಳ ಕುರಿತು ಸರಿಯಾಗಿ ಮನನವಾಗುವ ಹಾಗೇ ಶಿಕ್ಷಣ ನೀಡಬೇಕು,ಮಕ್ಕಳಲ್ಲಿ ರಾಷ್ಟ್ರಭಕ್ತಿ ಸಮಾನತೆ ಸೇವಾಭಾವ ಸ್ವಾವಲಂಬನೆ ಗಳಂತಹ ಮೌಲ್ಯಗಳು ಇರುವ ಹಾಗೇ ಬೋದಿಸಿ ವಿದ್ಯಾರ್ಥಿಗಳನ್ನು ಮಾನಸಿಕವಾಗಿ ಆರೋಗ್ಯಕರವಾಗಿ ಸದೃಡ ವ್ಯಕ್ತಿ ಯನ್ನಾಗಿಸಬೇಕು ಹಾಗೇ ಜವಾಹರಲಾಲ್ ನೆಹರೂ ಹೇಳಿದಂತೆ ದೇಶದ ಭವಿಷ್ಯವನ್ನು ತಿಳಿಯಲು ಆಕಾಶದಲ್ಲಿರುವ ನಕ್ಷತ್ರ ನೋಡಿದರೆ ದೇಶದ ಭವಿಷ್ಯ ಗೋಚರಿಸುವುದಿಲ್ಲ ದೇಶದ ಮಕ್ಕಳ ಕಣ್ಣಿನಲ್ಲಿ ಆಶಾವಾದ ,ಧೈರ್ಯ ತುಂಬಿರಬೇಕು ಅಂದಾಗ ಮಾತ್ರ ಆ ದೇಶಕ್ಕೆ ಭವಿಷ್ಯ ಉತ್ತಮವಾಗಿದೆ ಎಂದು ಹೇಳಿರುವುದನ್ನು ನೆನಪುಮಾಡಿಕೊಟ್ಟರು.

## ಮೇ ದಿನಾಚರಣೆಯನ್ನು ಸರ್ಕಾರದ ವತಿಯಿಂದ ಆಚರಿಸಲು ಮನವಿ



**ದಾವಣಗೆರೆ:** ಪ್ರತಿ ವರ್ಷ ಮೇ 1ರಂದು ಕಾರ್ಮಿಕ ದಿನಾಚರಣೆಯನ್ನು ಸರ್ಕಾರದ ವತಿಯಿಂದ ಆಚರಿಸಬೇಕು ಎಂದು ಅಗ್ರಹಿಸಿ ರಾಜ್ಯ ಅಸಂಘಟಿತ ಕಾರ್ಮಿಕರ ಸಂಘ ದಾವಣಗೆರೆ ಜಿಲ್ಲಾ ಶಾಖೆಯಿಂದ ಕಾರ್ಮಿಕ ಇಲಾಖೆ ಮೂಲಕ ಕಾರ್ಮಿಕ ಸಚಿವ ಸಂತೋಷ್ ಲಾಡ್ ಅವರಿಗೆ ದಾವಣಗೆರೆ ಜಿಲ್ಲಾಧ್ಯಕ್ಷ ಎ.ಜೆ. ರವಿಕುಮಾರ್ ಮನವಿ ಸಲ್ಲಿಸಿದರು.

ಕಾರ್ಮಿಕರು ನಮ್ಮ ದೇಶದ ಹೆಮ್ಮೆ, ಇವರಿಗೆ ವಿಶ್ವದಲ್ಲಿಯೇ ಒಂದು ಗೌರವ ಸ್ಥಾನವಿದೆ. ನಾಡಿನ ಹೆಸರಾಂತ ಮಹನೀಯರ ದಿನಾಚರಣೆಗಳನ್ನು ಮಾಡುತ್ತಾ ಬಂದಿದ್ದೇವೆ. ಸರ್ಕಾರವು ಕೂಡ ಹಲವು ಮಹನೀಯರ ದಿನಾಚರಣೆ ಮಾಡುತ್ತಿದೆ. ಆದರೆ ಕಾರ್ಮಿಕರ ದಿನಾಚರಣೆಯನ್ನು ಮಾತ್ರ ಮರೆತಂತಿದೆ. ಹಾಗಾಗಿ ಪ್ರತಿ ವರ್ಷ ಮೇ 1 ಸರ್ಕಾರವೇ ಜಿಲ್ಲಾ ಕೇಂದ್ರಗಳಲ್ಲಿ ಕಾರ್ಮಿಕ ಇಲಾಖೆಯ ಸಹಕಾರದೊಂದಿಗೆ ಕಾರ್ಮಿಕರ ದಿನಾಚರಣೆಯನ್ನು ಆಚರಿಸಬೇಕು ಎಂದು ಮನವಿ ಪತ್ರವನ್ನು ಸಹಾಯಕ ಆಯುಕ್ತರು, ದಾವಣಗೆರೆ ಕಾರ್ಮಿಕರ ಇಲಾಖೆ ಇವರಿಗೆ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ರಾಜ್ಯ ಅಸಂಘಟಿತ ಕಾರ್ಮಿಕರ ಸಂಘದ ಪದಾಧಿಕಾರಿಗಳಾದ ಡಾ. ಪರಶುರಾಮ್, ಪ್ರವೀಣ್ ಕುಮಾರ್, ಎಂ. ಕೇಶವ ಉಪಸ್ಥಿತರಿದ್ದರು.

## ಮಾತೃ ದೇವೋ ಚಾರಿಟಬಲ್ 5 ನೇ ವಾರ್ಷಿಕೋತ್ಸವ

**ದಾವಣಗೆರೆ:** ಮಾತೃದೇವೋ ಸಮಾಜ ಕಲ್ಯಾಣ ಮತ್ತು ಶೈಕ್ಷಣಿಕ ಚಾರಿಟಬಲ್ ಟ್ರಸ್ಟ್ ( ರಿ ) ನ 5ನೇ ವರ್ಷದ ವಾರ್ಷಿಕೋತ್ಸವ ಸಮಾರಂಭ ಹಾಗೂ ಸಂಸ್ಥಾಪಕ ಅಧ್ಯಕ್ಷ ಪೋತುಲ ಶ್ರೀನಿವಾಸ್ ಅವರ ಹುಟ್ಟು ಹಬ್ಬದ ನಿಮಿತ್ತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಇದೇ ವೇಳೆ ಅವಶ್ಯವಿರುವವರಿಗೆ ಪುಸ್ತಕಗಳನ್ನು ವಿತರಿಸುವ ಕಾರ್ಯಕ್ರಮವನ್ನು ಕೂಡ ಹಮ್ಮಿಕೊಳ್ಳಲಾಗಿತ್ತು.

ಸಾನಿಧ್ಯವನ್ನು ಆವದಗೊಳ್ಳ ಶ್ರೀ ಓಂಕಾರ ಶಿವಾಚಾರ್ಯ ಸ್ವಾಮೀಜಿ ವಹಿಸಿದ್ದು, ದೇವರು ಕೇವಲ ಗುಡಿ ಗೋಪುರಗಳಲ್ಲಿ ಇಲ್ಲ. ನಾವು ಮಾಡುವ ಒಳ್ಳೆ ಕೆಲಸದಲ್ಲೂ ಇದ್ದಾನೆ ಎಂದು ಮನವರಿಕೆ ಮಾಡಿಕೊಟ್ಟರು.

ರಾಷ್ಟ್ರೀಯ ಮಾನವ ಹಕ್ಕುಗಳ ತನಿಖಾ ಸಮಿತಿ, ಬೆಂಗಳೂರು ಇದರ ಸಂಸ್ಥಾಪಕ ಅಧ್ಯಕ್ಷ ಕೆ. ಸಂತೋಷ್ ಮಾತನಾಡಿ, ಮಾಡುವ ಕೆಲಸ ಕೇವಲ ಕೆಲಸವಾಗಿರಬಾರದು.

ಅದು ಮತ್ತೊಬ್ಬರಿಗೆ ಮಾದರಿಯಾಗಬೇಕು ಎಂದು ತಿಳಿಸಿದರು. ಲುಂಬಿನಿ ಪ್ಯಾರಾಮೆಡಿಕಲ್ ಕಾಲೇಜು ಕಾರ್ಯದರ್ಶಿ ಜಿ.ವಿ. ಗಂಗಾಧರ್ ಪೋತುಲ ಶ್ರೀನಿವಾಸ್ ಮತ್ತು ಮಾತೃದೇವೋ ಟ್ರಸ್ಟ್ ಸಲ್ಲಿಸಿರುವ ಸೇವೆಗಳ ಕುರಿತು ಮಾತನಾಡಿದರು.

ಹೆಚ್.ಜಿ. ಬಸವರಾಜ್, ಶರಣಪ್ಪ ಪೂಜಾರಿ ಹಾಗೂ ಸಂಸ್ಥಾಪಕ ಅಧ್ಯಕ್ಷ ಪೋತುಲ ಶ್ರೀನಿವಾಸ್ ಮಾತನಾಡಿದರು.




## ಪರಿತ್ಯಕ್ತ ಮಕ್ಕಳನ್ನು ಗುರುತಿಸಿ ಆಧಾರ್ ನೋಂದಣಿಗೆ 'ಸಾಥಿ' ಅಭಿಯಾನ : ನ್ಯಾ.ಸಂತೋಷ್ ಎಂ ಎಸ್

**ಶಿವಮೊಗ್ಗ:** ಸರ್ಕಾರಿ ಯೋಜನೆಗಳ ಸೌಲಭ್ಯವನ್ನು ನೀಡುವ ಉದ್ದೇಶಕ್ಕಾಗಿ ಪಾಲನೆ ಮತ್ತು ಸಂರಕ್ಷಣೆ ಬೇಕಾಗಿರುವ ಪರಿತ್ಯಕ್ತ ಮಕ್ಕಳು ಹಾಗೂ ಇನ್ನಿತರೆ ಕಾರಣಗಳಿಗೆ ಆಧಾರ್ ನೊಂದಣಿಯಾಗದ ಮಕ್ಕಳಿಗೆ ಆಧಾರ್ ನೋಂದಣಿ ಮಾಡಿಸಲು 'ಸಾಥಿ' ಅಭಿಯಾನ ಕೈಗೊಳ್ಳಲಾಗುತ್ತಿದ್ದು, ಇದರ ಸದುಪಯೋಗ ಪಡೆಯಬೇಕೆಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಸಂತೋಷ್ ಎಂ ಎಸ್ ತಿಳಿಸಿದರು.




ಪಾಲನೆ ಮತ್ತು ಸಂರಕ್ಷಣೆ ಬೇಕಾಗಿರುವ ಮಕ್ಕಳಿಗೆ ಆಧಾರ್ ನೋಂದಣಿ, ಸರ್ಕಾರಿ ಯೋಜನೆಗಳ ಸೇರ್ಪಡೆ ಮತ್ತು ಟ್ರಾ ಕಿಂಗ್‌ಗಾಗಿ 'ಸಾಥಿ' ಅಭಿಯಾನದ ಅಂಗವಾಗಿ ಸಮಿತಿ ಸದಸ್ಯರುಗಳಿಗೆ ಸೋಮವಾರ ಕೋರ್ಟ್ ಸಭಾಂಗಣದಲ್ಲಿ ಏರ್ಪಡಿಸಿದ್ದ ತರಬೇತಿ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರವು ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರಕ್ಕೆ ಸೂಚನೆ ನೀಡಿರುವನ್ವಯ ತಂದೆ–ತಾಯಿ ಇಲ್ಲದಿರುವ ಪರಿತ್ಯಕ್ತ ಮಕ್ಕಳು, ವಲಸೆ ಇನ್ನಾವುದೇ ಕಾರಣಗಳಿಂದ ಆಧಾರ್ ಹೊಂದಿರದ ಮಕ್ಕಳನ್ನು ಗುರುತಿಸಿ ಆಧಾರ್ ಕಾರ್ಡ್ ನೀಡಲು 'ಸಾಥಿ' (ಸರ್ವೆ ಆಫ್ ಆಧಾರ್ ಆಂಡ್ ಆಕ್ಸಸ್ ಟು ಟ್ರಾ ಕಿಂಗ್ & ಹೊಲಿಸ್ಟಿಕ್ ಇನ್ಕ್ಲು ಷನ್) ಅಭಿಯಾನವನ್ನು ಕೈಗೊಳ್ಳಲಾಗುತ್ತಿದೆ. ಪರಿತ್ಯಕ್ತ ಮಕ್ಕಳಿಗೆ ಕಾನೂನು ಗುರುತು ಮತ್ತು ಸರ್ಕಾರದ ಸೌಲಭ್ಯಗಳನ್ನು ಒದಗಿಸುವುದು ಈ ಅಭಿಯಾನದ ಮುಖ್ಯ ಉದ್ದೇಶವಾಗಿದೆ.

ಆದ್ದರಿಂದ ಜಿಲ್ಲೆಯಲ್ಲಿ ಪರಿತ್ಯಕ್ತ, ವಲಸೆ, ಹಾಗೂ ಇನ್ನಿತರೆ ಕಾರಣಗಳಿಂದ ಆಧಾರ್ ನೋಂದಣಿಯಾಗದ ಮಕ್ಕಳನ್ನು ಗುರುತಿಸಿ ನೋಂದಣಿ ಮಾಡಿಸಲಾಗುವುದು.

ಮಕ್ಕಳನ್ನು ಗುರುತಿಸಿ ಆಧಾರ್ ನೋಂದಣಿ ಮಾಡಿಸುವ ಕಾರ್ಯವನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಜಿಲ್ಲಾ ಮಟ್ಟದ ಸಾಥಿ ಸಮಿತಿಯನ್ನು ಸಹ ರಚಿಸಲಾಗಿದ್ದು, ಅವರ ಪಾತ್ರಗಳನ್ನು ಈಗಾಗಲೇ ತಿಳಿಸಲಾಗಿದೆ.

ಆಶಾ ಮತ್ತು ಅಂಗನವಾಡಿ ಕಾರ್ಯಕರ್ತೆಯರ ಮೂಲಕ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ದಿ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಶಿಕ್ಷಣ ಇಲಾಖೆ, ಕಾರ್ಮಿಕ ಇಲಾಖೆ, ಪೊಲೀಸ್ ಇಲಾಖೆ, ಆರೋಗ್ಯ ಇಲಾಖೆ ಮೂಲಕ ಇಂತಹ ಮಕ್ಕಳನ್ನು ಗುರುತಿಸಲು ಸರ್ವೆ ನಡೆಸಲಾಗುವುದು. ಇದಕ್ಕೆ ಸಂಬಂಧಿಸಿದ ಪಾಲುದಾರ ಇಲಾಖೆಗಳು, ಎನ್‌ಜಿಓ ಗಳು ಸಹಕರಿಸಬೇಕು ಎಂದರು.

ಜೂನ್ 26 ರೊಳಗೆ ಆಧಾರ್ ಇಲ್ಲದ ಮಕ್ಕಳನ್ನು ಗುರುತಿಸಿ, ಜೂನ್ 27 ರಿಂದ ಆಗಸ್ಟ್ 05 ರವರೆಗೆ ಆಧಾರ್ ನೋಂದಣಿ ಮಾಡಿಸಬೇಕು. ಆ.09 ಕ್ಕೆ ಜಿಲ್ಲೆಯಿಂದ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರಕ್ಕೆ ನೋಂದಣಿ ಕುರಿತಾದ ವರದಿ ಸಲ್ಲಿಸಬೇಕು. ಹಾಗೂ ಆಗಸ್ಟ್ 15 ರಂದು ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರಕ್ಕೆ ವರದಿ ಮಾಡಲಿದೆ ಎಂದು ಅವರು ಮಾಹಿತಿ ನೀಡಿದರು.

ಜಿಲ್ಲೆಯಲ್ಲಿ ಯಾವುದೇ ಪರಿತ್ಯಕ್ತ ಮಕ್ಕಳು, ಹಾಗೂ ಇನ್ನಿತರೆ ಮಕ್ಕಳು ಆಧಾರ್ ನೋಂದಣಿಯಿಂದ ಹೊರಗುಳಿಯದಂತೆ ಅವರನ್ನು ಗುರುತಿಸಿ ಆಧಾರ್ ನೋಂದಣಿ ಮಾಡಿಸುವ ಮೂಲಕ ಈ ಸಾಥಿ ಅಭಿಯಾನವನ್ನು ಯಶಸ್ವಿಗೊಳಿಸಬೇಕೆಂದು ಅವರು ಮನವಿ ಮಾಡಿದರು.

ಸಭೆಯಲ್ಲಿ ಡಿಡಿಪಿಐ ಮಂಜುನಾಥ್, ಡಿವೈಎಸ್‌ಪಿ ಬಾಬು ಅಂಜನಪ್ಪ, ಜಿಲ್ಲಾಧಿಕಾರಿಗಳ ಕಚೇರಿ ಸಹಾಯಕ ಪ್ರದೀಪ್, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಮಂಜುನಾಥ್, ಜಿಲ್ಲಾ ಕುಟುಂಬ ಕಲ್ಯಾಣಾಧಿಕಾರಿ ಡಾ.ವೆಂಕಟೇಶ್, ಮಹಿಳಾ ಮತ್ತು ಮಕ್ಕಳ ಅಭಿವೃದ್ದಿ ಅಧಿಕಾರಿ ಶಶಿರೇಖಾ, ಸಿಡಬ್ಲು ಸಿ ಅಧ್ಯಕ್ಷ ತಾಜುದ್ದೀನ್ ಖಾನ್, ಆಧಾರ್ ಸಂಯೋಜಕರು, ಇತರೆ ಜಿಲ್ಲಾ ಮಟ್ಟದ ಅಧಿಕಾರಿಗಳು, ಪ್ಯಾನಲ್ ವಕೀಲರು ಸೇರಿದಂತೆ ಸಮಿತಿ ಸದಸ್ಯರು ಪಾಲ್ಗೊಂಡಿದ್ದರು

## ಮೌಲ್ಯಾಧಾರಿತ ಶಿಕ್ಷಣ ನೀಡುವುದು ಪೊಲೀಸ್ ಪಬ್ಲಿಕ್ ಶಾಲೆಯ ಗುರಿ –ಎಸ್ಪಿ ಉಮಾ ಪ್ರಶಾಂತ್

**ದಾವಣಗೆರೆ :** ಹರಿಹರ ತಾಲೂಕಿನ ಕೊಂಡಜ್ಜಿ ಗ್ರಾಮದ ಪೊಲೀಸ್ ಪಬ್ಲಿಕ್ ಶಾಲೆಯ ಪುನಾರಾರಂಭದ ಕಾರ್ಯಕ್ರಮ ಉದ್ಘಾಟಿಸಿದ ಜಿಲ್ಲೆಯ ಪೊಲೀಸ್ ವರಿಷ್ಠಾಧಿಕಾರಿಗಳಾದ ಶ್ರೀಮತಿ ಉಮಾ ಪ್ರಶಾಂತ್ ಐಪಿಎಸ್ ರವರು ಪೊಲೀಸ್ ಪಬ್ಲಿಕ್ ಶಾಲೆಯ ನಿರ್ಮಾಣದ ಉದ್ದೇಶಗಳನ್ನು ತಿಳಿಸುತ್ತಾ ಮಕ್ಕಳಲ್ಲಿ ಶಿಸ್ತು ಮೂಡಿಸುವುದು, ಮೌಲ್ಯಾಧಾರಿತ ಶಿಕ್ಷಣ ನೀಡುವ ಮೂಲಕ ಪ್ರತಿ ಮಗುವನ್ನು ವಿಶ್ವ ದರ್ಜೆ ಎತ್ತರಕ್ಕೆ ಬೆಳೆಸುವುದಾಗಿದೆ ಎಂದು ಹೇಳಿದರು. ನಮ್ಮ ಶಾಲೆಯ ಶಿಕ್ಷಕರು ಪ್ರತಿ ಮಗುವನ್ನು ವೈಯಕ್ತಿಕ ಕಾಳಜಿ ಮಾಡುವ ಮೂಲಕ ಮಕ್ಕಳ ಸಮಗ್ರ ಬೆಳವಣಿಗೆಗೆ ಶ್ರಮಿಸುತ್ತಿದ್ದಾರೆ ಎಂದು ಶ್ಲಾಘಿಸಿದರು. ಶಾಲೆಯ ಮಕ್ಕಳು ಶೈಕ್ಷಣಿಕ ಕ್ಷೇತ್ರವಲ್ಲದೆ ಕ್ರೀಡೆ, ವಿಜ್ಞಾನ ,ಸಾಮಾಜಿಕ ಕ್ಷೇತ್ರದಲ್ಲೂ ಮುಂಚೂಣಿಯಲ್ಲಿದ್ದಾರೆ ಎಂದು ಸಂತಸ ಪಟ್ಟರು.




ಶಾಲಾ ಮಕ್ಕಳು ಅತ್ಯಂತ ಉತ್ಸಾಹದಿಂದ ಮೊದಲ ದಿನದ ಸಂಭ್ರಮಕ್ಕೆ ಸಾಕ್ಷಿಂಯಾದರು. ಕಾರ್ಯಕ್ರಮದಲ್ಲಿ ಜಿಲ್ಲೆಯ ಡಿಎಆರ್ ಡಿವೈಎಸ್ಪಿ ಆದ ಪ್ರಕಾಶ್ ಪಿ ಬಿ ಹಾಗೂ ಶಾಲೆಯ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ಉಪಸ್ಥಿತರಿದ್ದರು.

## ಅವಧಿ ವಿಸ್ತರಣೆ

**ದಾವಣಗೆರೆ:** ದಾವಣಗೆರೆಯ ಕಲಾಕುಂಚ ಸಾಂಸ್ಕೃತಿಕ ಸಂಸ್ಥೆಯ ಆಶ್ರಯದಲ್ಲಿ ಪ್ರತೀ ವರ್ಷದಂತೆ ಈ ವರ್ಷವೂ 2024–25ನೇ ಸಾಲಿನ ಶಿಕ್ಷಣ ಇಲಾಖೆಯ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಅತ್ಯುತ್ತಮ ಫಲಿತಾಂಶ ಪಡೆದ ವಿದ್ಯಾರ್ಥಿ–ವಿದ್ಯಾರ್ಥಿನಿಯರಿಗೆ ವಿವಿಧ ಪ್ರಶಸ್ತಿ ಪ್ರದಾನ ಮಾಡಲಾಗುವುದು ಎಂದು ಸಂಸ್ಥೆಯ ಅಧ್ಯಕ್ಷರಾದ ಕೆ.ಹೆಚ್.ಮಂಜುನಾಥ್ ತಿಳಿಸಿದ್ದಾರೆ.

ಪ್ರಥಮ ಭಾಷೆ ಕನ್ನಡದಲ್ಲಿ 125 ಕ್ಕೆ 125 ಪರಿಪೂರ್ಣ ಅಂಕ ಪಡೆದ ಮಕ್ಕಳಿಗೆ ರಾಜ್ಯ ಮಟ್ಟದಲ್ಲಿ "ಕನ್ನಡ ಕೌಸ್ತುಭ" ರಾಜ್ಯ ಪ್ರಶಸ್ತಿ, ಕನ್ನಡದಲ್ಲಿ 125 ಕ್ಕೆ 120, 121, 122, 123, 124 ಅಂಕ ಪಡೆದ ಮಕ್ಕಳಿಗೆ "ಕನ್ನಡ ಕುವರ–ಕುವರಿ" ಜಿಲ್ಲಾ ಪ್ರಶಸ್ತಿ, ಒಟ್ಟು ಅಂಕ 625 ಕ್ಕೆ 600 ಕ್ಕೂ ಹೆಚ್ಚು ಅಂಕ ಪಡೆದ ಮಕ್ಕಳಿಗೆ "ಸರಸ್ವತಿ ಪುರಸ್ಕಾರ" ರಾಜ್ಯ ಪ್ರಶಸ್ತಿ ಸಿ.ಬಿ.ಎಸ್.ಸಿ. (ಸೆಂಟ್ರಲ್ ಸಿಲಿಬಸ್)ನಲ್ಲಿ ಒಟ್ಟು ಅಂಕ 500 ಕ್ಕೆ 480 ಕ್ಕೂ ಹೆಚ್ಚು ಅಂಕ ಪಡೆದ ಮಕ್ಕಳಿಗೆ "ಸರಸ್ವತಿ ಪುರಸ್ಕಾರ" ರಾಜ್ಯ ಪ್ರಶಸ್ತಿ ನೀಡಿ ಗೌರವಿಸಲಾಗುವುದು ಎಂದು ಸಂಸ್ಥೆಯ ಸಂಸ್ಥಾಪಕರಾದ ಸಾಲಿಗ್ರಾಮ ಗಣೇಶ್ ಶೆಣೈ ಪ್ರಕಟಿಸಿದ್ದಾರೆ.2025ನೆ ಜುಲೈ 19 ಶನಿವಾರ, 20 ಭಾನುವಾರ ದಾವಣಗೆರೆಯಲ್ಲಿ ನಡೆಯುವ ಈ ವಿಜೃಂಭಣೆಯ ಅಪರೂಪದ ಸಮಾರಂಭದಲ್ಲಿ ಮಕ್ಕಳನ್ನು ಮಂಗಳವಾದ್ಯದೊಂದಿಗೆ ಮೆರವಣಿಗೆಯಲ್ಲಿ ಪೂರ್ಣಕುಂಭ ಸ್ವಾಗತದೊಂದಿಗೆ ಬರಮಾಡಿ ಪ್ರತ್ಯೇಕ ಸಿಂಹಾಸನದಲ್ಲಿ ಕೂರಿಸಿ, ಮಕ್ಕಳ ತಂದೆ–ತಾಯಿ ಯೊಂದಿಗೆ ಕನ್ನಡ ತಿಲಕವಿಟ್ಟು, ಕನ್ನಡ ಕಂಕಣ ಕಟ್ಟಿ, ಕನ್ನಡಾರತಿ ಬೆಳಗಿ, ವೇದಿಕೆಯ ಮದುವೆ ಮಂಟಪದಲ್ಲಿ ಮಕ್ಕಳ ತಲೆ ಮೇಲೆ ಕಿರೀಟವಿಟ್ಟು ಅವರದೇ ಭಾವಚಿತ್ರ ವಿರುವ ಅವರ ತಂದೆ–ತಾಯಿ ಹೆಸರಿನೊಂದಿಗೆ ಸನ್ಮಾನಪತ್ರ, ಕನ್ನಡ ತಾಯಿ ಭುವನೇಶ್ವರಿ ಸ್ಮರಣಿಕೆ, ಚಿನ್ನದ ಲೇಪನದ ಪದಕ ಕೊರಳಿಗೆ ಹಾಕಿ ಪುಷ್ಪವೃಷ್ಟಿಯೊಂದಿಗೆ ನಾಡಿನ ಗಣ್ಯಮಾನ್ಯರ ಅಮೃತ ಹಸ್ತದಲ್ಲಿ ಸನ್ಮಾನಿಸಿ ಗೌರವಿಸಲಾಗುವುದು. ಪ್ರಶಸ್ತಿಗೆ ಅರ್ಜಿ ಸಲ್ಲಿಸುವ ಅವಧಿ ವಿಸ್ತರಿಸಲಾಗಿದೆ. ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ 20–06–2025

## ವಿದುಷಿ ಬಿ. ಮಂಗಳಾ ಶೇಖರ್‌ಗೆ ಪಿಹೆಚ್ ಡಿ ಪ್ರದಾನ



**ದಾವಣಗೆರೆ:** ಭರತಾಂಜಲಿ ಅಕಾಡೆಮಿ ಫಾರ್ ಪರ್‌ಫಾರ್ಮಿಂಗ್ ಆರ್ಟ್ ಸಂಸ್ಥೆಯ ನಿರ್ದೇಶಕರು ಹಾಗೂ ನೃತ್ಯ ಶಿಕ್ಷಕರಾದ ವಿದುಷಿ ಬಿ. ಮಂಗಳಾ ಶೇಖರ್ ಅವರ ಸಂಶೋಧನಾ ಪ್ರಬಂಧ 'ಆಂಗಿಕ ಅಭಿನಯದ ಸಮಗ್ರ ಆರೋಗ್ಯದ ಮೇಲೆ ಅದರ ಪರಿಣಾಮವನ್ನು ಮಾನಸಿಕ ಶಕ್ತಿಗಳ ವಿಶೇಷ ಉಲ್ಲೇಖದೊಂದಿಗೆ ವಿಶೇಷವಾಗಿ ಸ್ಮರಣೆಯಮೇಲಿನ ಪರಿಣಾಮ' ಸಂಶೋಧನಾ ಪ್ರಬಂಧಕ್ಕೆ ಮೈಸೂರು ವಿಶ್ವವಿದ್ಯಾನಿಲಯ ಪಿಹೆಚ್ ಡಿ ಪ್ರದಾನ ಮಾಡಿದೆ.

ವಿದುಷಿ ಡಾ. ಶೀಲಾ ಹೆಚ್.ಕೆ. ಶ್ರೀಧರ್ ಇವರ ಮಾರ್ಗದರ್ಶನದಲ್ಲಿ ಮಂಗಳಾ ಶೇಖರ್ ಪ್ರಬಂಧ ಮಂಡಿಸಿದ್ದರು. ವೃತ್ತಿಯಲ್ಲಿ ವೈದ್ಯರು ಪ್ರವೃತ್ತಿಯಲ್ಲಿ ಭರತನಾಟ್ಯ ಕಲಾವಿದರಾದ ವಿದುಷಿ ಬಿ. ಮಂಗಳಾಶೇಖರ್ ಸುಮಾರು 25 ವರ್ಷಗಳಿಂದ ಕಲಾ ಸೇವೆಯಲ್ಲಿದ್ದಾರೆ. ಬಿ. ಮಂಗಳಾಶೇಖರ್ ಮೈಸೂರು ಆಯುರ್ವೇದ ಕಾಲೇಜಿನಿಂದ ಆಯುರ್ವೇದ ವೈದ್ಯಕೀಯ ಮತ್ತು ಶಸ್ತ್ರ ಚಿಕಿತ್ಸೆ ಪದವಿಯನ್ನು ಪಡೆದಿದ್ದಾರೆ.

# ಡಿಎಲ್‌ಎಫ್ ಸಂಸ್ಥೆಯ ಅಕ್ರಮ ಆಸ್ತಿ ವಶಕ್ಕೆ ರಮೇಶ್ ಆಗ್ರಹ

**ಬೆಂಗಳೂರು:** ಸಂಸದೆ ಪ್ರಿಯಾಂಕಾ ಗಾಂಧಿ ಅವರ ಪತಿ ರಾಬರ್ಟ್ ವಾದ್ರಾ ಪಾಲುದಾರಿಕೆಯ ಡಿಎಲ್‌ಎಫ್ ಸಂಸ್ಥೆ ಕಬಳಿಸಿರುವ 10,000 ಕೋಟಿ ಬೆಲೆಬಾಳುವ 1,100 ಎಕರೆ ಸರ್ಕಾರಿ ಸ್ವತ್ತನ್ನು ಮರು ವಶಕ್ಕೆ ಪಡೆಯಬೇಕು ಎಂದು ಬಿಜೆಪಿ ಮುಖಂಡ ಎನ್.ಆರ್.ರಮೇಶ್ ಜಿಲ್ಲಾಧಿಕಾರಿಗಳಿಗೆ ದೂರು ನೀಡಿದ್ದಾರೆ.

ಯಶವಂತಪುರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿರುವ ತಾವರೆಕೆರೆ ಹೋಬಳಿಯ ಗಂಗೇನಹಳ್ಳಿ, ವರ್ತೂರು, ವರ್ತೂರು ನರಸೀಪುರ ಮತ್ತು ಪೆದ್ದನಪಾಳ್ಯ ಗ್ರಾಮಗಳಲ್ಲಿರುವ ಸುಮಾರು 10,000 ಕೋಟಿ ಗಳಿಗೂ ಹೆಚ್ಚು ಮೌಲ್ಯದ 1,100 ಎಕರೆಗಳಷ್ಟು ವಿಸ್ತೀರ್ಣದ ಸರ್ಕಾರಿ ಸ್ವತ್ತುಗಳಿಗೆ ಮತ್ತು ದಾಖಲೆಗಳೇ ಇಲ್ಲದ ಸ್ವತ್ತುಗಳಿಗೆ ನಕಲಿ ದಾಖಲೆಗಳನ್ನು ಸೃಷ್ಟಿಸಿ ತಮ ತೆಕ್ಕೆಗೆ ತೆಗೆದುಕೊಳ್ಳಲು ಯಶಸ್ವಿ ಆಗಿದ್ದಾರೆ ಎಂದು ಅವರು ಆರೋಪಿಸಿದ್ದಾರೆ.

ಡಿಎಲ್‌ಎಫ್ ಸಂಸ್ಥೆ ಕಬಳಿಸಿರುವ 1,100 ಎಕರೆಗಳಷ್ಟು ವಿಸ್ತೀರ್ಣದ ಸ್ವತ್ತುಗಳ ಪೈಕಿ ಶೇ. 90ರಷ್ಟು ಸ್ವತ್ತುಗಳು ಸರ್ಕಾರಿ ಸ್ವತ್ತುಗಳಾಗಿವೆ.



ಉಳಿದ ಶೇ.10ರಷ್ಟು ಸ್ವತ್ತುಗಳಿಗೆ ಯಾವುದೇ ದಾಖಲೆಗಳು ಇಲ್ಲವೆಂಬುದು ಅತ್ಯಂತ ಸ್ಪಷ್ಟವಾಗಿದೆ. ತಿಪ್ಪಗೊಂಡನ ಹಳ್ಳಿ ಜಲಾಶಯವನ್ನು ಸೇರಿಕೊಳ್ಳುವ ಅರ್ಕಾವತಿ ನದಿ ಹರಿಯುತ್ತಿರುವ ಸಮೃದ್ಧ ಪ್ರದೇಶಗಳಾಗಿರುವ ಗಂಗೇನಹಳ್ಳಿ, ವರ್ತೂರು, ವರ್ತೂರು ನರಸೀಪುರ ಮತ್ತು ಪೆದ್ದನಪಾಳ್ಯ ಗ್ರಾಮಗಳ ವ್ಯಾಪ್ತಿಯ ಪ್ರದೇಶಗಳಿಗೆ ಮಾರುಕಟ್ಟೆಯಲ್ಲಿ ದೊಡ್ಡಮಟ್ಟದ ಬೆಲೆಯಿದೆ.

ಈ ಪ್ರದೇಶಗಳಲ್ಲಿನ ನೆಲದ ಬೆಲೆ ಚದರ ಅಡಿಯೊಂದಕ್ಕೆ ಕೇವಲ 2,100/- ಎಂದೇ ಲೆಕ್ಕ ಹಾಕಿದರೂ ಸಹ ಎಕರೆಯೊಂದಕ್ಕೆ 9,14,76,000 ಗಳಾಗುತ್ತದೆ. ಒಟ್ಟು 1,110 ಎಕರೆ ವಿಸ್ತೀರ್ಣದ ಪ್ರದೇಶಕ್ಕೆ ಸುಮಾರು 10,153,83,60,000 ಗಳಾಷ್ಟಾಗುತ್ತದೆ ಎಂದು ಅವರು ಮಾಹಿತಿ ನೀಡಿದ್ದಾರೆ.

ಸ್ಥಳೀಯ ಗ್ರಾಮಸ್ಥರಲ್ಲದ ಜನರಿಗೆ ಮತ್ತು ಆಯಾ ಗ್ರಾಮಗಳ ಸರ್ಕಾರಿ ಜಮೀನುಗಳಲ್ಲಿ ವ್ಯವಸಾಯ ಮಾಡುವ ಬಗ್ಗೆ ಸಾಗುವಳಿ ಚೀಟಿ ಹೊಂದಿಲ್ಲದ ಜನರಿಗೆ ಯಾವುದೇ ಕಾರಣಕ್ಕೂ ಸರ್ಕಾರೀ ಜಮೀನುಗಳನ್ನು ಹಂಚಿಕೆ ಮಾಡಬಾರದು ಎಂಬ ನಿಯಮವಿದ್ದರೂ ಈ ನಾಲ್ಕು ಗ್ರಾಮಗಳ ಸರ್ಕಾರಿ ಜಮೀನುಗಳನ್ನು ಉತ್ತರ ಭಾರತೀಯರಿಗೆ ನೀಡಲಾಗಿದೆ.

ಈ ಎಲ್ಲರೂ ಡಿಎಲ್‌ಎಫ್ ಸಂಸ್ಥೆಯ ನಿರ್ದೇಶಕರು ಮತ್ತು ಸದಸ್ಯರುಗಳಾಗಿರುವುದೂ ಸಹ ಧೃಢಪಡುತ್ತದೆ. ಇವರುಗಳಲ್ಲದೇ, ತಮ ತಾಳಕ್ಕೆ ತಕ್ಕಂತೆ ಕುಣಿಯುವ ಕೆಲವು ಸ್ಥಳೀಯರ ಹೆಸರುಗಳಲ್ಲಿಯೂ ಸಹ ನಕಲಿ ದಾಖಲೆಗಳನ್ನು ಸಂಸ್ಥೆಯವರು ಮಾಡಿಸಿದ್ದಾರೆ. 2013 ರಿಂದ 2018 ರ ಅವಧಿಯಲ್ಲಿ ಕಾರ್ಯ ನಿರ್ವಹಿಸಿರುವ ಬೆಂಗಳೂರು ನಗರ ಜಿಲ್ಲೆಯ ಜಿಲ್ಲಾಧಿಕಾರಿಗಳು, ಅಪರ ಜಿಲ್ಲಾಧಿಕಾರಿಗಳು, ಬೆಂಗಳೂರು ದಕ್ಷಿಣ ತಾಲ್ಲೂಕು ತಹಸೀಲ್ದಾರ್‌ಗಳು, ಉಪ ತಹಸೀಲ್ದಾರ್‌ಗಳು, ಕಂದಾಯ ಅಧಿಕಾರಿಗಳು ಮತ್ತು ಗ್ರಾಮ ಲೆಕ್ಕಿಗರು ಡಿಎಲ್‌ಎಫ್ ಸಂಸ್ಥೆಗೆ ಖಾತಾಗಳನ್ನು ಮಾಡಿಕೊಟ್ಟಿದ್ದಾರೆ.

ಇದೀಗ ಸಂಸ್ಥೆಯವರು ನ್ಯಾಯಾಲಯದ ಮೂಲಕ ಪ್ರತಿವಾದಿಗಳಿಲ್ಲದ ಸನ್ನಿವೇಶವನ್ನು ಸೃಷ್ಟಿಸಿ, ಇಡೀ ಸ್ವತ್ತಿಗೆ ಆದೇಶವನ್ನು ಪಡೆದುಕೊಳ್ಳಲು ದೊಡ್ಡ ಸಂಚನ್ನು ರೂಪಿಸಿದೆ. ಹೀಗಾಗಿ ಜಿಲ್ಲಾಡಳಿತ ಕೂಡಲೆ ಅಗತ್ಯ ಕ್ರಮ ಕೈಗೊಳ್ಳುವಂತೆ ರಮೇಶ್ ಮನವಿ ಮಾಡಿಕೊಂಡಿದ್ದಾರೆ.

ನಕಲಿ ದಾಖಲೆಗಳನ್ನು ಸೃಷ್ಟಿಸಿ 10,000 ಕೋಟಿ ರೂ. ಗಳಿಗಿಂತಲೂ ಹೆಚ್ಚು ಬೆಲೆಬಾಳುವ 1,100 ಎಕರೆಗಳಷ್ಟು ಸರ್ಕಾರಿ ಸ್ವತ್ತುಗಳನ್ನು ಕಬಳಿಸಿರುವ ರಾಬರ್ಟ್ ವಾದ್ರಾ ಸೇರಿದಂತೆ ಸಂಸ್ಥೆಯ ಮುಖ್ಯಸ್ಥರು, ನಿರ್ದೇಶಕರು, ಸದಸ್ಯರು ಮತ್ತು ಪಾಲುದಾರರು ಹಾಗೂ ಅಕ್ರಮಕ್ಕೆ ಸಹಕರಿಸಿರುವ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಂಡು ಅಮೂಲ್ಯ ಸರ್ಕಾರಿ ಸ್ವತ್ತುಗಳನ್ನು ಸರ್ಕಾರೀ ನೆಲಗಳ್ಳರಿಂದ ರಕ್ಷಿಸಬೇಕು ಎಂದು ಜಿಲ್ಲಾಧಿಕಾರಿಗಳಿಗೆ 487 ಪುಟಗಳ ಸಂಪೂರ್ಣ ದಾಖಲೆಗಳನ್ನು ನೀಡಿದ್ದಾರೆ.

# ಉಳುಮೆ ಮಾಡುವಾಗ ಟ್ರಾಕ್ಟರ್ ಉರುಳಿ ರೈತ ಸಾವು



**ದೊಡ್ಡಬಳ್ಳಾಪುರ :** ಜಮೀನು ಉಳುಮೆ ಮಾಡುವ ವೇಳೆ ನಿಯಂತ್ರಣ ಕಳೆದುಕೊಂಡ ಟ್ರ್ಯಾಕ್ಟರ್ ಪಲ್ಟಿಯಾಗಿ ರೈತ ಸ್ಥಳದಲ್ಲಿಯೇ ಸಾವನ್ನಪ್ಪಿರುವ ದುರ್ಘಟನೆ ತಾಲೂಕಿನ ಚೆನ್ನಾಪುರ ಬಳಿ ನಡೆದಿದೆ.

ಮೃತರನ್ನು ಚೆನ್ನಾಪುರ ಗ್ರಾಮದ ನಿವಾಸಿ (50) ವರ್ಷದ ಚಂದ್ರಪ್ಪ (ಹೈಟೆಕ್ ಚಂದ್ರು) ಎಂದು ಗುರುತಿಸಲಾಗಿದೆ. ನಿನ್ನೆ ಬೆಳಿಗ್ಗೆ ತನ್ನ ಸ್ವಂತ ಜಮೀನಿನಲ್ಲಿ ಉಳುಮೆ ಮಾಡುವಾಗ ಬದುವಿನ ಇಳಿಜಾರಿಗೆ ಇಳಿದ ಟ್ರ್ಯಾಕ್ಟರ್ ಚಕ್ರ ಜಾರಿದ ಪರಿಣಾಮ ನಿಯಂತ್ರಣ ಕಳೆದುಕೊಂಡು ಟ್ರ್ಯಾಕ್ಟರ್ ಪಲ್ಟಿಯಾಗಿದೆ.

ಘಟನೆಯಲ್ಲಿ ಚಂದ್ರಪ್ಪ ಟ್ರ್ಯಾಕ್ಟರ್ ಕೆಳಗೆ ಸಿಲುಕಿ ಸ್ಥಳದಲ್ಲಿಯೇ ಸಾವನಪ್ಪಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.ಘಟನಾ ಸ್ಥಳಕ್ಕೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ದೊಡ್ಡಬಳ್ಳಾಪುರ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಡಿ.ಎ.ಸಿ.ಜಿ. ಪಾಲಿಟೆಕ್ನಿಕ್‌ಗೆ ಮೇ 30ರಂದು ಪ್ರವೇಶ

**ಚಿಕ್ಕಮಗಳೂರು, ಮೇ 28:** ಎಸ್‌ಎಸ್‌ಎಲ್‌ಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಪಾಸಾದ ಅರ್ಹ ಅಭ್ಯರ್ಥಿಗಳಿಗೆ ನಗರದ ಡಿ.ಎ.ಸಿ.ಜಿ. ಸರ್ಕಾರಿ ಪಾಲಿಟೆಕ್ನಿಕ್‌ನಲ್ಲಿ 2025-26ನೇ ಸಾಲಿಗೆ ಮೊದಲನೆ ಸೆಮಿಸ್ಟರ್ ಡಿಪ್ಲೊಮಾಗೆ ಆನ್‌ಲೈನ್‌ನಲ್ಲಿ ಆಯ್ಕೆಯಾದ ಅಭ್ಯರ್ಥಿಗಳಿಗೆ ಮೇ 30 ರಂದು ಪ್ರವೇಶ ನೀಡಲಾಗುವುದು. ಭರ್ತಿಯಾಗೆ ಉಳಿದ ಸೀಟುಗಳನ್ನು ಪ್ರಾಂಶುಪಾಲರ ಹಂತದಲ್ಲಿ ಮೇ 30 ರ ನಂತರದಲ್ಲಿ ಆಫ್‌ಲೈನ್ ಮೂಲಕ ಮೆರಿಟ್ ಮತ್ತು ರೋಸ್ಟರ್‌ಗನುಗುಣವಾಗಿ ಭರ್ತಿ ಮಾಡಲಾಗುವುದು. ಆಸಕ್ತರು ಅರ್ಜಿಯನ್ನು ನಿಗದಿತ ದಾಖಲೆಗಳೊಂದಿಗೆ ಸಲ್ಲಿಸಬಹುದು ಎಂದು ಸಂಸ್ಥೆಯ ಪ್ರಾಚಾರ್ಯರು ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗೆ ದೂರವಾಣಿ ಮೂಲಕ (9886489678 ಅಥವಾ 9620158708) ಸಂಪರ್ಕಿಸಬಹುದು ಎಂದು ಸಂಸ್ಥೆಯ ಪ್ರಾಚಾರ್ಯರು ತಿಳಿಸಿದ್ದಾರೆ.

# ರಂಗಚಟುವಟಿಕೆಗಾಗಿ ಸುಸಜ್ಜಿತ ಕನ್ನಡ ಭವನ ನಿರ್ಮಾಣ : ಎಂ.ಸಿ.ಸುಧಾಕರ್

**ಚಿಕ್ಕಬಳ್ಳಾಪುರ:** 'ಸರ್ಕಾರಿ ಕಾರ್ಯಕ್ರಮಗಳು ಸೇರಿದಂತೆ ಸಾಂಸ್ಕೃತಿಕ ರಂಗಚಟುವಟಿಕೆಗಳಿಗೆ ಹೆಚ್ಚು ಉಪಯೋಗವಾಗಲಿ ಎಂಬ ಕಾರಣಕ್ಕೆ ಜಿಲ್ಲೆಯ ಜಿಲ್ಲಾ ಕೇಂದ್ರದಲ್ಲಿ 18.20 ಕೋಟಿ ರೂ. ವೆಚ್ಚದಲ್ಲಿ ಸುಂದರ ಹಾಗೂ ಭವ್ಯ ಕನ್ನಡ ಭವನ ನಿರ್ಮಾಣ ಮಾಡಲಾಗಿದೆ' ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಸಿ.ಸುಧಾಕರ್ ಹೇಳಿದರು.

ನಗರದ ಬಿಬಿ ರಸ್ತೆಯಲ್ಲಿ ನೂತನವಾಗಿ ನಿರ್ಮಾಣಗೊಂಡಿರುವ ಕನ್ನಡ ಭವನ ಉದ್ಘಾಟಿಸಿ ಮಾತನಾಡಿದ ಅವರು, 'ಮಾಜಿ ಮುಖ್ಯಮಂತ್ರಿ ಹಾಗೂ ಕೇಂದ್ರದ ಮಾಜಿ ಸಚಿವ ಡಾ.ಎಂ.ವೀರಪ್ಪಮೊಯಿಲಿ ಅವರ ಕಾಲದಲ್ಲಿ ಭವನ ನಿರ್ಮಾಣಕ್ಕೆ ಭೂಮಿ ಪೂಜೆ ಮಾಡಲಾಗಿತ್ತು. ಆದರೆ ಅನುದಾನದ ಕೊರತೆಯಿಂದ ಕಾಮಗಾರಿ ಮಂದಗತಿಯಲ್ಲಿ ಸಾಗಿತ್ತು ಕೊನೆಗೆ ಸಚಿವ ಸಂಪುಟ ಸಭೆಯಲ್ಲಿ ಚರ್ಚಿಸಿ ಪರಿಷ್ಕರಣೆ ಮಾಡಿ ಅನುದಾನ ಒದಗಿಸಿ ಜಿಲ್ಲೆಗೆ ಅಗತ್ಯವಾಗಿದ್ದ ಕನ್ನಡ ಭವನ ಈಗ ಲೋಕಾರ್ಪಣೆ ಆಗಿದೆ' ಎಂದು ತಿಳಿಸಿದರು.

ಇನ್ನು ಸಾವಿರಾರು ವರ್ಷಗಳ ಇತಿಹಾಸವಿರುವ ಕನ್ನಡ ಭಾಷೆ ಜಗತ್ತಿನ 6,500 ಭಾಷೆಗಳ ಪೈಕಿ 27 ನೇ ಸ್ಥಾನದಲ್ಲಿದ್ದು, ಅತ್ಯಂತ



ವೈವಿಧ್ಯಮಯ ಭಾಷೆಯಾಗಿದೆ . ಸಾವಿರಾರು ವರ್ಷಗಳ ಇತಿಹಾಸವಿರುವ ಕನ್ನಡ ಭಾಷೆ ಮತ್ತು ಸಾಹಿತ್ಯ ಅತ್ಯಂತ ಶ್ರೀಮಂತ ಪರಂಪರೆಯನ್ನು ಹೊಂದಿದೆ. ಸಮನ್ವಯತೆಯ ಗುಣವನ್ನು ಹೊಂದಿರುವ ಕನ್ನಡ ಭಾಷೆ ಮತ್ತು ಸಾಹಿತ್ಯ ಜನಪರ ಕಾಳಜಿಯನ್ನು ಮೆರೆದಿದೆ' ಎಂದು ಹೇಳಿದರು.

'ಭೂಸಿರಿವಲಯ ಖ್ಯಾತಿಯ ಕುಮುದೇಂದು, ಗೂಳೂರು ನಿಡುಮಾಮಿಡಿ ಮಠದ ಡಾ.ಜಚನಿ ಮಹಾಸ್ವಾಮಿಗಳು, ಶಿಕ್ಷಣ ತಜ್ಞ ಡಾ. ಎಚ್.ನರಸಿಂಹಯ್ಯ ಖ್ಯಾತ ನಿರ್ದೇಶಕ ಟಿ.ಎನ್.ಸೀತಾರಾಂ, ಹಿರಿಯ ಕವಿ ಬಿ.ಆರ್.ಲಕ್ಷ್ಮಣರಾವ್ ಸೇರಿದಂತೆ ಹಲವು ಸಾಹಿತಿಗಳ ದೊಡ್ಡ ಪರಂಪರೆಯ ಹೆಮೆ ಚಿಕ್ಕಬಳ್ಳಾಪುರ ಜಿಲ್ಲೆಗಿದ್ದು, ಅತ್ಯಾಧುನಿಕ ಸೌಕರ್ಯಗಳೊಂದಿಗೆ ಸುಸಜ್ಜಿತವಾಗಿ ನಿರ್ಮಾಣವಾಗಿರುವ ಕನ್ನಡ ಭವನ ಆಂಧ್ರದ ಗಡಿಭಾಗದಲ್ಲಿ ಹತ್ತು ಹಲವು ಕನ್ನಡ ಕಾರ್ಯಕ್ರಮಗಳ ಮೂಲಕ ಕನ್ನಡದ ಕಂಪನ್ನು ಪಸರಿಸಲು ಸಹಕಾರಿಯಾಗಲಿದೆ' ಎಂದು ತಿಳಿಸಿದರು.

ಮಾಜಿ ಮುಖ್ಯಮಂತ್ರಿ ಡಾ.ಎಂ.ವೀರಪ್ಪಮೊಯ್ಲಿ ಮಾತನಾಡಿ, 'ಕನ್ನಡ ಭಾಷೆ ಮತ್ತು ಸಾಹಿತ್ಯದ ವಿಚಾರದಲ್ಲಿ ಚಿಕ್ಕಬಳ್ಳಾಪುರ ಜಿಲ್ಲೆ ತನ್ನದೇ ಆದ ವಿಶಿಷ್ಟತೆಯನ್ನು ಹೊಂದಿದೆ. ಅನೇಕ ಕವಿಗಳು ಈ ಜಿಲ್ಲೆಯಲ್ಲಿ ಜನಿಸಿದ್ದಾರೆ. ಸಾಹಿತ್ಯ ಸಮ್ಮೇಳನಗಳು ಸಮಕಾಲೀನ ಸಮಸ್ಯೆಗಳ ಪರಿಹಾರಕ್ಕೆ ಮುಖಾಮುಖಿಯಾಗಬೇಕು. ಸಮ್ಮೇಳನಗಳು ಕೇವಲ ಯಾಂತ್ರಿಕ ಕಾರ್ಯಕ್ರಮಗಳಾಗದೆ ಜನಸಾಮಾನ್ಯರನ್ನು ಪ್ರೇರೇಪಿಸುವಂತ ಹಾಗೂ ಸಮಾಜದ ಮೇಲೆ ಪರಿಣಾಮ ಬೀರುವಂತಹ ಕಾರ್ಯಕ್ರಮಗಳಾಗಬೇಕು. ಎರಡು ಸಾವಿರ ವರ್ಷಗಳಿಗೂ ಹೆಚ್ಚಿನ ಇತಿಹಾಸ ಹೊಂದಿರುವ ಕನ್ನಡ ಭಾಷೆ ಮತ್ತು ಸಾಹಿತ್ಯ ಮುಂದಿನ ಪೀಳಿಗೆಗೂ ತಲುಪಬೇಕು' ಎಂದು ಹೇಳಿದರು.

'ಜಿಲ್ಲೆಯ ಗೌರಿಬಿದನೂರು ತಾಲ್ಲೂಕಿನಲ್ಲಿ ಜನಿಸಿದ ವಿಚಾರವಾದಿ, ಶಿಕ್ಷಣ ತಜ್ಞ ಡಾ.ಎಚ್.ನರಸಿಂಹಯ್ಯ ಅವರು ಜನರನ್ನು ಮೌಢ್ಯಗಳ ಕಡೆಗೆ ಹೋಗದಂತೆ ಎಚ್ಚರಿಸಿದರು. ಅವರ ಚಿಂತನೆ, ತತ್ವ ಆಶಯಗಳನ್ನು ಮುಂದುವರೆಸಲು ಸರ್ಕಾರ ಡಾ.ಎಚ್.ಎನ್.ಅವರ ಹೆಸರಿನಲ್ಲಿ ಪ್ರಾಧಿಕಾರವೊಂದನ್ನು ರಚಿಸಿದೆ' ಎಂದು ಹೇಳಿದರು. ಈ ಸಂದರ್ಭದಲ್ಲಿ ಸಮ್ಮೇಳನದ ಅಧ್ಯಕ್ಷ ಗೋಪಾಲಗೌಡ ಕಲ್ವಮಂಜಲಿ, ಶಾಸಕ ಪ್ರದೀಪ್ ಈಶ್ವರ್ ಮತ್ತಿತರ ಗಣ್ಯರು,ಸಾಹಿತಿಗಳು ಹಾಜರಿದ್ದರು.

# ಕೋವಿಡ್-19 ಜನರು ಆತಂಕಪಡುವ ಅಗತ್ಯವಿಲ್ಲ, ಮುನ್ನೆಚ್ಚರಿಕೆ ವಹಿಸಿ : ಜಿಲ್ಲಾಧಿಕಾರಿ

**ದಾವಣಗೆರೆ :** ಕಳೆದ 1 ತಿಂಗಳಿನಿಂದ ರಾಜ್ಯದಲ್ಲಿ ಕೋವಿಡ್ ಪ್ರಕರಣಗಳು ಹೆಚ್ಚಿನ ಸಂಖ್ಯೆಯಲ್ಲಿ ವರದಿಯಾಗುತ್ತಿದ್ದು, ಜಿಲ್ಲೆಯ ಸಾರ್ವಜನಿಕರು ಯಾವುದೇ ಆತಂಕ ಪಡುವ ಅಗತ್ಯವಿರುವುದಿಲ್ಲ.

ಇದು ಸೌಮ್ಯ ಸ್ವಭಾವದ ಸೋಂಕು ಆಗಿರುತ್ತದೆ ಎಂದು ತಜ್ಞರು ಅಭಿಪ್ರಾಯ ಪಟ್ಟಿರುತ್ತಾರೆ. ಆದುದರಿಂದೆ ಮುಂಜಾಗ್ರತಾ ಕ್ರಮವಾಗಿ ಜಿಲ್ಲಾ ಆಸ್ಪತ್ರೆ ಮತ್ತು ತಾಲ್ಲೂಕು ಸಾರ್ವಜನಿಕ ಆಸ್ಪತ್ರೆಗಳಲ್ಲಿ ಬೆಡ್ ಹಾಗೂ ಆಕ್ಸಿಜನ್ ವ್ಯವಸ್ಥೆ, ಅತ್ಯವಶ್ಯಕ ಔಷಧಿಗಳು, ಐ.ಸಿ.ಯು ಮುಂತಾದ ಎಲ್ಲಾ ವ್ಯವಸ್ಥೆಗಳನ್ನು ಮಾಡಿಕೊಳ್ಳಲಾಗಿದೆ. ಆಸ್ಪತ್ರೆಗಳಲ್ಲಿ ಒಳರೋಗಿಗಳಾಗಿ ಚಿಕಿತ್ಸೆ ಪಡೆಯುತ್ತಿರುವ ತೀವ್ರ ತರಹದ ಶ್ವಾಸಕೋಶದ ಸೋಂಕು ಇರುವ ರೋಗಿಗಳು, 60 ವರ್ಷ ಮೇಲ್ಪಟ್ಟ ಮತ್ತು ಇತರೆ ಧೀರ್ಘಕಾಲಿನ ಕಾಯಿಲೆಗಳು ಇರುವ ವ್ಯಕ್ತಿಗಳು 1 ವರ್ಷದ ಒಳಗಿನ ಮಕ್ಕಳು ಹಾಗೂ ಲಕ್ಷಣಗಳು ಇರುವ ಗರ್ಭಿಣಿಯರಿಗೆ ಕೋವಿಡ್ ಪರೀಕ್ಷೆ ಮಾಡಿಸಬೇಕು.

ಶೀತ, ಜ್ವರ, ಕೆಮ್ಮು ಈ ತರಹದ ಲಕ್ಷಣಗಳು ಇದ್ದಲ್ಲಿ ಜನದಟ್ಟಣೆ ಇರುವ ಪ್ರದೇಶಗಳಲ್ಲಿ ಮುಂಜಾಗ್ರತಾ ಕ್ರಮವಾಗಿ ಮಾಸ್ಕ್ ಧರಿಸಲು ಮತ್ತು ಕೂಡಲೇ ಸಮೀಪದ ಸರ್ಕಾರಿ ಆಸ್ಪತ್ರೆಗಳಿಗೆ ಭೇಟಿ ನೀಡಿ ಅಗತ್ಯ ತಪಾಸಣೆ ಮತ್ತು ಔಷಧೋಪಚಾರ ಪಡೆಯುವಂತೆ ಜಿಲ್ಲಾಧಿಕಾರಿ ಗಂಗಾಧರಸ್ವಾಮಿ.ಜಿ.ಎಂ ತಿಳಿಸಿದ್ದಾರೆ.

# ಕೋವಿಡ್ ಮುಂಜಾಗ್ರತೆ ಕ್ರಮಕೈಗೊಳ್ಳಿ

**ಚಿತ್ರದುರ್ಗ:** ರಾಜ್ಯದಲ್ಲಿ ಕರೋನಾ ವೈರಸ್ ಸೋಂಕಿತರ ಸಂಖ್ಯೆ ಹೆಚ್ಚಾಗುತ್ತಿದ್ದು, ಈ ಕುರಿತು ಸರ್ಕಾರದಿಂದ ಕಟ್ಟುನಿಟ್ಟಾಗಿ ಮಾರ್ಗಸೂಚಿ ಹೊರಡಿಸಿದ್ದು, ಕೋವಿಡ್ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳುವಂತೆ ಚಿತ್ರದುರ್ಗ ತಾಲ್ಲೂಕು ಪಂಚಾಯಿತಿ ಆಡಳಿತಾಧಿಕಾರಿ ಬಿ.ಆನಂದ್ ಆರೋಗ್ಯ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ಮಂಗಳವಾರ ನಡೆದ ಚಿತ್ರದುರ್ಗ ತಾಲ್ಲೂಕು ಪಂಚಾಯಿತಿಯ ಮೊದಲನೇ ಸಾಮಾನ್ಯ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಮುಂಗಾರು ಉತ್ತಮ ರೀತಿಯಲ್ಲಿ ಆಗಿದ್ದು, ರೈತರಿಗೆ ಯಾವುದೇ ತೊಂದರೆ ಆಗದಂತೆ ಉತ್ತಮ ಗುಣಮಟ್ಟದ ಬಿತ್ತನೆ ಬೀಜ ವಿತರಿಸಲು ಕೃಷಿ ಇಲಾಖೆ ವತಿಯಿಂದ ಅಗತ್ಯ ಕ್ರಮವಹಿಸಲು ತಿಳಿಸಿದರು.

ತೋಟಗಾರಿಕೆ ಇಲಾಖೆ, ರೇಷ್ಮೆ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಪಶುಪಾಲನಾ ಇಲಾಖೆ, ಶಿಕ್ಷಣ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳ ಪ್ರಗತಿ ಪರಿಶೀಲನೆ ನಡೆಸಿದರು.

ಸಭೆಯಲ್ಲಿ ಚಿತ್ರದುರ್ಗ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ವೈ.ರವಿಕುಮಾರ್, ಯೋಜನಾಧಿಕಾರಿ ರಾಘವೇಂದ್ರ, ಲೆಕ್ಕಾಧಿಕಾರಿ ಕೆಂಚಪ್ಪ ಸೇರಿದಂತೆ ವಿವಿಧ ಇಲಾಖೆಗಳ ತಾಲ್ಲೂಕು ಮಟ್ಟದ ಅಧಿಕಾರಿಗಳು ಇದ್ದರು.

# ಯುವಶಕ್ತಿಯಿಂದಲೇ ಇಂದು ದೇಶ ಎಲ್ಲಾ ಕ್ಷೇತ್ರಗಳಲ್ಲಿ ಬಲಗೊಳ್ಳುತ್ತಿದೆ

**ಚಿತ್ರದುರ್ಗ, ಮೇ. 29 :** ಯುವಕರು ರಾಷ್ಟ್ರದ ನಿರ್ಮಾತೃಗಳಾಗಿ ಬೆಳೆಯಲು ಸಕಾರಾತ್ಮಕ ದಿಕ್ಕಿನಲ್ಲಿ ಶಿಕ್ಷಣ ಪಡೆಯುವುದು ಅವಶ್ಯಕ. ಕಾಲಕಾಲಕ್ಕೆ ವೈದ್ಯಕೀಯ, ಶಿಕ್ಷಣ, ತಂತ್ರಜ್ಞಾನ, ತಂತ್ರಜ್ಞಾನ ಮುಂತಾದ ಹಲವು ಕ್ಷೇತ್ರಗಳಲ್ಲಿ ಯುವಕರು ತಮ್ಮ ಪಾತ್ರವನ್ನು ಖಾತ್ರಿಪಡಿಸಿಕೊಳ್ಳುತ್ತಿದ್ದಾರೆ. ಯುವಶಕ್ತಿಯ ಕಾರಣದಿಂದಲೇ ಇಂದು ದೇಶ ಈ ಎಲ್ಲ ಕ್ಷೇತ್ರಗಳಲ್ಲಿ ಬಲಗೊಳ್ಳುತ್ತಿದೆ ಎಂದು ಪ್ರಾಚಾರ್ಯರಾದ ಡಾ. ಎಲ್. ಈಶ್ವರಪ್ಪ ಹೇಳಿದರು.

ನಗರದ ಎಸ್.ಜೆ.ಎಂ. ಕಲಾ ಮತ್ತು ವಾಣಿಜ್ಯ ಮಹಾವಿದ್ಯಾಲಯದಲ್ಲಿ ನಡೆದ ಸಮೂಹ ಮಾಧ್ಯಮಗಳು ವ್ಯಕ್ತಿತ್ವ ವಿಕಸನಕ್ಕೆ ಪೂರಕವೋ ಮಾರಕವೋ ವಿಷಯ ಕುರಿತ ಚರ್ಚಾ ಸ್ಪರ್ಧೆ ಮತ್ತು ದೇಶದ ಅಭಿವೃದ್ಧಿಯಲ್ಲಿ ಯುವಕರ ಪಾತ್ರ ಕುರಿತ ಪ್ರಬಂಧ ಸ್ಪರ್ಧೆಯ ಉದ್ಘಾಟನಾ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಯಾವುದೇ ದೇಶದ ಯುವಕರು ಆ ದೇಶದ ಭವಿಷ್ಯವನ್ನು ನಿರ್ಧರಿಸುತ್ತಾರೆ. ಯುವಕರ ಸಂಖ್ಯೆ ಕೇವಲ 30 ರಿಂದ 40 ಪ್ರತಿಶತದಷ್ಟಿದ್ದರೂ, ರಾಷ್ಟ್ರದ



ಪ್ರಗತಿಯಲ್ಲಿ ತಮ್ಮ 10 ಪ್ರತಿಶತವನ್ನು ನೀಡಿದರೆ ರಾಷ್ಟ್ರದ ಅಭಿವೃದ್ಧಿಯನ್ನು ಯಾರಿಂದಲೂ ತಡೆಯಲು ಸಾಧ್ಯವಿಲ್ಲ ಎಂದರು.

ಸಮೂಹ ಮಾಧ್ಯಮಗಳ ಪ್ರಾಥಮಿಕ ಕಾರ್ಯ ಸಾರ್ವಜನಿಕರಿಗೆ ತಿಳಿಸುವುದು ಮತ್ತು ಶಿಕ್ಷಣ ನೀಡುವುದಾಗಿದೆ. ವೃತ್ತಪತ್ರಿಕೆಗಳು, ದೂರದರ್ಶನ ಸುದ್ದಿಗಳು ಮತ್ತು ಆನ್ಲೈನ್ ಸುದ್ದಿ ಪೋರ್ಟಲ್‌ಗಳು ಸ್ಥಳೀಯ, ರಾಷ್ಟ್ರೀಯ ಮತ್ತು ಅಂತರರಾಷ್ಟ್ರೀಯ ಪ್ರಚಲಿತ ವಿದ್ಯಮಾನಗಳು, ರಾಜಕೀಯ ಬೆಳವಣಿಗೆಗಳು, ವೈಜ್ಞಾನಿಕ ಆವಿಷ್ಕಾರಗಳು ಮತ್ತು ಸಾಮಾಜಿಕ ಸಮಸ್ಯೆಗಳ ಬಗ್ಗೆ ನಾಗರಿಕರಿಗೆ ಮಾಹಿತಿ ಬಿತ್ತರಿಸುತ್ತವೆ. ಸಮೂಹ ಮಾಧ್ಯಮವು ಅನೇಕ ಸಕಾರಾತ್ಮಕ ಗುಣಲಕ್ಷಣಗಳನ್ನು ಹೊಂದಿದ್ದರೂ, ಅನೇಕ ಸವಾಲುಗಳನ್ನು ಸಹ ಎದುರಿಸುತ್ತದೆ. ಡಿಜಿಟಲ್ ಯುಗವು ನಕಲಿ ಸುದ್ದಿ ಮತ್ತು ತಪ್ಪು ಮಾಹಿತಿಗೆ ಕಾರಣವಾಗಿದೆ, ಇದು ಸಾರ್ವಜನಿಕ ಗ್ರಹಿಕೆ ಮತ್ತು ನಿರ್ಧಾರ ತೆಗೆದುಕೊಳ್ಳುವ ಮೇಲೆ ಹಾನಿಕಾರಕ ಪರಿಣಾಮಗಳನ್ನು ಉಂಟುಮಾಡುತ್ತದೆ ಎಂದರು.

ವಿದ್ಯಾರ್ಥಿಗಳು ಸ್ಪರ್ಧಾತ್ಮಕ ಭಾವನೆಗೆ ತಮ್ಮನ್ನು ಅರ್ಪಿಸಿಕೊಳ್ಳಬೇಕು. ಇದು ಸ್ಪರ್ಧಾ ಜಗತ್ತು. ಕೇವಲ ಪುಸ್ತಕದ ಪಠ್ಯಕ್ಕೆ ಮಾತ್ರ ಅಂಟಿಕೊಳ್ಳದೆ ಎಲ್ಲ ರಂಗದಲ್ಲೂ ಪ್ರಯೋಗಕ್ಕೆ ಒಳಗಾಗಬೇಕು. ಚರ್ಚಾ ಸ್ಪರ್ಧೆ ಮತ್ತು ಪ್ರಬಂಧ ಸ್ಪರ್ಧೆ ಕುರಿತ ವಿಷಯಗಳನ್ನು ಕುರಿತು ಸ್ಪಷ್ಟವಾಗಿ ಬರೆಯಿರಿ ಎಂದು ತಿಳಿಸಿದರು.

ಪ್ರಾಧ್ಯಾಪಕರುಗಳಾದ ಪ್ರೊ. ಪರಮೇಶ್ವರ, ಪ್ರೊ. ಜಿ.ಎನ್. ನಾಗರಾಜು, ಡಾ. ಸಿ.ಟಿ. ಜಯಣ್ಣ, ಆಯೋಜಕರಾದ ವಿಶ್ವನಾಥ್, ಟಿ.ಗಿರೀಶ್ ವೇದಿಕೆಯಲ್ಲಿದ್ದರು.

ಜಿಲ್ಲೆಯ ವಿವಿಧ ಕಾಲೇಜುಗಳ ವಿದ್ಯಾರ್ಥಿಗಳು ಚರ್ಚಾ ಸ್ಪರ್ಧೆ ಮತ್ತು ಪ್ರಬಂಧ ಸ್ಪರ್ಧೆಯಲ್ಲಿ ಭಾಗವಹಿಸಿದ್ದರು.

# ಭಯೋತ್ಪಾದಕರು ಎಲ್ಲಿಯೇ ಅಡಗಿ ಕುಳಿತಿರಲಿ ಬಗ್ಗು ಬಡಿಯುವಂತೆ ಕೇಂದ್ರಕ್ಕೆ ಯಾದವರೆಡ್ಡಿ ಆಗ್ರಹ

**ಚಿತ್ರದುರ್ಗ:** ಜಮ್ಮು-ಕಾಶ್ಮೀರದಲ್ಲಿ ಉಗ್ರಗಾಮಿಗಳು ಕಳೆದ ತಿಂಗಳು ಗುಂಡಿನ ದಾಳಿ ನಡೆಸಿ 26 ಅಮಾಯಕರುಗಳನ್ನು ಹತ್ಯೆಗೈದಿರುವುದು ಅತ್ಯಂತ ಖಂಡನಾರ್ಹ.

ಮಾನವ ಕುಲಕ್ಕೆ ಕಳಂಕ. ಭಯೋತ್ಪಾದಕರು ಎಲ್ಲಿಯೇ ಅಡಗಿ ಕುಳಿತಿರಲಿ ಪತ್ತೆ ಹಚ್ಚಿ ಬಗ್ಗು ಬಡಿಯುವಂತೆ ಎದ್ದೇಳು ಕರ್ನಾಟಕ ಸಂಘಟನೆಯ ಕೇಂದ್ರ ವರ್ಕಿಂಗ್ ಕಮಿಟಿ ಸದಸ್ಯ ಜೆ.ಯಾದವರೆಡ್ಡಿ ಕೇಂದ್ರ ಸರ್ಕಾರವನ್ನು ಆಗ್ರಹಿಸಿದರು.

ಪ್ರವಾಸಿ ಮಂದಿರದಲ್ಲಿ ಎದ್ದೇಳು ಕರ್ನಾಟಕ ಸಂಘಟನೆಯ ಪದಾಧಿಕಾರಿಗಳೊಂದಿಗೆ ಬುಧವಾರ ಸಭೆ ನಡೆಸಿ ಮಾತನಾಡಿದ ಅವರು ಕೇಂದ್ರ ಸರ್ಕಾರದ ಕ್ರಮಕ್ಕೆ ಎದ್ದೇಳು ಕರ್ನಾಟಕ ಸಂಪೂರ್ಣ ಬೆಂಬಲವಿದೆ. ಅಂತಹ ಅಮಾನವೀಯ ಘಟನೆ ಮತ್ತೆ ಮರುಕಳಿಸಬಾರದೆಂದರೆ ಉಗ್ರರ ತಂಗುದಾಣಗಳನ್ನು ಪತ್ತೆ ಹೆಚ್ಚಿ ಸರ್ವನಾಶ ಮಾಡಬೇಕು. ಭಯೋತ್ಪಾದಕರಲ್ಲಿ ಕೊಲ್ಲುವ ಮನಸ್ಥಿತಿ ಬಿಟ್ಟರೆ ಮಾನವೀಯತೆ ಅಂತಃಕರಣವಿರುವುದಿಲ್ಲ. ಮನಷ್ಯತ್ವ ಕಳೆದುಕೊಂಡಿರುತ್ತಾರೆ.

# ಕಂದಾಯ ಭೂಮಿ ಅರಣ್ಯಕ್ಕೆ ವರ್ಗಾಯಿಸದಿರಲು ಒತ್ತಾಯ

**ಚಿಕ್ಕಮಗಳೂರು:** ಜಿಲ್ಲೆಯಲ್ಲಿ ಕಂದಾಯ ಭೂಮಿಯನ್ನು ಅರಣ್ಯ ಇಲಾಖೆಗೆ ವರ್ಗಾಯಿಸದಂತೆ ಕ್ರಮ ಕೈಗೊಳ್ಳಬೇಕು ಎಂದು ಮಾಜಿ ಶಾಸಕರ ನೇತೃತ್ವದಲ್ಲಿ ಮುಖಂಡರುಗಳು ನವೀಕರಿಸಬಹುದಾದ ಇಂಧನ ನಿಗಮ ಮಂಡಳಿ ಅಧ್ಯಕ್ಷ ಟಿ.ಡಿ. ರಾಜೇಗೌಡ ಅವರನ್ನು ಇಂದು ಭೇಟಿ ಮಾಡಿ ಮನವಿ ಸಲ್ಲಿಸಿದರು.

ಈ ಕುರಿತು ಮಾತನಾಡಿದ ಮಾಜಿ ಶಾಸಕ ಎಂ.ಪಿ.ಕುಮಾರಸ್ವಾಮಿ ಜಿಲ್ಲೆ ಹಾಗೂ ಮೂಡಿಗೆರೆ ತಾಲ್ಲೂಕಿನ ಕಂದಾಯ



ಭೂಮಿಯನ್ನು ಅರಣ್ಯ ಇಲಾಖೆಗೆ ವರ್ಗಾಯಿಸಬಾರದು. ಭವಿಷ್ಯದ ಮಕ್ಕಳಿಗೆ ಮೂಲ ಭೂತ ಸೌಲಭ್ಯವನ್ನು ಗಮನದಲ್ಲಿಟ್ಟುಕೊಂಡು ಕಂದಾಯ ಭೂಮಿಯನ್ನು ಅರಣ್ಯಕ್ಕೆ ಸೇರಿಸದೇ 4/1 ನೋಟಿ ಫಿಕೇಷನ್‌ನ್ನು ರದ್ದುಪಡಿಸಬೇಕು ಎಂದು ಒತ್ತಾಯಿಸಿದರು.

ಮೂಡಿಗೆರೆ ಭಾಗದ ಕಳಸ ತಾಲ್ಲೂಕು ಹಾಗೂ ಆಲ್ದೂರು, ವಸ್ತಾರೆ ಹೋಬಳಿಯ ಹಲವು ಭಾಗಗಳ ಗ್ರಾಮಗಳಲ್ಲಿ 4/1 ನೋಟಿಫಿಕೇಷನ್ ಪರಿವರ್ತನೆ ಮಾಡಲು ಅರಣ್ಯ ಇಲಾಖೆ ಸಿದ್ದತೆ ಮಾಡಿಕೊಂಡಿದೆ. ಬಹುತೇಕ ಈ ಗ್ರಾಮದ ಭೂಮಿಗಳಲ್ಲಿ ಕೃಷಿಕರು, ನಿವೇಶನ ರಹಿತರು ವಾಸವಾಗಿದ್ದು ಜೊತೆಗೆ ಸಾವಿರಾರು ಮಂದಿ ನಿವೇಶನಕ್ಕಾಗಿ ಕಾದುಕುಳಿತುಕೊಂಡಿದ್ದಾರೆ ಎಂದು ಹೇಳಿದರು. ಇನ್ನೂ ಕೆಲವೆಡೆ ಸಾವಿರಾರು ಕುಟುಂಬಗಳು, ಬೆಳೆಗಾರರ ಕೂಲಿ ಲೈನ್‌ಗಳಲ್ಲಿ ನಿವೇಶನಕ್ಕಾಗಿ, ಸ್ವಂತ ಮನೆ ನಿರ್ಮಿಸಿಕೊಳ್ಳಲು ಕನಸು ಕಾಣಲಾಗುತ್ತಿದೆ. ಅಂಗನವಾಡಿ ಶಾಲೆ, ಆಟದ ಮೈದಾನ, ಸಮುದಾಯ ಭವನ, ಸ್ಮಶಾನಕ್ಕೆ ಜಾಗವಿಲ್ಲದೆ ಆಹಾಕಾರಪಡುವಂತಾಗಿದೆ ಎಂದರು.

ಮೂಡಿಗೆರೆ ತಾಲ್ಲೂಕು ಸೇರಿದಂತೆ ಜಿಲ್ಲೆಯ ಯಾವುದೇ ಗ್ರಾಮದ ಕಂದಾಯ ಭೂಮಿಯನ್ನು ಅರಣ್ಯ ಎಂದು ಪರಿವರ್ತನೆ ಮಾಡಬೇಕಾದರೆ ಎಲ್ಲಾ ಮೂಲಭೂತ ಸೌಲಭ್ಯದ ಕೊರತೆ ನೀಗಿಸಬೇಕಾಗಿದೆ.

# ಕನ್ನಡಿಗರನ್ನು ಕೆಣಕಿದ ಕಮಲ್ ಹಾಸನ್ ವಿರುದ್ಧ ಕೇಸ್ ದಾಖಲು

**ಬೆಂಗಳೂರು:** ಕನ್ನಡ ಭಾಷೆ ತಮಿಳಿನಿಂದ ಹುಟ್ಟಿದೆ



ಎಂದು ಹಿರಿಯ ನಟ ಕಮಲ್ ಹಾಸನ್ ಅವರ ವಿವಾದಾತ್ಮಕ ಹೇಳಿಕೆ ಬಗ್ಗೆ ರಾಜ್ಯದಲ್ಲಿ ಆಕ್ರೋಶ ಭುಗಿಲೆದ್ದಿದೆ. ಕನ್ನಡದ ಬಗ್ಗೆ ಬಾಲಿಶ ಹೇಳಿಕೆ ನೀಡಿ ಕನ್ನಡಿಗರನ್ನು ಕೆಣಕಿದ ಕಮಲ್ ಹಾಸನ್ ವಿರುದ್ಧ ಕೇಸ್ ದಾಖಲಿಸಲಾಗಿದೆ. ನಟ ಕಮಲ್ ಹಾಸನ್ ಬೆಂಗಳೂರಿನ ಆರ್.ಟಿ. ನಗರ ಪೊಲೀಸ್ ಠಾಣೆಗೆ ಕರವೇ ಅಧ್ಯಕ್ಷ ಪ್ರವೀಣ್ ಶೆಟ್ಟಿ ಅವರು ದೂರು ಸಲ್ಲಿಕೆ ಮಾಡಿದ್ದಾರೆ. ಕನ್ನಡಿಗರ ಭಾವನೆಗೆ ನಟ ಕಮಲ್ ಹಾಸನ್ ಧಕ್ಕೆ ತಂದಿದ್ದಾರೆ. ಆತನ ವಿರುದ್ಧ ಕಾನೂನು ಕ್ರಮ ಜರುಗಿಸುವಂತೆ ದೂರು ಸಲ್ಲಿಸಿದ್ದಾರೆ.ತಮ್ಮ 'ಥಗ್ ಲೈಫ್' ಚಿತ್ರದ ಪ್ರಚಾರದ ವೇಳೆ "ಕನ್ನಡ ತಮಿಳಿನಿಂದ ಹುಟ್ಟಿತು" ಎಂದು ಕಮಲ್ ಹಾಸನ್ ಹೇಳಿಕೆ ನೀಡಿರುವುದು ಕನ್ನಡಿಗರನ್ನು ಕೆರಳಿಸಿದೆ. ಕನ್ನಡದ ಹಿರಿಯ ನಟ ಶಿವರಾಜ್‌ಕುಮಾರ್ ಕೂಡ ಹಾಜರಿದ್ದರು.

## ಭೂಕುಸಿತ ಅಪಾಯ, ಪಶ್ಚಿಮ ಘಟ್ಟಗಳಿಗೆ ಹಾನಿ:

# ಶರಾವತಿ ಜಲವಿದ್ಯುತ್ ಯೋಜನೆಗೆ ಅರಣ್ಯ ಇಲಾಖೆ ಅನುಮತಿ ನಿರಾಕರಣೆ

**ಬೆಂಗಳೂರು:** ಶಿವಮೊಗ್ಗ ಜಿಲ್ಲೆಯ ಶರಾವತಿ ಪಂಪ್ಡ್ ಸ್ಟೋರೇಜ್ ಜಲವಿದ್ಯುತ್ ಯೋಜನೆಯ ಕುರಿತು ಭಾರತದ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವಾಲಯ ಇತ್ತೀಚೆಗೆ ಸಲ್ಲಿಸಿದ ಸ್ಥಳ ಪರಿಶೀಲನಾ ವರದಿಯಲ್ಲಿ, ಪರಿಹಾರವಾಗಿ ನೀಡಲಾದ ಭೂಮಿ ಸಾಕಾಗುವುದಿಲ್ಲವಾದ್ದರಿಂದ ಯೋಜನೆಗೆ ಅನುಮತಿ ನೀಡಲು ಸಾಧ್ಯವಾಗುವುದಿಲ್ಲ.

ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರವು ಶಿವಮೊಗ್ಗವನ್ನು ಭೂಕುಸಿತ ಮತ್ತು ಪ್ರವಾಹಕ್ಕೆ ಗುರಿಯಾಗುವ ಜಿಲ್ಲೆಗಳಲ್ಲಿ ಒಂದೆಂದು ಪಟ್ಟಿ ಮಾಡಿರುವ ಸಮಯದಲ್ಲಿ ಈ ವರದಿ ಬಂದಿದೆ, ಈ ಯೋಜನೆಯು 60 ಡಿಗ್ರಿಗಳವರೆಗೆ ಕಡಿದಾದ ಇಳಿಜಾರು ಕಡಿತಗೊಳಿಸುವುದು, ಹೊಸ ರಸ್ತೆಗಳ ರಚನೆ, ಅಸ್ತಿತ್ವದಲ್ಲಿರುವ ರಸ್ತೆಗಳ ಅಗಲೀಕರಣ, 15,000 ಕ್ಕೂ ಹೆಚ್ಚು ಮರಗಳನ್ನು ಕಡಿಯುವುದು ಮತ್ತು ಭೂಗತ ಬಂಡೆಗಳನ್ನು ಸ್ಫೋಟಿಸಬೇಕಾಗುತ್ತದೆ, ಹೆಚ್ಚಿನ ಮಳೆಯಾಗುವುದರ ಜೊತೆಗೆ ಕಡಿದಾದ ಇಳಿಜಾರು ಮತ್ತು ಮಣ್ಣಿನ ಒಡ್ಡಿಕೊಳ್ಳುವಿಕೆಯಿಂದ ಈ ಪ್ರದೇಶವು ಭೂಕುಸಿತಕ್ಕೆ ಗುರಿಯಾಗುತ್ತದೆ ಎಂದು ವರದಿ ಹೇಳಿದೆ.

ಯೋಜನೆಯು ಎರಡು ಜಲಾಶಯಗಳನ್ನು ಹೊಂದಿರುತ್ತದೆ. 500 ಮೀಟರ್ ಆಳದ 3.2 ಕಿ.ಮೀ. ಒಂಬತ್ತು ವ್ಯಾಸದ ಭೂಗತ ಸುರಂಗಗಳ ನಿರ್ಮಾಣಕ್ಕಾಗಿ ಬಂಡೆಗಳನ್ನು ಕೊರೆಯುವುದು ಮತ್ತು ಸ್ಫೋಟಿಸುವುದು ಪರಿಸರಕ್ಕೆ ಮಾತ್ರವಲ್ಲದೆ ಮಾನವ ವಾಸಸ್ಥಳಗಳಿಗೂ ಹಾನಿಕಾರಕವಾಗಿದೆ



ಶರಾವತಿ ಅಭಯಾರಣ್ಯ

ಎಂದು ವರದಿ ತಿಳಿಸಿದೆ.

ಮೇ 7-9 ರಿಂದ MoEFCC ಯ ತಂಡವು ಯೋಜನಾ ಸ್ಥಳಗಳಿಗೆ ಭೇಟಿ ನೀಡಿತು. 2000ಒಘ ವಿದ್ಯುತ್ ಉತ್ಪಾದಿಸುವ ಮತ್ತು ಸಂಗ್ರಹಿಸುವ ಯೋಜನೆಗಾಗಿ ಸಾಗರ, ಶಿವಮೊಗ್ಗ ಮತ್ತು ಹೊನ್ನಾವರ ಅರಣ್ಯ ವಿಭಾಗಗಳಲ್ಲಿ 54.155 ಹೆಕ್ಟೇರ್ ಅರಣ್ಯ ಭೂಮಿಗೆ ಅನುಮತಿ ಕೋರಿ ರಾಜ್ಯದ ಇಂಧನ ಇಲಾಖೆಯು ಕರ್ನಾಟಕ ಅರಣ್ಯ ಮತ್ತು ಪರಿಸರ ಇಲಾಖೆಗೆ ಮತ್ತು MoEFCC ಗೆ ಪ್ರಸ್ತಾವನೆಯನ್ನು ಸಲ್ಲಿಸಿತ್ತು. ಈ ಯೋಜನೆಯನ್ನು ಕರ್ನಾಟಕ ಪವರ್ ಕಾರ್ಪೊರೇಷನ್ ಲಿಮಿಟೆಡ್ ಕಾರ್ಯಗತಗೊಳಿಸುತ್ತಿದೆ.

ಪಶ್ಚಿಮ ಘಟ್ಟ ಪ್ರದೇಶವು ಭಾರತಕ್ಕೆ ಒಂದು ಪ್ರಮುಖ ಜಲಾನಯನ ಪ್ರದೇಶವಾಗಿದೆ. ಈ ಪ್ರದೇಶದಲ್ಲಿ ಪಶ್ಚಿಮಕ್ಕೆ ಹರಿಯುವ 37 ಮತ್ತು ಮೂರು ಪೂರ್ವಕ್ಕೆ ಹರಿಯುವ ನದಿಗಳಿವೆ. ಪಶ್ಚಿಮ ಘಟ್ಟಗಳ ಮಧ್ಯ ಭಾಗವು ಭತ್ತ, ಕಾಫಿ, ಚಹಾ, ಏಲಕ್ಕಿ, ಮೆಣಸು, ಅಡಿಕೆ ಮತ್ತು ಇತರ ಬೆಳೆಗಳ ಕೃಷಿಗೆ ಹೆಸರುವಾಸಿಯಾಗಿದೆ. ಈ ಯೋಜನೆಗಳು ಈ ಪ್ರದೇಶದ ಮೇಲೆ ಬೀರುವ ಪರಿಣಾಮವನ್ನು ನಿರ್ಧರಿಸಲು ಯಾವುದೇ ಅಧ್ಯಯನಗಳನ್ನು ನಡೆಸಲಾಗಿಲ್ಲ" ಎಂದು ವರದಿ ತಿಳಿಸಿದೆ.

ಉತ್ತರ ಕನ್ನಡದಲ್ಲಿ ವಿವಿಧ ಯೋಜನೆಗಳಿಗಾಗಿ 18,000 ಹೆಕ್ಟೇರ್‌ಗಳಿಗೂ ಹೆಚ್ಚು ಅರಣ್ಯ ಭೂಮಿಯನ್ನು ಹಿಂದೆ ಕೆಪಿಸಿಎಲ್‌ಗೆ ಗುತ್ತಿಗೆ ನೀಡಲಾಗಿದೆ ಎಂದು ತಂಡವು ಗಮನಸೆಳೆದಿದೆ. ಯೋಜನೆಗೆ ಅರಣ್ಯ ತೆರವುಗೊಳಿಸುವ ಪ್ರಸ್ತಾವನೆಯನ್ನು ವರದಿ ತಿರಸ್ಕರಿಸಿದೆ. ರಾಷ್ಟ್ರೀಯ ವನ್ಯಜೀವಿ ಮಂಡಳಿಯ ತಂಡವು ಇನ್ನೂ ಯೋಜನಾ ಸ್ಥಳಗಳನ್ನು ಪರಿಶೀಲಿಸಬೇಕಾಗಿದೆ. ರಾಜ್ಯ ವನ್ಯಜೀವಿ ಮಂಡಳಿಯು ಕೆಲವು ಷರತ್ತುಗಳೊಂದಿಗೆ ಯೋಜನೆಗೆ ಅನುಮತಿಸಿದ್ದರೂ ಅದು ಒತ್ತಡದಲ್ಲಿ ಮಾಡಲಾಗಿದೆ ಎಂದು ತಿಳಿದುಬಂದಿದೆ

# ಅಪ್ರಾಪ್ತ ಬಾಲಕಿಯ ಮೇಲೆ ಲೈಂಗಿಕ ದೌರ್ಜನ್ಯ: 28 ವರ್ಷದ ನೃತ್ಯ ಶಿಕ್ಷಕನ ಬಂಧನ



**ಬೆಂಗಳೂರು:** ಬೆಂಗಳೂರಿನಲ್ಲಿ ತನ್ನ ಕಾರಿನಲ್ಲಿ ಅಪ್ರಾಪ್ತ ಬಾಲಕಿಯ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ ಆರೋಪದ ಮೇಲೆ 28 ವರ್ಷದ ನೃತ್ಯ ಶಿಕ್ಷಕನನ್ನು ಬಂಧಿಸಲಾಗಿದೆ ಎಂದು ಪೊಲೀಸರು ಗುರುವಾರ ತಿಳಿಸಿದ್ದಾರೆ.

ಮೇ 24 ರಂದು ಕಾಡುಗೋಡಿ ಪ್ರದೇಶದಲ್ಲಿ ಈ ಘಟನೆ ನಡೆದಿತ್ತು. ಭಾರತಿ ಕಣ್ಣನ್ ಬಂಧಿತ ಆರೋಪಿ. ರಸ್ತೆಯಲ್ಲಿ ನಡೆದುಕೊಂಡು ಹೋಗುತ್ತಿದ್ದ ಸಂತ್ರಸ್ತೆಯ ಬಳಿ ಕಾರು ನಿಲ್ಲಿಸಿದ್ದಾನೆ, ನಂತರ ತಾನು ನೃತ್ಯ ಶಿಕ್ಷಕ ಎಂದು ಪರಿಚಯಿಸಿಕೊಂಡು ನೃತ್ಯ ತರಗತಿಗಳ ಬಗ್ಗೆ ವಿವರಗಳನ್ನು ವಿವರಿಸುವ ನೆಪದಲ್ಲಿ ಆಕೆಯನ್ನು ಕಾರಿಗೆ ಹತ್ತಿಸಿಕೊಂಡಿದ್ದಾನೆ.

ಸಂತ್ರಸ್ತೆ ಕಾರು ಹತ್ತುತ್ತಿದ್ದಂತೆ, ಆರೋಪಿ ಬಾಗಿಲುಗಳನ್ನು ಲಾಕ್ ಮಾಡಿ ಸ್ವಲ್ಪ ದೂರ ಹೋಗಿದ್ದಾನೆ. ಈ ಸಮಯದಲ್ಲಿ, ಅವನು ಹುಡುಗಿಯ ಜೊತೆ ಅನುಚಿತವಾಗಿ ವರ್ತಿಸಿದ್ದಾನೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಸ್ವಲ್ಪ ಸಮಯದ ನಂತರ ಕಣ್ಣನ್, ಸಂತ್ರಸ್ತೆಯನ್ನು ತಾನು ಕರೆದುಕೊಂಡು ಹೋದ ಸ್ಥಳದಲ್ಲೇ ಇಳಿಸಿದ್ದಾನೆ. ಸಂತ್ರಸ್ತೆ ಮನೆಗೆ ತಲುಪಿದ ನಂತರ, ಘಟನೆಯ ಬಗ್ಗೆ ತನ್ನ ಪೋಷಕರಿಗೆ ತಿಳಿಸಿದ್ದಾಳೆ. ಅದಾದ ಮೇಲೆ ಅವರು ದೂರು ದಾಖಲಿಸಿದ್ದರು, ನಂತರ, ಕಣ್ಣನ್ ನನ್ನು ಬಂಧಿಸಲಾಯಿತು ಎಂದು ವಿವರಿಸಿದ್ದಾರೆ.

# ಡೊನಾಲ್ಡ್ ಟ್ರಂಪ್‌ಗೆ ಭಾರೀ ಮುಖಭಂಗ; ತೆರಿಗೆ ಯುದ್ಧಕ್ಕೆ ಬ್ರೇಕ್ ಹಾಕಿದ ಕೋರ್ಟ್



**ವಾಷಿಂಗ್ಟನ್:** ಡೊನಾಲ್ಡ್ ಟ್ರಂಪ್ ಅಮೆರಿಕದ ಅಧ್ಯಕ್ಷರಾಗಿ ಅಧಿಕಾರ ವಹಿಸಿಕೊಂಡ ಬಳಿಕ ದೇಶದಲ್ಲಿ ಸಾಕಷ್ಟು ಬದಲಾವಣೆಯನ್ನು ತಂದಿದ್ದಾರೆ. ಟ್ರಂಪ್ ಪ್ರಾರಂಭಿಸಿದ್ದ ತೆರಿಗೆ ಯುದ್ದಕ್ಕೆ ಕೋರ್ಟ್ ಈಗ ತಡೆ ಹಿಡಿದಿದೆ. ಅಮೆರಿಕದ ವ್ಯಾಪಾರ ಪಾಲುದಾರರಿಂದ ಆಮದುಗಳ ಮೇಲೆ ವ್ಯಾಪಕ ಸುಂಕ ವಿಧಿಸುವ ಮೂಲಕ ಅಧ್ಯಕ್ಷ ತಮ್ಮ ಅಧಿಕಾರವನ್ನು ಮೀರಿದ್ದಾರೆ ಎಂದು ಕೋರ್ಟ್ ಹೇಳಿದೆ. ಈ ಮೂಲಕ ಡೊನಾಲ್ಡ್ ಟ್ರಂಪ್ ಆಡಳಿತ ಜಾರಿಗೆ ತರಲು ಮುಂದಾಗಿದ್ದ ವ್ಯಾಪಕ ತೆರಿಗೆ ನೀತಿಗೆ ಬ್ರೇಕ್ ಹಾಕಿದೆ. ಈ ಮೂಲಕ ಟ್ರಂಪ್‌ಗೆ ಭಾರೀ ಹಿನ್ನಡೆಯಾಗಿದೆ.

ಅಮೆರಿಕದ ವಾಣಿಜ್ಯ ನ್ಯಾಯಾಲಯ ಟ್ರಂಪ್ ಓಟ-ಕ್ಕೆ ಬ್ರೇಕ್ ಹಾಕಿದೆ. ಅಮೆರಿಕ ಕಾಂಗ್ರೆಸ್‌ಗೆ ಮಾತ್ರ ವಾಣಿಜ್ಯ ನೀತಿ ನಿಯಮ ರೂಪಿಸುವ ಅಧಿಕಾರವನ್ನು ಅಮೆರಿಕ ಸಂವಿಧಾನ ನೀಡಿದೆ ಎಂದು ಕೋರ್ಟ್ ಸರ್ಕಾರಕ್ಕೆ ತಿಳಿಸಿದೆ. ಏಪ್ರಿಲ್ 22 ರಂದು ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ ಪಾಕಿಸ್ತಾನ ಮೂಲದ ಭಯೋತ್ಪಾದಕರು ನಡೆಸಿದ ಭಯೋತ್ಪಾದಕ ದಾಳಿಯ ನಂತರ ಭಾರತ ಹಾಗೂ ಪಾಕಿಸ್ತಾನದ ನಡುವೆ ಉದ್ವಿಗ್ನತೆ ಏರ್ಪಟ್ಟಿತ್ತು. ಆಗ ಕದನ ವಿರಾಮ ಏರ್ಪಡಿಸಲು ಟ್ರಂಪ್ ಉಭಯ ದೇಶಗಳಿಗೆ ವ್ಯಾಪಾರ ನಿರ್ಬಂಧದ ಬೆದರಿಕೆಯನ್ನು ಹಾಕಿದ್ದರು. ಅದರ ಕುರಿತೂ ಕೂಡ ನ್ಯಾಯಾಲಯ ಉಲ್ಲೇಖ ಮಾಡಿದೆ.

ಎಲ್ಲಾ ವಾದಗಳನ್ನು ತಿರಸ್ಕರಿಸಿದ ಮ್ಯಾನ್‌ಹ್ಯಾಟನ್ ಮೂಲದ ಮೂವರು ನ್ಯಾಯಾಧೀಶರ ಅಂತಾರಾಷ್ಟ್ರೀಯ ವಾಣಿಜ್ಯ ನ್ಯಾಯಾಲಯ ಐಇಇಪಿಎ ಅಡಿಯಲ್ಲಿ ಕಾಂಗ್ರೆಸ್ ಅಧ್ಯಕ್ಷರಿಗೆ "ಅಪರಿಮಿತ" ಅಧಿಕಾರಗಳನ್ನು ನಿಯೋಜಿಸಿಲ್ಲ ಎಂದು ತೀರ್ಪು ನೀಡಿತು. "ಅಸಾಮಾನ್ಯ ಮತ್ತು ಅಸಾಧಾರಣ ಬೆದರಿಕೆಯನ್ನು ಎದುರಿಸಲು" ತುರ್ತು ಪರಿಸ್ಥಿತಿಯ ಸಮಯದಲ್ಲಿ ಅಗತ್ಯ ಆರ್ಥಿಕ ನಿರ್ಬಂಧಗಳನ್ನು ವಿಧಿಸಲು ಮಾತ್ರ ಅಧ್ಯಕ್ಷರಿಗೆ ಅಧಿಕಾರ ನೀಡುತ್ತದೆ ಎಂದು ಪೀಠ ಹೇಳಿದೆ. ಅಮೆರಿಕದ ಆರ್ಥಿಕತೆಯನ್ನು ರಕ್ಷಿಸಲು, ಅಮೆರಿಕದ ಸಂವಿಧಾನವು ಕಾಂಗ್ರೆಸ್‌ಗೆ ವಿಶೇಷ ಅಧಿಕಾರವನ್ನು ನೀಡುತ್ತದೆ ಎಂದು ನ್ಯಾಯಾಲಯ ತನ್ನ ತೀರ್ಪಿನಲ್ಲಿ ಹೇಳಿದೆ.

# ಕನ್ನಡಿಗರನ್ನು ಕೆಣಕಿದ ಕಮಲ್ ಹಾಸನ್ ವಿರುದ್ಧ ಕೇಸ್ ದಾಖಲು



**ಬೆಂಗಳೂರು:** ಕನ್ನಡ ಭಾಷೆ ತಮಿಳಿನಿಂದ ಹುಟ್ಟಿದೆ ಎಂದು ಹಿರಿಯ ನಟ ಕಮಲ್ ಹಾಸನ್ ಅವರ ವಿವಾದಾತ್ಮಕ ಹೇಳಿಕೆ ಬಗ್ಗೆ ರಾಜ್ಯದಲ್ಲಿ ಆಕ್ರೋಶ ಭುಗಿಲೆದ್ದಿದೆ. ಕನ್ನಡದ ಬಗ್ಗೆ ಬಾಲಿಶ ಹೇಳಿಕೆ ನೀಡಿ ಕನ್ನಡಿಗರನ್ನು ಕೆಣಕಿದ ಕಮಲ್ ಹಾಸನ್ ವಿರುದ್ಧ ಕೇಸ್ ದಾಖಲಿಸಲಾಗಿದೆ. ನಟ ಕಮಲ್ ಹಾಸನ್ ಬೆಂಗಳೂರಿನ ಆರ್.ಟಿ. ನಗರ ಪೊಲೀಸ್ ಠಾಣೆಗೆ ಕರವೇ ಅಧ್ಯಕ್ಷ ಪ್ರವೀಣ್ ಶೆಟ್ಟಿ ಅವರು ದೂರು ಸಲ್ಲಿಕೆ ಮಾಡಿದ್ದಾರೆ. ಕನ್ನಡಿಗರ ಭಾವನೆಗೆ ನಟ ಕಮಲ್ ಹಾಸನ್ ಧಕ್ಕೆ ತಂದಿದ್ದಾರೆ. ಆತನ ವಿರುದ್ಧ ಕಾನೂನು ಕ್ರಮ ಜರುಗಿಸುವಂತೆ ದೂರು ಸಲ್ಲಿಸಿದ್ದಾರೆ.

ತಮ್ಮ 'ಥಗ್ ಲೈಫ್' ಚಿತ್ರದ ಪ್ರಚಾರದ ವೇಳೆ "ಕನ್ನಡ ತಮಿಳಿನಿಂದ ಹುಟ್ಟಿತು" ಎಂದು ಕಮಲ್ ಹಾಸನ್ ಹೇಳಿಕೆ ನೀಡಿರುವುದು ಕನ್ನಡಿಗರನ್ನು ಕೆರಳಿಸಿದೆ. ಕನ್ನಡದ ಹಿರಿಯ ನಟ ಶಿವರಾಜ್‌ಕುಮಾರ್ ಕೂಡ ಹಾಜರಿದ್ದ ಈ ಕಾರ್ಯಕ್ರಮದಲ್ಲಿ ಇದು ನನ್ನ ಕುಟುಂಬ. ಅದಕ್ಕಾ-ಗಿಯೇ ಅವರು ಶಿವರಾಜಕುಮಾರ್ ಇಲ್ಲಿಗೆ ಬಂದಿದ್ದಾರೆ. ನಿಮ್ಮ ಭಾಷೆ (ಕನ್ನಡ) ತಮಿಳಿನಿಂದ ಹುಟ್ಟಿದೆ, ಆದ್ದರಿಂದ ನೀವು ಕೂಡ ಸೇರಿದ್ದೀರಿ" ಎಂದು ಹಾಸನ್ ಹೇಳಿದ್ದರು.

ಕನ್ನಡದ ನಟ ಶಿವರಾಜ್ ಕುಮಾರ್ ಉಪಸ್ಥಿತರಿದ್ದ ಕಾರ್ಯಕ್ರಮದಲ್ಲೇ ಕಮಲ್ ಹಾಸನ್ ಈ ಹೇಳಿದ್ದರು. ಹೀಗಿದ್ದರೂ ಶಿವಣ್ಣ ಏನೂ ಹೇಳದೇ ಸುಮ್ಮನೆ ಕುಳಿತಿದ್ದರು ಎಂಬುದು ಹಲವರ ಅಸಮಾಧಾನಕ್ಕೂ ಕಾರಣವಾಗಿತ್ತು. ಇದೀಗ ವಿವಾದಾತ್ಮಕ ಹೇಳಿಕೆ ನೀಡಿರುವ ನಟ ಕಮಲ್ ಹಾಸನ್ ಬಗ್ಗೆ ನಟ ಶಿವರಾಜ್ ಕುಮಾರ್ ಪ್ರತಿಕ್ರಿಯೆ ನೀಡಿದ್ದಾರೆ. ಮಾಧ್ಯಮದವರ ಪ್ರಶ್ನೆಗೆ ಪ್ರತಿಕ್ರಿಯಿಸಿದ ಶಿವರಾಜ್ ಕುಮಾರ್ ಅವರು, ಕಮಲ್ ಹಾಸನ್ ಕೂಡ ಕನ್ನಡಕ್ಕೆ ಗೌರವ ಕೊಡುತ್ತಾರೆ. ನಿನ್ನೆ ಬಂದಾಗಲೂ ಅಷ್ಟೇ ಚೆನ್ನಾಗಿ ಮಾತನಾಡಿದ್ದಾರೆ. ನಾನು ಅವರ ಬಹಳ ದೊಡ್ಡ ಅಭಿಮಾನಿ. ನಮ್ಮನ್ನು ಗೌರವದಿಂದ ಸಮಾರಂಭಕ್ಕೆ ಕರೆದಿದ್ದರು.



# ದಾಳಿಂಬೆಗೆ ದೊರೆಯುತ್ತಿದೆ ದಾಖಲೆ ಬೆಲೆ: ರೈತರ ಮೊಗದಲ್ಲಿ ಸಂತಸ

**ಮೊಳಕಾಲ್ಮುರು:** ಇದೇ ಮೊದಲ ಬಾರಿಗೆ ದಾಳಿಂಬೆ ಹಣ್ಣಿಗೆ ದಾಖಲೆ ಬೆಲೆ ದೊರೆ-ಯುತ್ತಿದ್ದು, ಬೆಳೆಗಾರರ ಸಂತಸಕ್ಕೆ ಕಾರಣವಾಗಿದೆ.

'ತೋಟಗಾರಿಕೆಯ ಶ್ರೀಮಂತ ಬೆಳೆ' ಎಂದು ಗುರುತಿಸಿಕೊಂಡಿರುವ ದಾಳಿಂಬೆಯು, 2–3 ವರ್ಷಗಳಿಂದ ದುಂದಾಣು ರೋಗಕ್ಕೆ ತುತ್ತಾದ ಪರಿಣಾಮ ಬೆಳೆಗಾರರು 'ಇದರ ಸಹವಾಹ ಸಾಕು' ಎಂದೇ ಗಿಡಗಳನ್ನು ನಾಶಪಡಿಸಿ ಅನ್ಯ ಬೆಳೆಗಳತ್ತ ಮುಖಮಾಡಿದ್ದರು. ಇದು ಬೆಳೆ ವಿಸ್ತೀರ್ಣ ಕುಸಿತಕ್ಕೂ ಕಾರಣವಾಗಿತ್ತು. ಇದೀಗ ರೋಗ ಹತೋಟಿಯಲ್ಲಿದ್ದು, ತೋಟ ಉಳಿಸಿಕೊಂಡಿರುವ ಬೆಳೆಗಾರರಿಗೆ 'ಲಕ್ಷ್ಮಿ' ಒಲಿಯುತ್ತಿದ್ದಾಳೆ.

ಕಳೆದ ತಿಂಗಳು ದಾಳಿಂಬೆ ಕಟಾವು ಆರಂಭವಾಗಿದ್ದು, ಆಗ ಕೆ.ಜಿ.ಗೆ 120ರಿಂದ 130ರ ಆಸುಪಾಸುನಲ್ಲಿ ದರ ಇತ್ತು. ಕಳೆದ ವಾರ 200ಕ್ಕೆ ಮಾರಾಟವಾಗಿತ್ತು. ಆದರೆ 2–3 ದಿನಗಳಿಂದ ತೋಟಗಳಲ್ಲಿಯೇ ಹಣ್ಣು ಖರೀದಿಸಲಾಗುತ್ತಿದೆ. ಗುಣಮಟ್ಟದ ಹಣ್ಣನ್ನು ಮಾರಾಟಗಾರರು ಕೆ.ಜಿ.ಗೆ 250ರಿಂದ 260ಕ್ಕೆ ಖರೀದಿಸುತ್ತಿದ್ದಾರೆ. ಗುಣಮಟ್ಟದ ಹಣ್ಣು ಮಹಾರಾಷ್ಟ್ರ ಮೂಲಕ ಅರಬ್ ರಾಷ್ಟ್ರಗಳಿಗೆ ರಫ್ತಾಗುತ್ತಿದೆ ಎಂದು ಅಧಿಕಾರಿಯೊಬ್ಬರು ಹೇಳಿದರು.

ಪ್ರಸಕ್ತ ಮುಂಗಾರು ಮತ್ತು ಹಿಂಗಾರು ಹಂಗಾಮಿನಲ್ಲಿ ಉತ್ತಮ ಮಳೆ ಸುರಿದ ಕಾರಣ ಗಿಡಗಳಲ್ಲಿ ಸರಿಯಾಗಿಹೂವು ನಿಲ್ಲದಿರುವುದು ಇಳುವರಿ ಮೇಲೆ ವ್ಯತಿರಿಕ್ತ ಪರಿಣಾಮ ಬೀರಿದೆ. ಈ ಬಾರಿ ಶೇ40ರಿಂದ ಶೇ50ರಷ್ಟು ಇಳುವರಿ ಸಿಗುತ್ತಿದೆ. ಜತೆಗೆ ಔಷಧಿ, ನಿರ್ವಹಣೆ ವೆಚ್ಚ ಏರಿದೆ. ದುಬಾರಿ ದರ ಸಿಕ್ಕರೂ ಇಳುವರಿ ಕುಂಠಿತವಾಗಿರುವುದರಿಂದ ಲಾಭಾಂಶ ಹೆಚ್ಚಾಗಿಲ್ಲ. ಅದರಲ್ಲೂ ಈ ಅದೃಷ್ಟದ ದರ ಎಲ್ಲಾ ರೈತರಿಗೆ ಸಿಕ್ಕಿಲ್ಲ ಎಂದು ಬೆಳೆಗಾರ ಅನಂತರೆಡ್ಡಿ ತಿಳಿದರು.

ವರ್ಷದಿಂದ ವರ್ಷಕ್ಕೆ ದಾಳಿಂಬೆ ಕೃಷಿ ದುಬಾರಿಯಾಗುತ್ತಿದೆ. ಪ್ರತಿ ಎಕರೆಗೆ ಅಂದಾಜು 2 ಲಕ್ಷದವರೆಗೂ ವೆಚ್ಚವಾಗುತ್ತದೆ. ರೋಗಬಾಧೆ, ದರ ಕುಸಿತವಾದಲ್ಲಿ ಸುಧಾರಿಸಿಕೊಳ್ಳುವುದು ಕಷ್ಟ ಎಂಬ ಸ್ಥಿತಿಯಿದೆ. ಸಾಕಷ್ಟು ಬೆಳೆಗಾರರು ದಾಳಿಂಬೆಯಿಂದ ವಿಮುಖರಾಗಲೂ ಇದು ಕಾರಣವಾಗಿದೆ. ಈಗ ದಾಖಲೆ ಬೆಲೆ ಸಿಕ್ಕರೂ ಇಳುವರಿ ಲೆಕ್ಕದಲ್ಲಿ ಪರಿಗಣಿಸಿಲ್ಲಿ ರೈತರಿಗೆ ಆದಾಯ ದಕ್ಕುವುದು ಅಷ್ಟಕಷ್ಟೇ ಎಂದು ತೋಟಗಾರಿಕೆ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕ ಆರ್. ವಿರೂಪಾಕ್ಷಪ್ಪ ಹೇಳಿದರು.



**ಇಳುವರಿ ಇಲ್ಲ..**

ದೇಶದಲ್ಲಿ ಹೆಚ್ಚು ದಾಳಿಂಬೆ ಬೆಳೆಯುವ ರಾಜ್ಯಗಳಾಗಿ ಗುಜರಾತ್ ಮತ್ತು ಮಹಾರಾಷ್ಟ್ರ ಗುರುತಿಸಿಕೊಂಡಿವೆ. ಇಲ್ಲಿ ಇನ್ನೂ ಕಟಾವು ಆರಂ ಭವಾಗಿಲ್ಲ. ರಂಜಾನ್ ಕಾರಣ ಅರಬ್ ರಾಷ್ಟಗಳಿಗೆ ಹಣ್ಣು ರಫ್ತಾಗುತ್ತಿದೆ. ಗುಜರಾತ್ನಲ್ಲಿ ಬೆಳೆಯುವ ಹಣ್ಣಿನ ಬಣ್ಣಕ್ಕೆ ಹೋಲಿಸಿದಲ್ಲಿ ಚಿತ್ರದುರ್ಗ ಜಿಲ್ಲೆಯಲ್ಲಿ ಬೆಳೆಯುವ ದಾಳಿಂಬೆ ಹಣ್ಣುಗಳು ಹೆಚ್ಚು ಸದೃಢ ಮತ್ತು ಕೆಂಪಾದ ಕಾಳುಹೊಂದಿರುತ್ತದೆ. ಇದು ದರ ಹೆಚ್ಚಳಕ್ಕೆ ಸಹಕಾರಿಯಾಗಿದೆ ಎಂಬುದು ವ್ಯಾಪಾರಿಗಳ ಅಭಿಪ್ರಾಯ.

**ಜಿಲ್ಲೆಯಲ್ಲಿದೆ ಪೂರಕ ಹವಾಮಾನ**

ಹೊಸದುರ್ಗ ತಾಲ್ಲೂಕಿನಲ್ಲಿ 985 ಹೆಕ್ಟೇರ್, ಚಳ್ಳಕೆರೆಯಲ್ಲಿ 1,313 ಹೆಕ್ಟೇರ್, ಮೊಳಕಾಲ್ಮುರಿನಲ್ಲಿ 260 ಹೆಕ್ಟೇರ್, ಚಿತ್ರದುರ್ಗದಲ್ಲಿ 60 ಹೆಕ್ಟೇರ್, ಹಿರಿಯೂರಿನಲ್ಲಿ 1,296 ಹೆಕ್ಟೇರ್,ಹೊಳಲ್ಕೆರೆಯಲ್ಲಿ 5 ಹೆಕ್ಟೇರ್ ಪ್ರದೇಶದಲ್ಲಿ ದಾಳಿಂಬೆ ನಾಟಿಮಾಡಲಾಗಿದೆ. ಜುಲೈ, ಆಗಸ್ಟ್ನಲ್ಲಿ ಹೂವು ಕಟ್ಟಿದ್ದ ಗಿಡಗಳಲ್ಲಿ ಈಗ ಹಣ್ಣು ಸಿಗುತ್ತಿದೆ. ವಾರ್ಷಿಕ 2 ಬೆಳೆ ಬರುತ್ತಿದ್ದು, ಜನವರಿಯಲ್ಲಿ ಹೂಕಟ್ಟಿರುವ ಗಿಡಗಳಲ್ಲಿ ಮೇ , ಜೂನ್ನಲ್ಲಿ ಹಣ್ಣು ಸಿಗಲಿದೆ ಎಂದು ತೋಟಗಾರಿಕೆ ಇಲಾಖೆಯ ಉಪ ನಿರ್ದೇಶಕಿ ಸವಿತಾ ಮಾಹಿತಿ ನೀಡಿದರು.'ಜಿಲ್ಲೆಯುಕೆಂಪು ಕಾಳಿನ ತಳಿಯ ದಾಳಿಂಬೆ ಹಣ್ಣುಗಳನ್ನು ಬೆಳೆಯಲು ಖ್ಯಾತಿ ಪಡೆದಿದೆ. 25ಕ್ಕೂ ಹೆಚ್ಚು ವರ್ಷಗಳಿಂದ ಇಲ್ಲಿ ದಾಳಿಂಬೆ ಬೆಳೆಯುತ್ತಿದ್ದು, ಜಿಲ್ಲೆಯ ಹವಾಮಾನವು ದಾಳಿಂಬೆಗೆ ಪೂರಕವಾಗಿರುವುದೇ ಇದಕ್ಕೆ ಕಾರಣ. ಭಗವಾ, ಸೂಪರ್ ಭಗವಾ, ಗಣೇಶ, ಮಧುಗಿರಿ ಲೋಕಲ್ ತಳಿಯನ್ನು ಜಿಲ್ಲೆಯಲ್ಲಿ ಬೆಳೆಯಲಾಗುತ್ತಿದೆ ಎಂದು ಅವರು ಹೇಳಿದರು.



# ಸಂಗೀತ ಮನಕ್ಕೆ ಮುದ ನೀಡುತ್ತದೆ : ಶ್ರೀ ರಂಭಾಪುರಿ ಜಗದ್ಗುರುಗಳು



**ಬಾಳೆಹೊನ್ನೂರು:** ಜೀವನದ ಜಂಜಾಟದಲ್ಲಿ ಮುಳುಗಿರುವ ಮನುಷ್ಯನಿಗೆ ಸಂಗೀತ ಮನಕ್ಕೆ ಮುದ ನೀಡುತ್ತದೆ. ಅನೇಕ ರೋಗಗಳಿಗೆ ಸಂಗೀತ ಸಂಜೀವಿನಿಯಾಗಿದೆ. ಗಿಡ ಮರಗಳೂ ಸಂಗೀತವನ್ನು ಆಸ್ವಾದಿಸುತ್ತವೆ ಎಂಬುದು ವೈಜ್ಞಾನಿಕ ಸತ್ಯವಾಗಿದೆ ಎಂದು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು. ಅವರು ಬುಧವಾರ ಸಂಜೆ ಶ್ರೀ ಜಗದ್ಗುರು ರಂಭಾಪುರಿ ಪೀಠದಲ್ಲಿ ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವ ಹಾಗೂ ಕ್ಷೇತ್ರನಾಥ ಶ್ರೀ ವೀರಭದ್ರಸ್ವಾಮಿ ಮಹಾರಥೋತ್ಸವದ ಅಂಗವಾಗಿ ಜರುಗಿದ ಸಂಗೀತ–ಸೌರಭ ಹಾಗೂ ನಗೆ ಹಬ್ಬ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು. ಸಂಗೀತ ಆಸ್ವಾದಿಸುವುದರ ಜೊತೆಗೆ ಮನುಷ್ಯನಿಗೆ ಹಾಸ್ಯ ಪ್ರಜ್ಞೆಯೂ ಮುಖ್ಯವಾದುದು. ನಗುವುದರಿಂದ ಮನಸ್ಸು ಉಲ್ಲಸಿತಗೊಳ್ಳುತ್ತದೆ ಮೈ ನರ ನಾಡಿಗಳು ಸಡಿಲಗೊಳ್ಳುತ್ತವೆ. ಉತ್ತಮ ಹಾಸ್ಯದ ಮೂಲಕ ಜನರನ್ನು ನಗಿಸುವುದೂ ಒಂದು ಕಲೆಯಾಗಿದೆ ಎಂದರು.

ಮಲೆಬೆನ್ನೂರಿನ ಜೆಡಿಎಸ್ ಮುಖಂಡ ಬಿ.ಚಿದಾನಂದಪ್ಪ ಕಾರ್ಯಕ್ರಮ ಉದ್ಘಾಟಿಸಿದರು. ಸಮಾರಂಭದಲ್ಲಿ ಮುಕ್ತಿಮಂದಿರ, ಸುಳ್ಳ, ನಿಲೊಗಲ್ಲ, ಕಲಾದಗಿ, ಕವಲೇದುರ್ಗ, ಬಿಳಕಿ, ಬೇರುಗ-ಂಡಿ, ಹಾರನಹಳ್ಳಿ ಕೆಂಭಾವಿ, ಸಿಂದಗಿ, ಸಂಗೊಳ್ಳಿ, ಸಿದ್ಧರಬೆಟ್ಟ, ಜಕ್ಕಲಿ–ಹಾರನಹಳ್ಳಿ ಮಠಗಳ ಶ್ರೀಗಳು ಉಪಸ್ಥಿತರಿದ್ದರು. ಕಲಬುರ್ಗಿ ಚವದಾಪುರಿ ಹಿರೇಮಠದ ಡಾ॥ ರಾಜಶೇಖರ ಶಿವಾಚಾರ್ಯ ಸ್ವಾಮಿಗಳು ನೇತೃತ್ವ ವಹಿಸಿದ್ದರು.

ಡಾ॥ ರಾಜಗುರು ಗುರುಸ್ವಾಮಿ ಕಲಕೇರಿ ಇವರು ನಡೆಸಿಕೊಟ್ಟ ಸಂಗೀತ ಸೌರಭ ಜನಮನವನ್ನು ಸೂರೆಗೊಂಡಿತು. 'ಸಾಹಿತ್ಯ-ಸಂಸ್ಕೃತಿ ಸಂವರ್ಧಿಸಲಿ ಶಾಂತಿ ಸಮೃದ್ಧಿ ಸರ್ವರಿಗಾಗಲಿ' ಎಂಬ ಸ್ವರಚಿತ ಕವನದೊಂದಿಗೆ ಆರಂಭಿಸಿದ ಅವರು ಕಡಕೋಳ ಮಡಿವಾಳಪ್ಪನವರ 'ಯಾಕ ಮಾಡತೀದಿ ಒಣ ಚಿಂತಿ' ಹಾಗೂ ಶ್ರೀ ರಂಭಾಪುರಿ ವೀರಗಂಗಾಧರ ಜಗದ್ಗುರುಗಳನ್ನು ಕುರಿತು ರಚಿಸಿದ 'ಅಗಣಿತ ಚರಿತ ಮಹಾಸನ್ನಿಧಿ' ಗೀತೆಗಳನ್ನು ಹಾಡಿದರು. ಇವರ ಸಂಗೀತಕ್ಕೆ ಬಸಲಿಂಗಯ್ಯ ಹಿರೇಮಠ ತಬಲಾ ಸಾಥ ನೀಡಿದರೆ ಗುರುಲಿಂಗಸ್ವಾಮಿ ಹಿತ್ತಲ ಶಿರೂರ ಹಾರ್ಮೋನಿಯಂ ಸಾಥ ನೀಡಿದರು.

ಟಿ.ವಿ.ಹಾಸ್ಯ ಕಲಾವಿದ ಶರಣು ಹಿರೇಮಠ ಹಲವಾರು ಸಂಗತಿಗಳನ್ನು ಹಾಸ್ಯ ಭರಿತವಾಗಿ ಹೇಳುವ ಮೂಲಕ ಜನರನ್ನು ನಗೆಗಡಲಲ್ಲಿ ತೇಲಿಸಿದರು. ಗದಗ ಜಾನಪದ ಸಂಜೀವಿನಿಯ ಗವಿಸಿದ್ಧಯ್ಯ ಹಳ್ಳಿಕೇರಿಮಠ ಇವರು ಜಾನಪದ ಹಾಡುಗಳ ಮೂಲಕ ಜನತೆಯನ್ನು ರಂಜಿಸಿದರು. ಶ್ರೀ ಜಗದ್ಗುರು ರೇಣುಕಾಚಾರ್ಯ ಗುರುಕುಲದ ಸಾಧಕರಿಂದ ವೇದಘೋಷ ಜರುಗಿತು. ಸಿಂಧನೂರು–ಕನ್ನೂರು ಮಠದ ಸೋಮನಾಥ ಶಿವಾಚಾರ್ಯ ಸ್ವಾಮಿಗಳು ಸ್ವಾಗತಿಸಿದರು. ಮಳಲಿ ಸಂಸ್ಥಾನಮಠದ ಡಾ॥ ನಾಗಭೂಷಣ ಶಿವಾಚಾರ್ಯ ಸ್ವಾಮಿಗಳು ನಿರೂಪಿಸಿದರು.

ಸಮಾರಂಭದ ನಂತರ ಹುಬ್ಬಳ್ಳಿಯ ಜೀವಿ ಚಿತ್ರಾಲಯದವರು ನಿರ್ಮಿಸಿರುವ ಗುರುಜೀವಿ ನಿರ್ದೇಶನದ "ರೇಣುಕ ಬೋಧೆ" ಟೆಲಿ ಫಿಲ್ಮ ಪ್ರದರ್ಶನವನ್ನು ಶ್ರೀ ರಂಭಾಪುರಿ ಜಗದ್ಗುರುಗಳು ಉದ್ಘಾಟಿಸಿ ವೀಕ್ಷಿಸಿ ಶುಭ ಹಾರೈಸಿದರು. "ರೇಣುಕ ಬೋಧೆ" ಟೆಲಿ ಫಿಲ್ಮನಲ್ಲಿ ಶ್ರೀ ಜಗದ್ಗುರು ರೇಣುಕಾದಿ ಪಂಚಾಚಾರ್ಯರು ಶಿವನ ಸದ್ಯೋಜಾತ ಮುಖದಿಂದ ಉದ್ಭವಿಸಿದ ಕಾರಣವನ್ನು ಹಾಗೂ ಶ್ರೀ ಜಗದ್ಗುರು ರೇಣುಕಾಚಾರ್ಯರು ಕುಲ್ಯಪಾಕ ಸೋಮೇಶ್ವರ ಲಿಂಗದಿಂದ ಆವಿರ್ಭವಿಸಿ ಮಹಾಮುನಿ ಅಗಸ್ತ್ಯರಿಗೆ ವೀರಶೈವ ಧರ್ಮವನ್ನು ಬೋಧಿಸಲು ಬೋಧಿಸಿದ್ದನ್ನು ಸೊಗಸಾಗಿ ಚಿತ್ರೀಕರಿಸಿದ್ದಾರೆ.

# ತುರ್ತು ಪರಿಸ್ಥಿತಿ ಬಗ್ಗೆ ವಿಶೇಷ ಅಧಿವೇಶನಕ್ಕೆ ಮೋದಿ ಸಿದ್ಧತೆ : ಕಾಂಗ್ರೆಸ್



**ನವದೆಹಲಿ:** ತುರ್ತು ಪರಿಸ್ಥಿತಿಯ 50 ನೇ ವರ್ಷಾಚರಣೆಯನ್ನು ಗುರುತಿಸಲು ಮುಂದಿನ ತಿಂಗಳು ಸಂಸತ್ತಿನ ವಿಶೇಷ ಅಧಿವೇಶನವನ್ನು ನಡೆಸುವ ಬಗ್ಗೆ ಪರಿಗಣಿಸಲಾಗುತ್ತಿದೆ ಎಂದು ಕಾಂಗ್ರೆಸ್ ಹೇಳಿಕೊಂಡಿದೆ. ಇದು ಪ್ರಧಾನಿ ನರೇಂದ್ರ ಮೋದಿಯವರ ನೈಜ ಮತ್ತು ಹೆಚ್ಚು ತುರ್ತು ವಿಷಯಗಳಿಂದ ದಿಕ್ಕು ತಪ್ಪಿಸುವ ಮತ್ತು ಗಮನ ಬೇರೆಡೆ ಸೆಳೆಯುವ ಮತ್ತೊಂದು ಶ್ರೇಷ್ಠ ವ್ಯಾಯಾಮವಾಗಿದೆ ಎಂದು ಅದು ಹೇಳಿದೆ.

ಪಹಲ್ಗಾಮ್ ಭಯೋತ್ಪಾದಕ ದಾಳಿ ಮತ್ತು ಅದರ ಪರಿಣಾಮಗಳ ಕುರಿತು ಭಾರತೀಯ ರಾಷ್ಟ್ರೀಯ ಕಾಂಗ್ರೆಸ್ ಏಪ್ರಿಲ್ 22ರ ರಾತ್ರಿಯಿಂದಲೇ ಪ್ರಧಾನಿಯವರ ಅಧ್ಯಕ್ಷತೆಯಲ್ಲಿ ಸರ್ವಪಕ್ಷ ಸಭೆ ಕರೆಯುತ್ತಿದೆ ಎಂದು ಕಾಂಗ್ರೆಸ್ ಸಂವಹನ ಉಸ್ತುವಾರಿ ಪ್ರಧಾನ ಕಾರ್ಯದರ್ಶಿ ಜೈರಾಮ್ ರಮೇಶ್ ಹೇಳಿದ್ದಾರೆ.ಅದು ಇನ್ನೂ ನಡೆದಿಲ್ಲ ಎಂದು ಅವರು ಹೇಳಿದರು.

ಮೇ 10 ರಂದು, ಲೋಕಸಭೆಯಲ್ಲಿನ ಎಲ್‌ಒಪಿ ಮತ್ತು ರಾಜ್ಯಸಭೆಯಲ್ಲಿನ ಎಲ್‌ಒಪಿ ಎರಡೂ ಸಂಸತ್ತಿನ ವಿಶೇಷ ಅಧಿವೇಶನವನ್ನು ಕರೆಯುವಂತೆ ಮತ್ತು ನಿರ್ಣಯದ ಮೂಲಕ ದೇಶದ ಸಾಮೂಹಿಕ ಸಂಕಲ್ಪವನ್ನು ಪ್ರದರ್ಶಿಸುವಂತೆ ವಿನಂತಿಸಿ ಪ್ರಧಾನಿಗೆ ಪತ್ರ ಬರೆದವು. ಪ್ರಧಾನಿ ಆ ಸಲಹೆಯನ್ನು ಸಹ ಸ್ವೀಕರಿಸಿಲ್ಲ ಎಂದು ರಮೇಶ್ ಎಕ್ಸ್ ಪೋಸ್ಟ್‌ನಲ್ಲಿ ತಿಳಿಸಿದ್ದಾರೆ. ಈಗ ತುರ್ತು ಪರಿಸ್ಥಿತಿಯ 50 ನೇ ವಾರ್ಷಿಕೋತ್ಸವವನ್ನು ಗುರುತಿಸಲು ಜೂನ್ 25–26 ರಂದು ಸಂಸತ್ತಿನ ವಿಶೇಷ ಅಧಿವೇಶನವನ್ನು ಪರಿಗಣಿಸಲಾಗುತ್ತಿದೆ ಎಂದು ತೋರುತ್ತಿದೆ ಎಂದು ರಮೇಶ್ ಹೇಳಿದ್ದಾರೆ.

ಸರ್ಕಾರ ಅಥವಾ ಬಿಜೆಪಿಯಿಂದ ತಕ್ಷಣದ ಪ್ರತಿಕ್ರಿಯೆ ಬಂದಿಲ್ಲ.ಕಾಂಗ್ರೆಸ್ ಮುಖಂಡರು, ಇದು ಪ್ರಧಾನಿಯಿಂದ ನಿಜವಾದ ಮತ್ತು ಹೆಚ್ಚು ತುರ್ತು ಸಮಸ್ಯೆಗಳಿಂದ ಬೇರೆಡೆಗೆ ತಿರುಗುವ ಮತ್ತು ಗಮನವನ್ನು ಬೇರೆಡೆಗೆ ಸೆಳೆಯುವ ಮತ್ತೊಂದು ಶ್ರೇಷ್ಠ ವ್ಯಾಯಾಮವಾಗಲಿದೆ ಎಂದಿದೆ.

### ಪಂಚ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆ

# ಸ್ವಾತಂತ್ರ್ಯ ನಂತರ ದೇಶದಲ್ಲಿ ಅತ್ಯಂತ ಯಶಸ್ಸು ಕಂಡ ಪಂಚ ಗ್ಯಾರಂಟಿ ಯೋಜನೆಗಳು ಅರ್ಹವಿರುವ ಕಟ್ಟ ಕಡೇಯ ವ್ಯಕ್ತಿಗೂ ತಲುಪಬೇಕು:ಸಚಿವ ಎಚ್ ಕೆ ಪಾಟೀಲ



**ಗದಗ :** ಸ್ವಾತಂತ್ರ್ಯ ನಂತರ ದೇಶದಲ್ಲಿ ಅತ್ಯಂತ ಯಶಸ್ಸು ಕಂಡ ಸರ್ಕಾರದಿಂದ ಅನುಷ್ಠಾನಿತ ಪಂಚ ಗ್ಯಾರಂಟಿ ಯೋಜನೆಗಳು ಅರ್ಹವಿರುವ ಕಟ್ಟ ಕಡೇಯ ಫಲಾನುಭವಿಗಳಿಗೆ ಒದಗಬೇಕು ಎಂದು ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್. ಕೆ.ಪಾಟೀಲ ಅವರು ಹೇಳಿದರು

ನಗರದ ಎಸಿ ಆವರಣದಲ್ಲಿರುವ ತಾಲೂಕ ಗ್ಯಾರಂಟಿ ಯೋಜನೆಗಳ ಕಾರ್ಯಲಯದಲ್ಲಿ ಸೋಮವಾರ ಜರುಗಿದ ಗದಗ ತಾಲೂಕ ಮಟ್ಟದ ಗ್ಯಾರಂಟಿ ಸಮಿತಿ ಸಭೆಯಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಗೃಹಲಕ್ಷ್ಮಿ ಯೋಜನೆಯಿಂದ ರಾಜ್ಯದ ಮಹಿಳೆಯರ ಆರ್ಥಿಕ ಪರಿಸ್ಥಿತಿ ಸುಧಾರಣೆ ಗೊಂಡಿದೆ ಜಿಲ್ಲೆಯಲ್ಲಿ ಜಿ ಎಸ್ ಟಿ ಯಲ್ಲಿ ನೊಂದಾಣೆಗೊಂಡು ನಂತರ ರದ್ದು ಮಾಡಿದ ಮೇಲೂ ಗೃಹಲಕ್ಷ್ಮಿ ಯೋಜನೆಯಿಂದ ವಂಚಿತರಾದವರಿಗೆ ಕೂಡಲೇ ಕ್ರಮಕೈಗೊಳ್ಳಬೇಕು ಎಂದು ತಿಳಿಸಿದರು.

ಇದಕ್ಕೆ ಪ್ರತಿಕ್ರಿಯೆಸಿದ ಅಧಿಕಾರಿಗಳು ಜಿ ಎಸ್ ಟಿ ಯಿಂದ ವಂಚಿತರಾದವರ ಪಟ್ಟಿಯನ್ನು ಈಗಾಗಲೇ ರಾಜ್ಯ ಕಛೇರಿಗೆ ಕಳುಹಿಸಲಾಗಿದೆ ಅಗಷ್ಟರ ಒಳಗಾಗಿ ಅವರನ್ನು ಜಿ ಎಸ್ ಟಿ ಪೋರ್ಟಲ್ ನಿಂದ ಅವರ ಹೆಸರುಗಳನ್ನು ತೆಗೆದು ಹಾಕಿ ಗೃಹಲಕ್ಷ್ಮಿ ದೊರಕುವ ಹಾಗೇ ಮಾಡುಲಾಗುವುದು ಎಂದು ತಿಳಿಸಿದ್ದಾರೆ ಎಂದು ಸಭೆಗೆ ಮಾಹಿತಿ ನೀಡಿದರು.

ಅನ್ನಭಾಗ್ಯ ಯೋಜನೆಯ ಸಮರ್ಪಕ ಅನುಷ್ಠಾನಕ್ಕಾಗಿ ಆಹಾರ ಇಲಾಖೆಯ ಅಧಿಕಾರಿಗಳು ಪಡಿತರ ಅಂಗಡಿದಾರರ ಜೊತೆಗೆ ಸಭೆ ನಡೆಸಬೇಕು. ಅನ್ನಭಾಗ್ಯದ ಅಕ್ಕಿಯು ಅರ್ಹ ಫಲಾನುಭವಿಗಳಿಗೆ ತಲುಪಬೇಕು 1 ವರ್ಷದಿಂದ ಪಡಿತರ ಅಕ್ಕಿಯನ್ನು ಪಡೆಯದೇಯಿರುವ ಪಡಿತರ ಕಾರ್ಡಗಳ ಮಾಹಿತಿ ನೀಡಬೇಕೆಂದು ಮಾಹಿತಿ ಕೇಳಿದರು.

ಶಕ್ತಿ ಯೋಜನೆಯಿಂದ ಮಹಿಳೆಯರಿಗೆ ಜೀವನದಲ್ಲಿ ನಿಜವಾದ ಶಕ್ತಿ ಬಂದತಾಗಿದೆ ಮಹಿಳೆಯರು ಸ್ವಾವಲಂಬನೆಯ ಬದುಕು ನಡೆಸಲು ಸಹಕಾರಿಯಾಗಿದೆ ಎಂದು ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್. ಕೆ.ಪಾಟೀಲ ಅವರು ಹೇಳಿದರು.

ಗೃಹಲಕ್ಷ್ಮಿ ಯೋಜನೆಯ ಸಮರ್ಪಕ ಅನುಷ್ಠಾನಕ್ಕಾಗಿ ಅಂಗನವಾಡಿ ಮೇಲ್ವಿಚಾರಕಿಯರು ( ಸುಪರ್ ವೈಸರ್ ) ಹಾಗೂ ಅಂಗನವಾಡಿ ಕಾರ್ಯಕರ್ತೆಯರ ಸಭೆ ಕರೆದು ಸರ್ವೆ ಕಾರ್ಯ ಚುರುಕುಗೊಳಿಸಬೇಕೆಂದು ಎಂದು ಅಶೋಕ ಮಂದಾಲಿ ತಿಳಿಸಿದರು.

ಜಿಲ್ಲಾ ಮಟ್ಟದ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಜಿಲ್ಲಾಧ್ಯಕ್ಷ ಬಿ ಬಿ ಅಸೂಟಿ ಮಾತನಾಡಿ ತಮ್ಮ ಗಮನಕ್ಕೆ ಬಂದ ಸಮಸ್ಯೆ ಯೊಂದರಲ್ಲಿ ಒಂದು ಮನೆಯ ಯಜಮಾನ

ಗೃಹಜ್ಯೋತಿ ಫಲಾನುಭವಿಯಾಗಿದ್ದು ಎಷ್ಟು ಕಡಿಮೆ ವಿದ್ಯುತ್ ಉಪಯೋಗಿಸಿದರು ವಿದ್ಯುತ್ ಬಿಲ್ ಬರುತ್ತಿದೆ ಎಂದು ಸಮಸ್ಯೆ ಯನ್ನು ಸಭೆಗೆ ತಿಳಿಸಿದರು.

ಇದಕ್ಕೆ ಉತ್ತರಿಸಿದ ಹೆಸ್ಕಾಂ ಅಧಿಕಾರಿಗಳು

ಗೃಹಜ್ಯೋತಿ ಫಲಾನುಭವಿಗಳಿಗೆ 2022–23 ಸಾಲಿನಲ್ಲಿ ಉಪಯೋಗಿಸಿದ ವಿದ್ಯುತ್ ವನ್ನು ಮಾಪನವಾಗಿ ತೆಗೆದುಕೊಳ್ಳುತ್ತವೆ ಹಾಗಾಗಿ ಹಿಂದಿನ ಒಂದು ವರ್ಷ ಮನೆಯಲ್ಲಿ ಯಾರು ಇಲ್ಲದ ಕಾರಣ ಅತ್ಯಂತ ಕಡಿಮೆ ವಿದ್ಯುತ್ ಬಳಕೆಯಾಗಿದ್ದು ಸರ್ಕಾರದ ಆದೇಶದ ಅನುಸಾರ ಹಿಂದಿನ ವರ್ಷದ ವಿದ್ಯುತ್ ಬಳಕೆಯನ್ನು ಮಾಪನವಾಗಿ ತೆಗೆದುಕೊಂಡಿದರಿಂದ ಹೀಗಾಗಿದೆ ಎಂದು ಮಾಹಿತಿ ನೀಡಿದರು.

ಪಂಚಗ್ಯಾರಂಟಿ ಯೋಜನೆಯ ಸಂಬಂಧಿತ ಅಧಿಕಾರಿಗಳು ಈ ಕೆಳಗಿನಂತೆ ಸಭೆಗೆ ಮಾಹಿತಿ ಒದಗಿಸಿದರು. ಗೃಹಲಕ್ಷ್ಮಿ ಯೋಜನೆಯಡಿ ಜನೇವರಿ ರವರೆಗೆ ಗದಗ ತಾಲೂಕಿನಲ್ಲಿ 80363 ನೋಂದಣಿಯಾದ ಅರ್ಜಿಗಳ ಪೈಕಿ 79531 ಅರ್ಜಿಗಳಿಗೆ ಮಂಜೂರಾತಿ ದೊರೆತಿದೆ ಮಂಜೂರಾತಿ ಗೊಂಡ ಫಲಾನುಭವಿಗಳಿಗೆ ಡಿಬಿಡಿ ಮೂಲಕ ಹಣ ಪಾವತಿಸಲಾಗಿದೆ. ಶೇಕಡ 99.28 ಪ್ರಗತಿ ಸಾಧಿಸಿದೆ. ಜಿಲ್ಲೆಯಲ್ಲಿ ವಾಕರಸಾಸಂಸ್ಥೆಯಿಂದ ಗದಗ ಘಟಕದಲ್ಲಿ 11–6–2023 ರಿಂದ 05–05–2025 ರವರೆಗೆ 9521760 ಪುರುಷ ಪ್ರಯಾಣಿಕರು ಹಾಗೂ 15627215 ಮಹಿಳಾ ಪ್ರಯಾಣಿಕರು ಸೇರಿದಂತೆ ಒಟ್ಟಾರೆ 25148975 ಪ್ರಯಾಣಿಕರು ಪ್ರಯಾಣಿಸಿದ್ದಾರೆ. ಶಕ್ತಿ ಯೋಜನೆಯಡಿ ಗದಗ ಘಟಕದಲ್ಲಿ 488213616 ರೂ. ಮಹಿಳಾ ಪ್ರಯಾಣಿಕರ ಆದಾಯವಾಗಿದೆ. ಅನ್ನಭಾಗ್ಯ ಯೋಜನೆಯಡಿ ಗದಗ ತಾಲೂಕಿನಲ್ಲಿ ಡಿಸೆಂಬರ್ 2024 ರ ಮಾಹೆಯಲ್ಲಿ ಗದಗ ಪಡಿತರ ಪ್ರದೇಶದಲ್ಲಿ 74596 ಬಿಪಿಎಲ್ ಕಾರ್ಡುದಾರರ ಫಲಾನುಭವಿಗಳಿಗೆ 4,0431100 ರೂ. ಗಳನ್ನು ಡಿಬಿಟಿ ಮೂಲಕ ಹಣ ಸಂದಾಯ ಮಾಡಲಾಗಿದೆ.

ಗೃಹಜ್ಯೋತಿ ಯೋಜನೆಯಡಿ 28–2–2025 ರವರೆಗೆ ಗದಗ ಗ್ರಾಮೀಣ ಉಪವಿಭಾಗದಲ್ಲಿ 53268 ಸ್ಥಾವರಗಳು ಅರ್ಹವಿದ್ದು 53060 ಸ್ಥಾವರಗಳ ನೋಂದಣಿಯಾಗಿದ್ದು ಶೇ 99.33 ರಷ್ಟು ಪ್ರಗತಿಯಾಗಿದೆ. ಯುವನಿಧಿ ಯೋಜನೆಯಡಿ ಗದಗ ತಾಲೂಕಿನಲ್ಲಿ ಜನವರಿ 2025 ರವರೆಗೆ 1704 ಫಲಾನುಭವಿಗಳ ನೋಂದಣಿಯಾಗಿದ್ದು 826 ಅರ್ಹ ಫಲಾನುಭವಿಗಳಿಗೆ ಡಿಬಿಟಿ ಮೂಲಕ 24,57,000 ರೂ. ವರ್ಗಾವಣೆಯಾಗಿರುತ್ತದೆ ಎಂದು ಸಂಬಂಧಿತ ಅಧಿಕಾರಿಗಳು ಮಾಹಿತಿ ಒದಗಿಸಿದರು. ಸಭೆಯಲ್ಲಿ ತಾಲೂಕು ಗ್ಯಾರಂಟಿ ಸಮಿತಿಯ ಸದಸ್ಯರಾದ ಶಂಭು ಕಾಳೆ, ಶ್ರೀಮತಿ ಮೀನಾಕ್ಷಿ ಬೆನಕಣ್ಣವರ, ಸಂಗು ಕರಕಲಮಟ್ಟಿ, ನಿಂಗಪ್ಪ ದೇಸಾಯಿ, ಸಂಗಮೇಶ ಹಾದಿಮನಿ, ರಮೇಶ ಹೊನ್ನಿನಾಯ್ಕರ್ , ದೇವರೆಡ್ಡಿ ತಿರ್ಲಾಪುರ, ಮಲ್ಲಪ್ಪ ದಂಡಿನ, ಗಣೇಶ ಸಿಂಗ್ ಮಿಟಾಡ, ಮಲ್ಲಪ್ಪ ಬಾರಕೇರ, ಭಾಷಾ ಮಲ್ಲಸಮುದ್ರ, ಸಾವಿತ್ರಿ ಹೂಗಾರ, ಶರೀಫ್, ತಾಲೂಕು ಪಂಚಾಯತ್ ಮ್ಯಾನೇಜರ್ ರುದ್ರಪ್ಪ ಬಾವಿ, ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನಿತ ಅಧಿಕಾರಿಗಳು ಹಾಜರಿದ್ದರು.

# ಕಾನೂನು–ಸುವ್ಯವಸ್ಥೆ ಕುಸಿತದಿಂದ ರಾಷ್ಟ್ರ ಮಟ್ಟದಲ್ಲಿ ಕರ್ನಾಟಕದ ವರ್ಚಸ್ಸಿಗೆ ಧಕ್ಕೆ: ಶೋಭಾ ಕರಂದ್ಲಾಜೆ



**ಬೆಂಗಳೂರು:** ಕರ್ನಾಟಕದಲ್ಲಿ ಕಾನೂನು ಮತ್ತು ಸುವ್ಯವಸ್ಥೆ ಕುಸಿತವಾಗಿದ್ದು, ಇದರಿಂದ ರಾಷ್ಟ್ರಮಟ್ಟದಲ್ಲಿ ರಾಜ್ಯದ ವರ್ಚಸ್ಸಿಗೆ ಧಕ್ಕೆಯಾಗಿದೆ ಎಂದು ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆಯವರು ಶುಕ್ರವಾರ ಹೇಳಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ದಕ್ಷಿಣ ಕನ್ನಡ ಉಸ್ತುವಾರಿ ಸಚಿವ ದಿನೇಶ್ ಗುಂಡೂರಾವ್ ಜಿಲ್ಲೆಯಲ್ಲಿ ಮುಸ್ಲಿಮರಿಗೆ ರಕ್ಷಣೆ ಇಲ್ಲದಂತಾಗಿದೆ. ಅವರೇನು ಒಂದು ನಿರ್ದಿಷ್ಟ ಸಮುದಾಯವನ್ನು ರಕ್ಷಿಸುವ ಉಸ್ತುವಾರಿ ಸಚಿವರೇ? ಕಾಂಗ್ರೆಸ್ ಸರ್ಕಾರ ಶೀಘ್ರದಲ್ಲೇ ಕರ್ನಾಟಕವನ್ನು ಗೂಂಡಾ ರಾಜ್ಯವನ್ನಾಗಿ ಮಾಡಲಿದೆ. ದೆಹಲಿಯಲ್ಲಿ, ಕರ್ನಾಟಕದಲ್ಲಿ ಏನಾಗುತ್ತಿದೆ ಎಂದು ಜನರು ನನ್ನನ್ನು ಕೇಳುತ್ತಾರೆ, ಇದಕ್ಕೆ ಉತ್ತರ ನೀಡಲಾಗದೆ ನಾವು ಮೂಕವಿಸ್ಮಿತರಾಗಿದ್ದೇವೆ. ಸಿದ್ದರಾಮಯ್ಯ, ಡಿಕೆ ಶಿವಕುಮಾರ್ ಮತ್ತು ಡಾ. ಜಿ. ಪರಮೇಶ್ವರ ನೇತೃತ್ವದಲ್ಲಿ, ಕರ್ನಾಟಕದಲ್ಲಿ ಕಾನೂನು ಮತ್ತು ಸುವ್ಯವಸ್ಥೆ ಕುಸಿದಿದೆ ಎಂದು ಕಿಡಿಕಾರಿದ್ದಾರೆ.

ಸರ್ಕಾರ ಜನರಿಗೆ ಗ್ಯಾರಂಟಿ ನೀಡಿದೆ, ಆದರೆ, ಅವರ ಜೀವಕ್ಕೆ ಯಾವುದೇ ಗ್ಯಾರಂಟಿ ಇಲ್ಲದಂತಾಗಿದೆ. 2013 ರಲ್ಲಿ, ಸಿದ್ದರಾಮಯ್ಯ ಪಿಎಫ್ಐ ಕಾರ್ಯಕರ್ತರ ಮೇಲಿನ ಪ್ರಕರಣಗಳನ್ನು ಹಿಂತೆಗೆದುಕೊಂಡರು. 800 ರೌಡಿಗಳನ್ನು ಬಿಡುಗಡೆ ಮಾಡಿದರು. ಈ ರೌಡಿಗಳು ನಮ್ಮ ಹಿಂದೂ ಕಾರ್ಯಕರ್ತರನ್ನು ಕೊಂದರು. ರಾಜ್ಯ ಸಚಿವ ಸಂಪುಟವು ಹುಬ್ಬಳ್ಳಿ ಪೊಲೀಸ್ ಠಾಣೆಯನ್ನು ಸುಟ್ಟುಹಾಕಿದವರ 46 ಪ್ರಕರಣಗಳನ್ನು ಹಿಂತೆಗೆದುಕೊಂಡಿತು. ಇದರಿಂದ ಕ್ರಿಮಿನಲ್ ಹಿನ್ನೆಲೆಯ 1,500 ಜನರು ಬಿಡುಗಡೆಯಾಗುತ್ತಿದ್ದರು. ಆದರೆ ಹೈಕೋರ್ಟ್ ಅದನ್ನು ತಡೆಹಿಡಿಯಿತು ಎಂದು ಹೇಳಿದರು.ಇದೇ ವೇಳೆ ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರ ಮೇಲೆ ಪರೋಕ್ಷ ವಾಗ್ದಾಳಿ ನಡೆಸಿದ ಅವರು, ರಿಯಲ್ ಎಸ್ಟೇಟ್ ಮಾಫಿಯಾಕ್ಕೆ ಸಹಾಯ ಮಾಡಲು ರಾಮನಗರವನ್ನು ಬೆಂಗಳೂರು ದಕ್ಷಿಣ ಜಿಲ್ಲೆ ಎಂದು ಮರುನಾಮಕರಣ ಮಾಡಲಾಗಿದೆ. ಆದರೆ, ಬೆಂಗಳೂರಿನ ಸಂಚಾರ ಸಮಸ್ಯೆಗಳನ್ನು ಸರಿಪಡಿಸಲು ಯಾವುದೇ ಪ್ರಯತ್ನಗಳು ನಡೆಸದಿರುವುದು ಬೇಸರ ತಂದಿದೆ. ಮೆಟ್ರೋ ಭೂಗತ ಮಾರ್ಗವಾಗಬೇಕಿತ್ತು. ಆದರೆ, ಅದು ಆಗಲಿಲ್ಲ. ಕಸದ ಸೆಸ್ ಸಂಗ್ರಹಿಸಲಾಗುತ್ತಿದ್ದು, ಜನರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಬ್ರ್ಯಾಂಡ್ ಬೆಂಗಳೂರು ಕೇವಲ ಕಾಗದದಲ್ಲಿದೆ ಎಂದು ಕಿಡಿಕಾರಿದರು.

ಇದೇ ವೇಳೆ ದಕ್ಷಿಣ ಕನ್ನಡದ ಜನರು ಗ್ಯಾರಂಟಿಗಳನ್ನು ಪಡೆಯುವಲ್ಲಿ ಮುಂಚೂಣಿಯಲ್ಲಿದ್ದಾರೆ. ಆದರೆ ಕಾಂಗ್ರೆಸ್‌ಗೆ ಮತ ಹಾಕುವಲ್ಲಿ ಇಲ್ಲ ಎಂಬ ಶಿವಕುಮಾರ್ ಅವರ ಹೇಳಿಕೆಯನ್ನು ಟೀಕಿಸಿದ ಅವರು, ಕಾಂಗ್ರೆಸ್ ಮತದಾರರಿಗೆ ಮಾತ್ರ ಭರವಸೆ ನೀಡುವುದಾಗಿ ಕಾಂಗ್ರೆಸ್ ಘೋಷಿಸಬೇಕಿತ್ತು. ಪ್ರತ್ಯೇಕತಾವಾದದ ಧ್ವನಿಗಳು ಕೇಳಿಬರುತ್ತಿರುವ ಸಮಯದಲ್ಲಿ, ಶಿವಕುಮಾರ್ ಅವರ ಹೇಳಿಕೆ ಅನಗತ್ಯ ಎಂದು ಹೇಳಿದರು.

## ತರಬೇತಿಗಾಗಿ ಅರ್ಜಿ ಆಹ್ವಾನ

**ಗದಗ :** ಸರ್ಕಾರದ ಆದೇಶದನ್ವಯ 2024–25 ನೇ ಸಾಲಿನಲ್ಲಿ ಪ್ರವಾಸೋದ್ಯಮ / ಆತಿಥ್ಯ ಕ್ಷೇತ್ರದಲ್ಲಿ ಕೌಶಲ್ಯಾಭಿವೃದ್ಧಿ ತರಬೇತಿ ಕಾರ್ಯಕ್ರಮವನ್ನು ಪರಿಶಿಷ್ಟ ಜಾತಿಗೆ ಸೇರಿದ 292 ಅಭ್ಯರ್ಥಿಗಳಿಗೆ ಹಾಗೂ ಪರಿಶಿಷ್ಟ ಪಂಗಡಕ್ಕೆ ಸೇರಿದ 162 ಅಭ್ಯರ್ಥಿಗಳಿಗೆ ರಾಜ್ಯ ಹಾಗೂ ಕೇಂದ್ರ ಸರ್ಕಾರದ ಆತಿಥ್ಯ ಕ್ಷೇತ್ರದ ಸಂಸ್ಥೆಗಳಾದ ಫುಡ್ ಕ್ರಾಫ್ಟ್ ಇನಸ್ಟಿಟ್ಯೂಟ್ ಮೈಸೂರು ಹಾಗೂ ಇನ್ಸಟಿಟ್ಯೂಟ್ ಆಫ್ ಹೋಟೆಲ್ ಮ್ಯಾನೇಜ್ ಮೆಮಟ್ ರವರ ಮೂಲಕ ಸ್ಟೈಪಂಡ್, ವಸತಿ, ಊಟೋಪಚಾರ, ಯುನಿಫಾರಂ ಸಹಿತ ತರಬೇತಿ ಕಾರ್ಯಕ್ರಮವನ್ನು ಜಾರಿಗೊಳಿಸಲು ಉದ್ದೇಶಿಸಲಾಗಿದೆ. ಫುಡ್ ಅಂಡ್ ಬೆವರೇಜ್ ಸರ್ವಿಸ್ ಸ್ಟೀವರ್ಡ , ರೂಂ ಅಟೆಂಡೆಂಟ್ , ಫ್ರಂಟ್ ಆಫೀಸ್ ಅಸೋಸಿಯೇಟ್, ಮಲ್ಟಿ ಕ್ಯೂಸಿನ್ ಕುಕ್ ಕಾರ್ಯಕ್ರಮಗಳ ತರಬೇತಿಗಾಗಿ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ತರಬೇತಿ ಪಡೆಯಲು ಆಸಕ್ತ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ಜೂನ್ 12 ರೊಳಗೆ ಅರ್ಜಿಯನ್ನು ಪ್ರವಾಸೋದ್ಯಮ ಇಲಾಖೆ, ಗದಗ ಕಚೇರಿಯಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕ ಕಚೇರಿ 08372–233017 ಮೂಲಕ ಸಂಪರ್ಕಿಸಬಹುದಾಗಿದೆ.

## ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನ

**ಶಿವಕುಮಾರ :** ವತಿಯಿಂದ 2025ನೇ ಸಾಲಿನ ಎಸ್‌ಎಸ್‌ಎಲ್‌ಸಿ ಮತ್ತು ದ್ವಿತೀಯ ಪಿಯುಸಿ ಪರೀಕ್ಷೆಗಳಲ್ಲಿ ಶೇ. 75% ಕ್ಕಿಂತ ಹೆಚ್ಚಿನ ಅಂಕ ಪಡೆದ ಶಿವಮೊಗ್ಗ ನಗರದ ವೀರಶೈವ ಲಿಂಗಾಯಿತ ನೌಕರರ ಹಾಗೂ ವೀರಶೈವ ಲಿಂಗಾಯಿತ ಸಮಾಜ ಬಾಂಧವರ ಮಕ್ಕಳಿಗೆ ಪ್ರತಿಭಾ ಪುರಸ್ಕಾರಕ್ಕೆ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ವಿದ್ಯಾರ್ಥಿಯು 2025ರ ಎಸ್‌ಎಸ್‌ಎಲ್‌ಸಿ ಮತ್ತು ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಪ್ರಥಮ ಪ್ರಯತ್ನದಲ್ಲಿ ತೇರ್ಗಡೆಯಾಗಿರಬೇಕು. ವಿದ್ಯಾರ್ಥಿಯ ತಂದೆ/ತಾಯಿ ಶಿವಮೊಗ್ಗ ನಗರದಲ್ಲಿ ವಾಸವಿರಬೇಕು. ಆಯ್ಕೆಯಾದ ವಿದ್ಯಾರ್ಥಿಗಳಿಗೆ ಪ್ರಮಾಣ ಪತ್ರ ಹಾಗೂ ನಗದು ಪುರಸ್ಕರವನ್ನು ನೀಡಿ ಗೌರವಿಸಲಾಗುವುದು.

ವಿದ್ಯಾರ್ಥಿಯ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರ. ದೃಢೀಕೃತ ಅಂಕಪಟ್ಟಿ. ವಿದ್ಯಾರ್ಥಿ/ನಿಯ ತಂದೆ/ತಾಯಿಯ ವಾಸಸ್ಥಳದ ಪುರಾವೆ, ಜಾತಿ ಪ್ರಮಾಣ ಪತ್ರ/ಶಾಲಾ ದಾಖಲಾತಿ/ಶಾಲಾ ವರ್ಗಾವಣೆ ಪತ್ರ(ಖಿಅ) ನೀಡಬೇಕು. ಅರ್ಜಿ ಸಲ್ಲಿಕೆ ಯಶಸ್ವಿಗೊಂಡ ನಂತರ ನೊಂದಾಯಿತ ಇ–ಮೇಲ್‌ಗೆ ಸ್ವೀಕೃತಿ ರವಾನೆಯಾಗಲಿದೆ. ಀಣಣಠಿ://ಣುಟಿಥಿಣಡಿಟ.ಛಿಂಟ/ರಿಥಿಟರ2025 ಈ ಲಿಂಕ್ ಮುಖಾಂತರ ಅರ್ಜಿಯನ್ನು ಸಲ್ಲಿಸುವುದು. ಅರ್ಜಿ ಸಲ್ಲಿಸಲು 25–06–2025 ಕೊನೆಯ ದಿನವಾಗಿರುತ್ತದೆ.ಶೇಕಡವಾರು ಅಂಕಗಳನ್ನು ನಿರ್ಧರಿಸಿ ಅರ್ಜಿಯನ್ನು ಪರಿಗಣಿಸುವ ನಿರ್ಧಾರ ಸಂಘದ್ದಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಬೆಳಿಗ್ಗ 10.30 ರಿಂದ ಸಂಜೆ 6.00 ವರೆಗೆ 9916278470, 9448231968 ನ್ನು ಸಂಪರ್ಕಿಸಬಹುದೆಂದು ಸಂಘದ ಅಧ್ಯಕ್ಷರಾದ ಸಿ.ಎಸ್.ಷಡಾಕ್ಷರಿ ತಿಳಿಸಿದ್ದಾರೆ.

## ಕ್ರೀಡಾ ವಸತಿ ಶಾಲೆ/ನಿಲಯಗಳ ಪ್ರವೇಶಕ್ಕೆ ವಿಶೇಷ ಟ್ರಯಲ್ಸ್ ಪಡೆಯಲು ಅವಕಾಶ

**ಶಿವಮೊಗ್ಗ:** ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ವಿವಿಧ ಕ್ರೀಡಾಶಾಲೆ/ವಸತಿ ನಿಲಯಗಳಿಗೆ 2025–26ನೇ ಸಾಲಿಗೆ 8ನೇ ತರಗತಿಗೆ ಮತ್ತು ಪ್ರಥಮ ಪಿ.ಯು.ಸಿ. ತರಗತಿಗಳಿಗೆ ಪ್ರವೇಶ ನೀಡಲು ಅವಕಾಶ ವಂಚಿತ ಮತ್ತು ಉತ್ತಮ ಪ್ರದರ್ಶನ ನೀಡಲು ಸಾಧ್ಯವಾಗದ ಕ್ರೀಡಾಪಟುಗಳಿಗಾಗಿ ವಿಶೇಷ ಆಯ್ಕೆ ಪ್ರಕ್ರಿಯೆಯನ್ನು ನಡೆಸಲು ತೀರ್ಮಾನಿಸಿದ್ದು, ಶಿವಮೊಗ್ಗ ಜಿಲ್ಲೆಯ ವಿದ್ಯಾರ್ಥಿಗಳು ಭಾಗವಹಿಸಬಹುದಾಗಿದೆ.ಜೂ.06 ರಂದು ಬೆಳಗ್ಗೆ 9.30 ರಿಂದ ಬೆಂಗಳೂರಿನ ಶ್ರೀಕಂಠೀರವ ಕ್ರೀಡಾಂಗಣದಲ್ಲಿ ಬಾಸ್ಕೆಟ್‌ಬಾಲ್, ಕಬಡ್ಡಿ, ವಾಲಿಬಾಲ್ ಮತ್ತು ಬೆಂಗಳೂರು ನಗರ ಜಿಲ್ಲೆಯ ಅಕ್ಕಿತಮ್ಮನಹಳ್ಳಿ ಹಾಕಿ ಕ್ರೀಡಾಂಗಣದಲ್ಲಿ ಹಾಕಿ. ವಿಜಯಪುರ ಜಿಲ್ಲೆ ಡಾ.ಬಿ.ಆರ್.ಅಂಬೇಡ್ಕರ್ ಜಿಲ್ಲಾ ಕ್ರೀಡಾಂಗಣದಲ್ಲಿ ಸೈಕ್ಲಿಂಗ್. ಬೆಳಗಾವಿ ಜಿಲ್ಲೆಯ ಯ.ಸ.& ಕ್ರೀಡಾ ಇಲಾಖೆಯ ಜಿಲ್ಲಾ ಕ್ರೀಡಾಂಗಣದಲ್ಲಿ ಜುಡೋ ಮತ್ತು ಕುಸ್ತಿ. ಬೆಂಗಳೂರು ಉತ್ತರ ದ ಸರ್ಕಾರಿ ಕ್ರೀಡಾ ಪ್ರೌಢಶಾಲೆ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಶ್ರೀ ಜಯಪ್ರಕಾಶ್ ನಾರಾಯಣ ರಾಷ್ಟ್ರೀಯ ಕ್ರೀಡಾಂಗಣದಲ್ಲಿ ಖೋ–ಖೋ ಕ್ರೀಡೆಗಳನ್ನು ನಡೆಸಲಾಗುತ್ತಿದ್ದು, ಅವಕಾಶ ವಂಚಿತ ಕ್ರೀಡಾಪಟುಗಳು ಇದರ ಸದುಪಯೋಗ ಪಡೆದುಕೊಳ್ಳುವಂತೆ ಶಿವಮೊಗ್ಗ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

## ಅವಧಿ ವಿಸ್ತರಣೆ

**ಶಿವಮೊಗ್ಗ:** ಶಿವಮೊಗ್ಗ ಜಿಲ್ಲೆಯ ಪರಿಶಿಷ್ಟ ಪಂಗಡದವರಿಗೆ ಸ್ಪಿಂಕ್ಲರ್ ಸೆಟ್ (ರೈನ್ ಗನ್) ನೀಡಲು ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಸುವ ಕೊನೆಯ ದಿನಾಂಕವನ್ನು ಜೂ. 30ರವರೆಗೆ ವಿಸ್ತರಿಸಲಾಗಿದೆ.ಅರ್ಹ ಅಭ್ಯರ್ಥಿಗಳು ನಿಗದಿತ ನಮೂನೆ ಅರ್ಜಿಯನ್ನು ಆಯಾ ತಾಲೂಕುಗಳ ಸಹಾಯಕ ನಿರ್ದೇಶಕರ ಕಚೇರಿ, ಸಮಾಜ ಕಲ್ಯಾಣ ಇಲಾಖೆಯಿಂದ ಪಡೆದು ಭರ್ತಿ ಮಾಡಿದ ಅರ್ಜಿಯನ್ನು ಜೂ.30ರೊಳಗಾಗಿ ಸಲ್ಲಿಸುವಂತೆ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

## ವಿದ್ಯಾರ್ಥಿ ವೇತನಕ್ಕಾಗಿ ಅರ್ಜಿ ಆಹ್ವಾನ

**ಶಿವಮೊಗ್ಗ:** ಶಿಕಾರಿಪುರ ಸಮಾಜ ಕಲ್ಯಾಣ ಇಲಾಖೆಯು 2025–26ನೇ ಸಾಲಿನಲ್ಲಿ ಪರಿಶಿಷ್ಟ ಪಂಗಡದ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನಕ್ಕಾಗಿ ರಾಜ್ಯ ವಿದ್ಯಾರ್ಥಿ ವೇತನ ತಂತ್ರಾಂಶದಲ್ಲಿ ಅರ್ಜಿ ಸಲ್ಲಿಸುವ ಮೊದಲು ರಾಷ್ಟ್ರೀಯ ವಿದ್ಯಾರ್ಥಿ ವೇತನ ಪೋರ್ಟಲ್ ಀಣಣಠಿ://ಛಿಂಟಚಿಡ್ಝುಛಿ.ರಿತತ.ಀಟಿ ನಲ್ಲಿ ಒನ್‌ಟೈಮ್ ನೋಂದಣಿ ಸಂಖ್ಯೆಯನ್ನು ಕಡ್ಡಾಯವಾಗಿ ರಚಿಸುವಂತೆ ಶಿಕಾರಿಪುರ ಸಮಾಜ ಕಲ್ಯಾಣ ಇಲಾಖೆಯ ಸಹಾಯ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ಶಿಕಾರಿಪುರ ಸಮಾಜ ಕಲ್ಯಾಣ ಇಲಾಖೆಯ ಸಹಾಯ ನಿರ್ದೇಶಕರ ಕಚೇರಿ ದೂ.ಸಂ.: 08187–295026 ನ್ನು ಸಂಪರ್ಕಿಸುವುದು.

# ಮನಸ್ಸಿನ ವ್ಯಾಯಾಮಕ್ಕೆ ಧ್ಯಾನ ಅತ್ಯಗತ್ಯ: ಲೀಲಾಜಿ




**ದಾವಣಗೆರೆ:** ಮನುಷ್ಯನಿಗೆ ಶಾರೀರಿಕ ವ್ಯಾಯಾಮದ ಜತೆಗೆ ಮನಸ್ಸಿನ ವ್ಯಾಯಾಮವೂ ಅಗತ್ಯ. ಶರೀರದ ವ್ಯಾಯಾಮಕ್ಕೆ ಆಸನಗಳ ಅಗತ್ಯವಿದ್ದರೆ, ಮನಸ್ಸಿನ ವ್ಯಾಯಾಮಕ್ಕೆ ಧ್ಯಾನ ಅತ್ಯಗತ್ಯ ಎಂದು ಬ್ರಹ್ಮಕುಮಾರಿ ಲೀಲಾಜಿ ಅಭಿಪ್ರಾಯಿಸಿದರು.

ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ನಿಮಿತ್ತ ಸಪ್ತರ್ಷಿ ಯೋಗಧಾರ ಸ್ಪೋರ್ಟ್ಸ್ ಅಕಾಡೆಮಿ ವತಿಯಿಂದ ಶನಿವಾರ ನಗರದ ಚಿಂದೋಡಿ ಲೀಲಾ ಕಲಾಕ್ಷೇತ್ರದಲ್ಲಿ ಏರ್ಪಡಿಸಿದ್ದ ರಾಷ್ಟ್ರ ಮಟ್ಟದ ಮಹಿಳೆಯರ ಯೋಗಾಸನ ಚಾಂಪಿಯನ್‌ಶಿಪ್ ಸ್ಪರ್ಧೆಗೆ ಚಾಲನೆ ನೀಡಿ ಅವರು ಮಾತನಾಡಿದರು. ಯೋಗಾಸನದ ಜತೆಗೆ ಪರಮಾತ್ಮನ ಧ್ಯಾನವೂ ಸೇರಿದರೆ ಜೀವನದಲ್ಲಿ ಎಲ್ಲವನ್ನೂ ಸುಲಭವಾಗಿ ಸಾಸಲು ಸಹಕಾರಿಯಾಗುತ್ತದೆ ಎಂದರು.

ಕೆಲ ದಶಕಗಳ ಹಿಂದೆ ಯೋಗ ಹೆಚ್ಚು ಪ್ರಚಲಿತವಾಗಿರಲಿಲ್ಲ. ಏಕೆಂದರೆ, ಆಗ ನಮ್ಮ ಅಜ್ಜ–ಅಜ್ಜಿಯವರು ಹೊಲ–ಮನೆಯ ಎಲ್ಲ ಕೆಲಸಗಳನ್ನು ಸ್ವತಃ ಮಾಡುತ್ತಿದ್ದರು. ಹೊಲದಲ್ಲಿ ಉಳುವ, ಬಿತ್ತುವ ಕೆಲಸ ಮಾಡುತ್ತಿದ್ದರು. ಮನೆಯಲ್ಲಿ ಕುಟ್ಟುವುದು, ಆರಿಸುವುದು, ತೊಳೆಯುವುದು ಹೀಗೆ ಎಲ್ಲ ಕೆಲಸಗಳ ಮಾಡುತ್ತಿದ್ದರು. ದೈಹಿಕ ಶ್ರಮದ ಕೆಲಸಗಳಲ್ಲಿಯೇ ಯೋಗಾಸನದ ಎಲ್ಲ ಆಸನಗಳೂ ಇರುವುದರಿಂದ ಅವರು ಪ್ರತ್ಯೇಕವಾಗಿ ಯೋಗಾಸನ ಮಾಡುತ್ತಿರಲಿಲ್ಲ. ಆದರೆ, ನಾವು ಇಂದು ನಮ್ಮ ಮನೆಯ ಎಲ್ಲ ಕೆಲಸಗಳನ್ನು ನಾವೇ ನಿರ್ವಹಿಸದೇ ಇರುವುದರಿಂದ ಉತ್ತಮ ಆರೋಗ್ಯಕ್ಕಾಗಿ ಯೋಗ ಮಾಡಬೇಕಾದ ಸನ್ನಿವೇಶ ಬಂದಿದೆ ಎಂದರು.

ಮಹಿಳೆಯರು ಯಾವ ಕ್ಷೇತ್ರದಲ್ಲಿ ಎಷ್ಟೇ ಎತ್ತರಕ್ಕೆ ಹೋದರೂ ಮಾನವೀಯತೆ, ತ್ಯಾಗ, ವಾತ್ಸಲ್ಯ, ಕರುಣೆಯಂಥ ಮೂಲಗುಣಗಳನ್ನು ತೊರೆಯಬಾರದು ಎಂದರು.ಅಂತಾರಾಷ್ಟ್ರೀಯ ಯೋಗಪಟುಗಳಾದ ಓರಿಸ್ಸಾದ ಸುಶ್ಮಿತಾ ರಾಯ್, ಚೆನ್ನೈನ ಗೌರಿ, ಪೊಲೀಸ್ ನಿರೀಕ್ಷಕಿ ಮಲ್ಲಮ್ಮ ವೇದಿಕೆಯಲ್ಲಿದ್ದರು. ಅಕಾಡೆಮಿಯ ಪ್ರಮುಖರಾದ ಡಾ. ಜೈಮುನಿ, ಡಾ. ಪರಶುರಾಮ್ ಇನ್ನಿತರರು ಕಾರ್ಯಕ್ರಮದಲ್ಲಿದ್ದರು.

# ಬಾಲ್ಯ ವಿವಾಹ ತಡೆಗಟ್ಟಲು ಸೂಚನೆ




**ಹಾಸನ :** ಜಿಲ್ಲೆಯಲ್ಲಿ ಬಾಲ್ಯ ವಿವಾಹ ತಡೆಗಟ್ಟಲು ಮುಂಜಾಗ್ರತೆ ವಹಿಸಿ ಎಚ್ಚರಿಕೆಯಿಂದ ಕರ್ತವ್ಯ ನಿರ್ವಹಿಸಲು ಜಿಲ್ಲಾಧಿಕಾರಿ ಸತ್ಯಭಾಮ ಅವರು ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಇಂದು ನಡೆದ ಮಕ್ಕಳ ಕಲ್ಯಾಣ ಸಮಿತಿ, ಮಕ್ಕಳ ಸಹಾಯವಾಣಿ, ಜಿಲ್ಲಾ ಮಕ್ಕಳಾ ರಕ್ಷಣಾ ಸಮಿತಿಗಳ ಸಭೆ ನಡೆಸಿ ಮಾತನಾಡಿದ ಅವರು ಮಕ್ಕಳ ಸಹಾಯವಾಣಿಗೆ ಕರೆ ಬಂದ ತಕ್ಷಣ ಸ್ಥಳಕ್ಕೆ ಹೋಗಿ ಪರಿಶೀಲನೆ ಮಾಡಿ ಕ್ರಮ ಕೈಗೊಳ್ಳಬೇಕು ನಿರ್ಲಕ್ಷ ಮಾಡಿದವರ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು.

1098 ಗೆ ಕರೆ ಬಂದಿವೆ ಬಾಲ್ಯ ವಿವಾಹ ನಡೆಯುತ್ತಿದೆ ಎಂದು ದೂರುಗಳು ಸಮುದಾಯದ ಮುಖಂಡರುಗಳಿಗೆ ಅರಿವು ಮೂಡಿಸಿ ಬಾಲ್ಯ ವಿವಾಹ ನಡೆಯದಂತೆ ಗಮನಹರಿಸಿ ಸೂಚಿಸಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಅಧಿಕಾರಿಗಳು ಗಮನಹರಿಸಿ ಹೆಚ್ಚು ಬಾಲ್ಯ ವಿವಾಹ ನಡೆಯುತ್ತಿರುವ ಬಗ್ಗೆ ಗುರುತಿಸಿ ಸ್ಥಳೀಯ ಸಮುದಾಯದ ಮುಖಂಡರುಗಳನ್ನು ಸೇರಿಸಿ ಅರಿವು ಮೂಡಿಸಲು ಕ್ರಮವಹಿಸಲು ಸೂಚಿಸಿದರು.

ಶಾಲೆಯಿಂದ ಹೊರಗುಳಿದ ಮಕ್ಕಳ ಬಗ್ಗೆ ಎಚ್ಚರವಿರಲಿ ಬಾಲ್ಯ ವಿವಾಹವಾಗಿದ್ದಾರ ಎಂಬುದಾಗಿ ಪರಿಶೀಲನೆ ಮಾಡುವಂತೆ ಸೂಚಿಸಿದರು.

ನಿರಂತರವಾಗಿ ಪೊಲೀಸ್ ಇಲಾಖೆಯೊಂದಿಗೆ ಸಂಪರ್ಕವಿಟ್ಟುಕೊಂಡು ಎಲ್ಲೆಲ್ಲಿ ಹೆಚ್ಚು ಬಾಲ್ಯ ವಿವಾಹ ನಡೆಯುತ್ತಿವೆ ಅವುಗಳ ಬಗ್ಗೆ ಹೆಚ್ಚಿನ ನಿಗಾ ವಹಿಸಲು ಸೂಚನೆ ನೀಡಿದರು.

ಬಾಲ್ಯ ವಿವಾಹ ನಿಷೇಧ, ಪೋಕ್ಸೋ ಕಾಯ್ದೆ, ಮಕ್ಕಳ ಹಕ್ಕುಗಳ ಸಂರಕ್ಷಣೆ, ಮಕ್ಕಳ ಕಳ್ಳ ಸಾಗಣೆ ಮತ್ತಿತರ ವಿಷಯಗಳ ಕುರಿತು ಸಂಬಂಧಿತ ಎಲ್ಲಾ ಇಲಾಖೆಗಳ ಅಧಿಕಾರಿಗಳು ಸಮನ್ವಯತೆ ಯಿಂದ ಕರ್ತವ್ಯ ನಿರ್ವಹಿಸಲು ಜಿಲ್ಲಾಧಿಕಾರಿ ಸತ್ಯಭಾಮ ಅವರು ಅಧಿಕಾರಿಗಳಿಗೆ ಸೂಚಿಸಿದರು.

ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ದಾಕ್ಷಾಯಿಣಿ ಅವರು ಮಾತನಾಡಿ ಬಾಲ್ಯ ವಿವಾಹ ತಡೆಗಟ್ಟಲು ಗ್ರಾಮೀಣ ಪ್ರದೇಶದಲ್ಲಿ ಅರಿವು ಮೂಡಿಸಲು ಕ್ರಮ ವಹಿಸುವಂತೆ ಸೂಚಿಸಿದರು.

ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ತಮ್ಮಯ್ಯ, ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿ ಕೃಷ್ಣ ಮೂರ್ತಿ, ಸಮಿತಿ ಸದಸ್ಯರಾದ ರೂಪ ಹಾಸನ್ , ಕೆ.ಟಿ.ಜಯಶ್ರೀ, ಮತ್ತಿತರ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿದ್ದರು.

# ಕನಕ ಸೆಂಟ್ರಲ್ ಸ್ಕೂಲ್ ಮಕ್ಕಳಿಗೆ ಸಿಂಧೂರ ಹಚ್ಚಿ ಆರತಿ ಬೆಳಗಿ ಸ್ವಾಗತ



**ದಾವಣಗೆರೆ:** ದಾವಣಗೆರೆ ತಾಲೂಕು ಅಣಬೇರು ಗ್ರಾಮದಲ್ಲಿರುವ ಕನಕ ಸೆಂಟ್ರಲ್ ಸ್ಕೂಲ್‌ನಲ್ಲಿ , ಸೋಮವಾರ 2025–26ನೇ ಶೈಕ್ಷಣಿಕ ವರ್ಷದ ಶಾಲಾ ಪ್ರಾರಂಭೋತ್ಸವ ಕಾರ್ಯಕ್ರಮ ಸಂಭ್ರಮದಿಂದ ಜರುಗಿತು. ಈ ಸಂದರ್ಭದಲ್ಲಿ ಶಾಲೆಯ ಎಲ್ಲಾ ಮಕ್ಕಳಿಗೆ ಸಿಂಧೂರ ಹಚ್ಚಿ ಆರತಿ ಬೆಳಗಿ, ಪುಷ್ಪ ಸಿಂಚನ ಮಾಡಿ ಸಿಹಿ ವಿತರಿಸಿ ಸ್ವಾಗತವನ್ನು ಮಾಡಲಾಯಿತು.

ಈ ಸಂದರ್ಭದಲ್ಲಿ ಕನಕ ಸಮೂಹ ಸಂಸ್ಥೆಯ ಸಂಸ್ಥಾಪಕರು ಹಾಗೂ ಸ್ವಯಂ ನಿವೃತ್ತ ಶಿಕ್ಷಕರಾದ ಅಣಬೇರು ಶಿವಮೂರ್ತಿ ಮಾತನಾಡಿ, ನಾನೂ ಸಹ ಗ್ರಾಮೀಣ ಪ್ರದೇಶದ ಬಡತನದಲ್ಲಿ ಹುಟ್ಟಿ ಬೆಳೆದು, ಕಷ್ಟದ ಪರಿಸ್ಥಿತಿಯನ್ನು ಅರಿತು ಶಿಕ್ಷಣದ ಮಹತ್ವವನ್ನು ತಿಳಿದುಕೊಂಡು ಈ ಅಣಬೇರು ಗ್ರಾಮದ ಸುತ್ತಮುತ್ತಲ ಇರುವ ಇಪ್ಪತ್ತು ಹಳ್ಳಿಗಳಿಗೆ ಶಾಲಾ ಬಸ್ಸುಗಳ

ಸೌಕರ್ಯ ನರ್ಸರಿ, ಪ್ರೈಮರಿ ಮತ್ತು ಹೈಸ್ಕೂಲ್‌ತನಕ ನಡೆಯುತ್ತಲಿದ್ದು ಪೋಷಕರಿಗೆ ಹೊರೆಯಾಗದಂತೆ ಶಾಲಾ ಶುಲ್ಕವನ್ನು ನಿಗಧಿಮಾಡಿದ್ದು, ಇಂಗ್ಲಿಷ್ ಮೀಡಿಯಂನಲ್ಲಿ ಶಿಕ್ಷಣವನ್ನು ನೀಡುತ್ತಲಿದ್ದು, ಇದರ ಸದುಪಯೋಗವನ್ನು ಪಡೆದುಕೊಳ್ಳಲು ಪೋಷಕರಿಗೆ ಮತ್ತು ಮಕ್ಕಳಿಗೆ ಕರೆ ನೀಡಿದರು.

ಈ ಸಂದರ್ಭದಲ್ಲಿ ಶಿಕ್ಷಕರುಗಳಾದ ಕೆ.ಟಿ. ರಂಗಪ್ಪ, ಸದ್ದಾಂಹುಸೇನ್, ಎ.ಎಸ್. ನಾಜಿಮಾ ಪರ್ವಿನ್, ಡಿ.ಸಿ. ತಿರುಮಲೇಶ್, ಶ್ರೀದೇವಿ ಸಿ., ಪ್ರಿಯಾಂಕ, ಮತ್ತು ಪೋಷಕರುಗಳು, ಶಾಲಾ ವಿದ್ಯಾರ್ಥಿಗಳು ಸಂಭ್ರಮದಿಂದ ಭಾಗವಹಿಸಿದ್ದರು.

## ಬಕ್ರೀದ್: ಪ್ರಾಣಿ ವಧೆ ತಡೆಯಲು ಜಿಲ್ಲಾದ್ಯಂತ 10 ತಂಡಗಳ ರಚನೆ

**ಚಿಕ್ಕಮಗಳೂರು:** ಜೂನ್ 7 ರಂದು ನಡೆಯಲಿರುವ ಬಕ್ರೀದ್ ಹಬ್ಬದ ಸಂದರ್ಭದಲ್ಲಿ ದನ, ಎಮ್ಮೆ, ಕರು ಮತ್ತು ಒಂಟೆಗಳನ್ನು ಅಕ್ರಮವಾಗಿ ಕೂಡಿ ಹಾಕುವುದು ಹಾಗೂ ಅವುಗಳ ಸಾಗಣೆ ಮತ್ತು ವಧೆ ಮಾಡುವ ಸಾಧ್ಯತೆ ಇರುವುದರಿಂದ ಇದನ್ನು ತಡೆಗಟ್ಟುವ ನಿಟ್ಟಿನಲ್ಲಿ ಜಿಲ್ಲಾದ್ಯಂತ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಸಿಬ್ಬಂದಿಗಳನ್ನೊಳಗೊಂಡ ತಪಾಸಣಾ ತಂಡಗಳನ್ನು ರಚಿಸಲಾಗಿದ್ದು, ಅಧಿಕಾರಿಗಳು ಪರಸ್ಪರ ಸಮನ್ವಯ ಸಾಧಿಸಿಕೊಂಡು ನಿಯೋಜಿತ ದಿನಾಂಕಗಳಾದ ಜೂನ್ 5 ರಿಂದ 10ರವರೆಗೆ ತಮ್ಮ ವ್ಯಾಪ್ತಿಯಲ್ಲಿ ಕಾರ್ಯಪ್ರವೃತ್ತರಾಗುವಂತೆ ಜಿಲ್ಲಾಧಿಕಾರಿಗಳು ಆದೇಶಿಸಿದ್ದಾರೆ.

ಚಿಕ್ಕಮಗಳೂರು ನಗರ ಹಾಗೂ ಗ್ರಾಮಾಂತರ ವ್ಯಾಪ್ತಿಯಲ್ಲಿ ಎರಡು ಪ್ರತ್ಯೇಕ ತಂಡಗಳು ಪ್ರಾಣಿ ವಧೆ ತಡೆಯುವ ಕಾರ್ಯದಲ್ಲಿ ನಿಗಾ ಇಡಲಿವೆ. ಉಳಿದಂತೆ ಜಿಲ್ಲೆಯ ಮೂಡಿಗೆರೆ, ಕಳಸ, ಶೃಂಗೇರಿ, ಕೊಪ್ಪ, ನರಸಿಂಹರಾಜಪುರ, ತರೀಕೆರೆ, ಅಜ್ಜಂಪುರ ಹಾಗೂ ಕಡೂರು ತಾಲ್ಲೂಕುಗಳ ವ್ಯಾಪ್ತಿಯಲ್ಲಿ ಆಯಾ ತಾಲ್ಲೂಕಿನ ಅಧಿಕಾರಿಗಳು ಹಾಗೂ ಸಿಬ್ಬಂದಿಯ ತಂಡಗಳು ಕಾರ್ಯ ನಿರ್ವಹಿಸಲಿವೆ. ಈ ತಂಡಗಳಲ್ಲಿ ಮುಖ್ಯವಾಗಿ ನಗರಸಭೆ, ಪುರಸಭೆ, ತಾಲ್ಲೂಕು ಪಂಚಾಯಿತಿ, ಪಟ್ಟಣ ಪಂಚಾಯಿತಿಯ ಅಧಿಕಾರಿಗಳು ಹಾಗೂ ಪಶು ಸಂಗೋಪನಾ ಇಲಾಖೆಯ ಅಧಿಕಾರಿಗಳು, ಪೊಲೀಸ್ ಉಪನಿರೀಕ್ಷಕರು ಈ ತಂಡಗಳಲ್ಲಿ ಇರಲಿದ್ದಾರೆ ಎಂದು ಜಿಲ್ಲಾಧಿಕಾರಿಗಳು ಮಾಹಿತಿ ನೀಡಿದ್ದಾರೆ.

## ಪರಿಶಿಷ್ಟ ಜಾತಿಗಳ ಸಮಗ್ರ ಸಮೀಕ್ಷೆ–ಅವಧಿ ವಿಸ್ತರಣೆ

**ಚಿಕ್ಕಮಗಳೂರು:** ಪರಿಶಿಷ್ಟ ಜಾತಿಯಲ್ಲಿನ 101 ಜಾತಿಗಳ ವೈಜ್ಞಾನಿಕ ವರ್ಗೀಕರಣ ಮಾಡಿ ದತ್ತಾಂಶವನ್ನು (ಎಂಪೆರಿಕಲ್ ಡಾಟಾ) ಸಂಗ್ರಹಿಸಿ ಹೊಸದಾದ ಸಮೀಕ್ಷೆಯನ್ನು ನಡೆಸಲು ಕರ್ನಾಟಕ ಉಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಾಧೀಶರಾದ ಡಾ.ಹೆಚ್. ಎನ್.ನಾಗಮೋಹನ್‌ದಾಸ್ ಇವರ ಅಧ್ಯಕ್ಷತೆಯ ಏಕ ಸದಸ್ಯ ಆಯೋಗದ ಮಧ್ಯಂತರ ವರದಿಯಲ್ಲಿ ಸರ್ಕಾರಕ್ಕೆ ಶಿಫಾರಸ್ಸು ಮಾಡಲಾದ ಹಿನ್ನೆಲೆಯಲ್ಲಿ ಮೇ 5ರಿಂದ ಗಣತಿದಾರರು ಮನೆ–ಮನೆಗೆ ಭೇಟಿ ನೀಡಿ ಮಾಹಿತಿ ಸಂಗ್ರಹಿಸುವ ಕಾರ್ಯ ಕೈಗೊಳ್ಳಲಾಗಿದೆ. ಅದರಂತೆ ರಾಜ್ಯಾದ್ಯಂತ ಈಗಾಗಲೇ ಸಮೀಕ್ಷೆ ನಡೆಯುತ್ತಿದ್ದು, ಇದೀಗ ಆ ಸಮೀಕ್ಷೆಯ ದಿನಾಂಕವನ್ನು ವಿಸ್ತರಿಸಲಾಗಿದೆ.

ಬಿಬಿಎಂಪಿ ವ್ಯಾಪ್ತಿಯ ವಲಯಗಳಲ್ಲಿ ಮಳೆ, ಹವಾಮಾನ ವೈಪರೀತ್ಯಗಳಿಂದಾಗಿ ಪರಿಶಿಷ್ಟ ಜಾತಿ, ಜನಾಂಗದ ಸಮೀಕ್ಷೆ ಕಾರ್ಯವು ನಿರೀಕ್ಷಿತ ಮಟ್ಟದಲ್ಲಿ ಪೂರ್ಣಗೊಂಡಿರುವುದಿಲ್ಲವೆಂಬ ಕಾರಣಕ್ಕಾಗಿ ಸಮೀಕ್ಷಾ ಅವಧಿಯನ್ನು ರಾಜ್ಯದ ವಿವಿಧ ಜಿಲ್ಲೆಗಳಲ್ಲಿಯೂ ವಿಸ್ತರಿಸುವಂತೆ ವಿವಿಧ ಸಂಘ–ಸಂಸ್ಥೆಗಳ ಮುಖಂಡರುಗಳು ವಿನಂತಿಸಿದ್ದಾರೆ. ಜೊತೆಗೆ ಪರಿಶಿಷ್ಟ ಜಾತಿಯ ಜನರೆಲ್ಲರೂ ಸಮೀಕ್ಷಾ ಕಾರ್ಯದಲ್ಲಿ ಭಾಗವಹಿಸಲು ಅನುವಾಗುವಂತೆ ಈ ವಿಸ್ತರಣೆ ಮಾಡಲಾಗಿದ್ದು, ವಿಶೇಷ ಶಿಬಿರ (ಸಮೀಕ್ಷಾ ಬ್ಲಾಕ್ ವ್ಯಾಪ್ತಿಯಲ್ಲಿ) ವನ್ನು ಜೂನ್ 2 ರಿಂದ ಜೂ.8ರವರೆಗೆ ವಿಸ್ತರಿಸಲಾಗಿದೆ ಮತ್ತು ಆನ್‌ಲೈನ್ ಮೂಲಕ ಸ್ವಯಂಘೋಷಣೆ ಜೂನ್ 8 ರವರೆಗೆ ಮುಂದುವರೆಯಲಿದೆ. ಅಲ್ಲದೆ, ಗಣತಿದಾರರು ರಜಾ ದಿನಗಳಲ್ಲಿಯೂ ಸಹ ಸಮೀಕ್ಷಾ ಬ್ಲಾಕ್‌ನ ವಿಶೇಷ ಶಿಬಿರಗಳಲ್ಲಿ ಕಾರ್ಯ ನಿರ್ವಹಿಸಿ ಸಮೀಕ್ಷೆಯನ್ನು ಯಶಸ್ವಿಯಾಗಿ ಪೂರ್ಣಗೊಳಿಸುವಂತೆ ಆಯೋಗದ ಅಧ್ಯಕ್ಷರು ನಿರ್ದೇಶನ ನೀಡಿರುವುದಾಗಿ ಆಯೋಗದ ಕಾರ್ಯದರ್ಶಿಗಳು ತಿಳಿಸಿದ್ದಾರೆ ಎಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ಮಾಹಿತಿ ನೀಡಿದ್ದಾರೆ.

## ಅರ್ಜಿ ಆಹ್ವಾನ

**ಚಿಕ್ಕಮಗಳೂರು:** 2025–26ನೇ ಸಾಲಿನಲ್ಲಿ 2 ವರ್ಷಗಳ ಐ.ಟಿ.ಐ., ದ್ವಿತೀಯ ಪಿ.ಯು.ಸಿ. (ವಿಜ್ಞಾನ), ದ್ವಿತೀಯ ಪಿ.ಯು.ಸಿ. (ತಾಂತ್ರಿಕ ವಿಷಯಗಳಲ್ಲಿ) ಪಾಸಾದ ಅರ್ಹ ಅಭ್ಯರ್ಥಿಗಳಿಗೆ ನಗರದ ಡಿ.ಎ.ಸಿ.ಜಿ. ಸರ್ಕಾರಿ ಪಾಲಿಟೆಕ್ನಿಕ್‌ನಲ್ಲಿ ಲ್ಯಾಟರಲ್ ಎಂಟ್ರಿ ಸ್ಕೀಂ ಮುಖಾಂತರ 2ನೇ ವರ್ಷ, 3ನೇ ಸೆಮಿಸ್ಟರ್ ಡಿಪ್ಲೊಮಾ ಪ್ರವೇಶಕ್ಕೆ ಆಫ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸಲು ಜೂನ್ 6 ಕೊನೆಯ ದಿನವಾಗಿದೆ. ಹೆಚ್ಚಿನ ಮಾಹಿತಿಗೆ ದೂ–9886489678 ಅಥವಾ 9620158708 ಅನ್ನು ಸಂಪರ್ಕಿಸಬಹುದು ಎಂದು ಡಿ.ಎ.ಸಿ.ಜಿ. ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜಿನ ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸುಂದರ ಬದುಕು ನಿರ್ಮಾಣಕ್ಕೆ ಸೌಟ್ಸ್, ಗೈಡ್ಸ್ ಸಹಕಾರಿ

## ಭಾರತ್ ಸೌಟ್ಸ್ ಮತು ಗೈಡ್ಸ್ ರಾಜ್ಯ ಪುರಸ್ಕಾರ ಪತ್ರ ವಿತರಣೆ ಸಮಾರಂಭದಲ್ಲಿ ಜಿ.ಪಂ ಸಿಇಒ ಎಸ್.ಜೆ.ಸೋಮಶೇಖರ್

**ಚಿತ್ರದುರ್ಗ:** ಸುಂದರ ಬದುಕು ಹಾಗೂ ಆರೋಗ್ಯಕರ ಸಮಾಜ ನಿರ್ಮಾಣದಲ್ಲಿ ಸ್ಕೌಟ್ಸ್ ಮತ್ತು ಗೈಡ್ಸ್‌ನ ಶಿಸ್ತು ಮತ್ತು ಕೌಶಲ್ಯದ ಪಾತ್ರ ಮಹತ್ವದ್ದಾಗಿದೆ ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್ ತಿಳಿಸಿದರು.




ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಮಂಗಳವಾರ ರಾಜ್ಯಪಾಲರ ಪ್ರಶಸ್ತಿ ಪಡೆದ ಜಿಲ್ಲೆಯ ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್‌ರವರು 2024-25ನೇ ರಾಜ್ಯ ಪುರಸ್ಕಾರ ಪ್ರಶಸ್ತಿ ಪತ್ರ ವಿತರಣಾ ಸಮಾರಂಭದಲ್ಲಿ ಅವರು ಮಾತನಾಡಿದರು.

ಸ್ಕೌಟ್ಸ್ ಮತ್ತು ಗೈಡ್ಸ್ ಸೇರ್ಪಡೆಯಿಂದ ವಿದ್ಯಾರ್ಥಿಯ ವ್ಯಕ್ತಿತ್ವ ವಿಕಸನದ ಜತೆಗೆ ಕಲಿಕೆಯಲ್ಲೂ ಪ್ರಗತಿ ಸಾಧಿಸಲು ಸಾಧ್ಯ. ಹಾಗಾಗಿ ಎಲ್ಲಾ ಶಾಲಾ ಮಕ್ಕಳು ಸ್ಕೌಟ್ಸ್ ಮತ್ತು ಗೈಡ್ಸ್‌ಗೆ ಸೇರ್ಪಡೆಗೊಳ್ಳಲು ಮುಂದಾಗಬೇಕು. ಸ್ಕೌಟ್ಸ್ ಮತ್ತು ಗೈಡ್ಸ್‌ನಿಂದ ಮಕ್ಕಳಲ್ಲಿ ಪರಿಸರ ಪ್ರಜ್ಞೆ, ಸಂಸ್ಕೃತಿಯ ಅರಿವು ಮೂಡಿಸುವ ಕೆಲಸ ಹೆಚ್ಚಾಗಬೇಕು. ಪರಿಸರ ಜಾಗೃತಿ, ಸ್ವಚ್ಛತೆ ಹಾಗೂ ಶಿಸ್ತು ಮತ್ತು ಸಂಯಮ ಮೂಡಿಸುವಲ್ಲಿ ಸಹಕಾರಿಯಾಗಿದೆ ಎಂದರು.

ಪರಿಸರ ಉಳಿಸಿ-ಬೆಳೆಸುವ ಕಾರ್ಯವನ್ನು ಮಕ್ಕಳಲ್ಲಿ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ತುಂಬಬೇಕು ಮತ್ತು ಮಕ್ಕಳು ಅದನ್ನು ರೂಡಿಸಿಕೊಳ್ಳಬೇಕು. ಮುಂದಿನ ಪೀಳಿಗೆಗೆ ಉತ್ತಮ ನಾಗರಿಕರನ್ನು ನಿರ್ಮಾಣ ಮಾಡುವ ಕೆಲಸ ಸ್ಕೌಟ್ಸ್ ಮತ್ತು ಗೈಡ್ಸ್‌ನಿಂದಾಗಬೇಕು. ಮನುಷ್ಯನಿಗೆ ಸಂತೋಷ ಮತ್ತು ಆನಂದ ಸ್ಕೌಟ್ಸ್ ಮತ್ತು ಗೈಡ್ಸ್‌ನಿಂದ ಸಿಗಲು ಸಾಧ್ಯ ಎಂದು ತಿಳಿಸಿದ ಅವರು, ಹಾಗೇ ನಮ್ಮ ಕುಟುಂಬದವರು ಸಹ ವಿದ್ಯಾಭ್ಯಾಸ ಮಾಡುತ್ತಿದ್ದ ಸಂದರ್ಭದಲ್ಲಿ ಸ್ಕೌಟ್ಸ್ ಮತ್ತು ಗೈಡ್ಸ್ ಸೇರಿ ಸೇವೆ ಸಲ್ಲಿಸಿದ್ದಾರೆ ಎಂದು ಸ್ಮರಿಸಿಕೊಂಡರು.

ಸ್ಕೌಟ್ಸ್ ಮತ್ತು ಗೈಡ್ಸ್ ಸೇರಿಕೊಂಡಿರುವ ಮಕ್ಕಳಲ್ಲಿ ಲೀಡರ್ ಶೀಪ್ ಗುಣ ಇರುತ್ತದೆ. ರಾಷ್ಟ್ರ ನಿರ್ಮಾಣದಲ್ಲಿ ನಿಮ್ಮ ಪಾತ್ರ ಬಹು ದೊಡ್ಡದಿದೆ ಎಂದರು. ನಮ್ಮ ಜಿಲ್ಲೆಯಲ್ಲಿ 44,000 ಸ್ಕೌಟ್ಸ್ ಮತ್ತು ಗೈಡ್ಸ್‌ಗಳಿದ್ದು, 244 ಮಂದಿ ರಾಜ್ಯಪಾಲರ ಪ್ರಶಸ್ತಿ ಪಡೆದವರಾಗಿದ್ದಾರೆ. ಪ್ರಶಸ್ತಿ ಪಡೆದ ಮಕ್ಕಳಿಗೆಲ್ಲರಿಗೂ ಮತ್ತು ಇದಕ್ಕೆ ಸಹಕರಿಸಿದ ಅಧಿಕಾರಿಗಳಿಗೂ ಮತ್ತು ಸಿಬ್ಬಂದಿಗಳಿಗೂ ಶುಭ ಹಾರೈಸಿ, ಇನ್ನೂ ಹೆಚ್ಚು ಪ್ರಶಸ್ತಿಗಳನ್ನು ಪಡೆದು ಜಿಲ್ಲೆ ಮತ್ತು ರಾಜ್ಯಕ್ಕೆ ಹೆಸರು ತರಬೇಕು ಎಂದು ಆಶಯ ವ್ಯಕ್ತಪಡಿಸಿದರು.

ಚಿತ್ರದುರ್ಗ ನಗರದ ಎಸ್.ಆರ್.ಎಸ್ ಹೆರಿಟೇಜ್ ಶಾಲೆ, ಡಾನ್ ಬಾಸ್ಕೋ ಶಾಲೆ, ವಿದ್ಯಾ ವಿಕಾಸ ಶಾಲೆ, ವಾಸವಿ ಶಾಲೆ, ಭರಮಸಾಗರ ಡಿ.ವಿ.ಎಸ್ ಶಾಲೆ, ಹೊಳಲ್ಕೆರೆ ವಾಗ್ದೇವಿ ಶಾಲೆ ಹಾಗೂ ಶಾರದಾ ನ್ಯಾಷನಲ್ ಶಾಲೆಗಳು ಪ್ರಶಸ್ತಿ ಪಡೆದಿವೆ.

ಈ ಸಂದರ್ಭದಲ್ಲಿ ಜಿಲ್ಲಾ ಗೈಡ್ಸ್ ಆಯುಕ್ತೆ ಎಲ್.ಸವಿತಾ ಶಿವಕುಮಾರ್, ಜಿಲ್ಲಾ ಸ್ಥಾನಿಕ ಆಯುಕ್ತ ಅನಂತ್ ರೆಡ್ಡಿ, ಜಂಟಿ ಕಾರ್ಯದರ್ಶಿ ಡಾ.ರೆಹಮಲ್ ಉಲ್ಲಾ, ಜಿಲ್ಲಾ ರೋವರ್ಸ್ ಅಧಿಕಾರಿ ತಿಪ್ಪೇಸ್ವಾಮಿ, ಉಪಾಧ್ಯಕ್ಷೆ ಶೀಲಾ ಮಂಜುನಾಥ್, ಡಾನ್‌ಬಾಸ್ಕೋ ಶಾಲೆಯ ಬಷೀರ್ ಸೇರಿದಂತೆ ಸ್ಕೌಟ್ಸ್ ಮತ್ತು ಗೈಡ್ಸ್‌ನ ಮಕ್ಕಳು ಇದ್ದರು.

# ವಿಶ್ವ ಹಾಲು ದಿನಾಚರಣೆ ಅಂಗವಾಗಿ ತೀಕ್ಷ್ಣ ಅಂಧರ ಶಾಲೆಯಲ್ಲಿ ಹಾಲು ವಿತರಣೆ




**ಚಿತ್ರದುರ್ಗ:** ಹಾಲು ಉತ್ಪನ್ನಗಳ ಜೊತೆ ಸಿಹಿ ಪದಾರ್ಥಗಳು ಮಾರುಕಟ್ಟೆ ಪ್ರವೇಶಿಸುತ್ತಿವೆ ಎಂದು ಕೆ.ಎಂ.ಎಫ್. ನಿರ್ದೇಶಕ ಜಿ.ಬಿ.ಶೇಖರ್ ತಿಳಿಸಿದರು.

ವಿಶ್ವ ಹಾಲು ದಿನಾಚರಣೆ ಅಂಗವಾಗಿ ಮಾಳಪ್ಪನಹಟ್ಟಿ ಸಮೀಪವಿರುವ ತೀಕ್ಷ್ಣ ಅಂಧರ ಶಾಲೆಯಲ್ಲಿ ಭಾನುವಾರ ಮಕ್ಕಳಿಗೆ ಹಾಲು ಹಾಗೂ ಕೇಕ್ ವಿತರಿಸಿ ಮಾತನಾಡಿದರು.

ವಿಶ್ವಾದ್ಯಂತ ಹಾಲು ದಿನಾಚರಣೆಯನ್ನು ಆಚರಿಸಲಾಗುತ್ತಿದೆ. ಚಿಕ್ಕವರಿಂದ ಹಿಡಿದು ದೊಡ್ಡವರತನಕ ಎಲ್ಲರೂ ಹಾಲನ್ನು ಕುಡಿಯಬಹುದು. ಹಾಲಿನಲ್ಲಿ ಕ್ಯಾಲ್ಷಿಯಂ ಹಾಗೂ ಪೌಷ್ಠಿಕಾಂಶವಿರುತ್ತದೆ. ಬೆಣ್ಣೆ, ತುಪ್ಪ, ಮೊಸರಿನಿಂದಲೂ ದೇಹಕ್ಕೆ ಸಾಕಷ್ಟು ಪ್ರಯೋಜನವಿದೆ. ನಂದಿನಿ ಉತ್ಪನ್ನಗಳನ್ನೇ ಎಲ್ಲರೂ ಉಪಯೋಗಿಸಿದರೆ ರೈತರಿಗೆ ಹೆಚ್ಚಿನ ಲಾಭಾಂಶ ಕೊಡಲು ನೆರವಾಗಲಿದೆ ಎಂದು ಹೇಳಿದರು.

ಕೆ.ಎಂ.ವ್ಯವಸ್ಥಾಪಕ ಮಂಜುನಾಥ್ ಜಿ.ಬಿ. ಮಾತನಾಡಿ ಹಾಲನ್ನು ಎಲ್ಲಾ ವಯೋಮಾನದವರು ಕುಡಿಯಬಹುದು. ಕ್ಯಾಲ್ಷಿಯಂ ಹಾಗೂ ಇನ್ನಿತರೆ ಪೌಷ್ಠಿಕಾಂಶ ಪದಾರ್ಥಗಳು ಹಾಲಿನಲ್ಲಿರುತ್ತವೆ. ಹಾಗಾಗಿ ಹಾಲನ್ನು ಅಮೃತವೆಂತಲೂ ಕರೆಯುವುದುಂಟು. ನಂದಿನಿಯಿಂದ ಅನೇಕ ಉತ್ಪನ್ನಗಳು ತಯಾರಾಗುತ್ತಿವೆ. ಪ್ರತಿಯೊಬ್ಬರು ನಂದಿನಿ ಪ್ರಾಡಕ್ಟ್‌ಗಳನ್ನು ಬಳಸಿದಾಗ ಮಾರುಕಟ್ಟೆಯಲ್ಲಿ ಹೆಚ್ಚಿನ ಬೇಡಿಕೆಯುಂಟಾಗುತ್ತದೆ ಎಂದರು.

ಜಿಲ್ಲಾ ಮಾರುಕಟ್ಟೆ ಉಸ್ತುವಾರಿ ಹನುಮಂತಪ್ಪ ಬಿ.ಎಂ. ಮಾರುಕಟ್ಟೆ ವಿಭಾಗದ ಆಕಾಶ್, ರಂಗಸ್ವಾಮಿ, ಅಂಧರ ಶಾಲೆಯ ಕಾರ್ಯದರ್ಶಿ ಕಾರ್ತಿಕ್ ಈ ಸಂದರ್ಭದಲ್ಲಿ ಹಾಜರಿದ್ದರು.

# ಸಕಾಲದಲ್ಲಿ ಜನನ-ಮರಣ ಮಾಹಿತಿ ನೋಂದಣಿಗೆ ಕ್ರಮ ವಹಿಸಿ: ಜಿಲ್ಲಾಧಿಕಾರಿ

**ಚಿಕ್ಕಮಗಳೂರು, ಜೂ.3:** ಜಿಲ್ಲೆಯಲ್ಲಿ ಜನನ-ಮರಣಗಳ ವಿವರಗಳನ್ನು ನಿಗದಿತ ಸಮಯದೊಳಗೆ ನೋಂದಣಿಗೆ ಕ್ರಮ ವಹಿಸುವಂತೆ ಜಿಲ್ಲಾಧಿಕಾರಿ ಮೀನಾ ನಾಗರಾಜ್ ಸಿ.ಎನ್.ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಆವರಣದ ಕೆಸ್ವಾನ್‌ನಲ್ಲಿ ನಿನ್ನೆ ಜನನ-ಮರಣಗಳ ನಾಗರಿಕ ನೋಂದಣಿಯ ತ್ರೈಮಾಸಿಕ ಜಿಲ್ಲಾಮಟ್ಟದ ಸಮನ್ವಯ ಸಮಿತಿ ಹಾಗೂ ಜಿಲ್ಲಾ ಮಟ್ಟದ ಕೃಷಿ ಅಂಕಿ-ಅಂಶಗಳ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಈ ಜನ್ಮ ತಂತ್ರಾಂಶದಲ್ಲಿ ಯಾವುದೇ ಜನನ ಮತ್ತು ಮರಣ ಘಟನೆ ನಡೆದ 21 ದಿನಗಳ ಒಳಗಾಗಿ ಕಡ್ಡಾಯವಾಗಿ ಸಂಬಂಧಿಸಿದ ನೋಂದಣಾಧಿಕಾರಿಗಳು ನೋಂದಣಿಯನ್ನು ಮಾಡಬೇಕು. ನೋಂದಣಿ ಮಾಡದೆ ಸಾರ್ವಜನಿಕರಿಗೆ ತೊಂದರೆಯಾದಲ್ಲಿ ಸಂಬಂಧಿಸಿದ ನೋಂದಣಾಧಿಕಾರಿಗಳನ್ನೇ ನೇರ ಹೊಣೆಗಾರರನ್ನಾಗಿ ಮಾಡಲಾಗುವುದು ಎಂದರು.



ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿ ಆರ್.ಶಿವಕುಮಾರ್ ಸಭೆಗೆ ಮಾಹಿತಿ ನೀಡಿ, ಜನನ-ಮರಣ ಸಂಭವಿಸಿದ 21 ದಿನಗಳ ನಂತರ 30 ದಿನಗಳ ಅವಧಿಯೊಳಗಿನ ಘಟನೆಯ ತಡ ನೋಂದಣಿಗೆ ಶುಲ್ಕ ರೂ. 20 ಸಂದಾಯದ ನಂತರ ನೋಂದಣಿ ಮಾಡಬೇಕು. ಒಂದು ತಿಂಗಳ ನಂತರ ಒಂದು ವರ್ಷದ ಘಟನೆಗಳನ್ನು ಸಂಬಂಧಿಸಿದ ಗ್ರಾಮ ಆಡಳಿತಾಧಿಕಾರಿ ಮತ್ತು ರಾಜಸ್ವ ನಿರೀಕ್ಷಕರ ಮಹಜರು ವರದಿಯೊಂದಿಗೆ ತಹಸೀಲ್ದಾರರ ಆದೇಶದ ಮೂಲಕ ಗ್ರಾಮ ಆಡಳಿತಾಧಿಕಾರಿಗಳಿಗೆ ನೋಂದಣಿಗೆ ಅವಕಾಶ ನೀಡಲಾಗಿದೆ. ಒಂದು ವರ್ಷದ ನಂತರದ ಯಾವುದೇ ಜನನ-ಮರಣ ಘಟನೆಗಳು ಹಾಗೂ ಹೆಸರು ಸೇರ್ಪಡೆಯನ್ನು ಜೆಎಂಎಫ್‌ಸಿ ನ್ಯಾಯಾಲಯಕ್ಕೆ ನೀಡಿ ನೋಂದಣಿ ಮಾಡಿಕೊಳ್ಳಬೇಕು ಎಂದರು.

ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಭಿಮಾ ಯೋಜನೆಯಡಿ ಮುಂಗಾರು, ಹಿಂಗಾರು ಹಾಗೂ ಬೇಸಿಗೆ ಹಂಗಾಮಿನ ಬೆಳೆ ಕಟಾವು ಪ್ರಯೋಗಗಳನ್ನು ನಿಯಮಾನುಸಾರ ಕೈಗೊಳ್ಳಲು ಹಾಗೂ ಯಾವುದೇ ಪ್ರಯೋಗಗಳು ನಷ್ಟವಾಗದಂತೆ ನೋಡಿಕೊಳ್ಳಬೇಕು. ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸುವಂತೆ ಜಿಲ್ಲಾ ಹಾಗೂತಾಲ್ಲೂಕುಮಟ್ಟದಅನುಷ್ಠಾನಾಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾ ಸಂಖ್ಯಾ ಸಂಗ್ರಹಣಾ ಇಲಾಖೆ ಹೊರ ತಂದಿರುವ 2023-24ನೇ ಸಾಲಿನ ಜಿಲ್ಲಾ ಅಂಕಿ-ಅಂಶಗಳ ನೋಟ ಮತ್ತು ಸಾಮಾಜಿಕ ಮತ್ತು ಆರ್ಥಿಕ ಅವಲೋಕನ ಪುಸ್ತಕವನ್ನು ಜಿಲ್ಲಾಧಿಕಾರಿಗಳು ಬಿಡುಗಡೆ ಮಾಡಿದರು.

ಸಭೆಯಲ್ಲಿ ಚಿಕ್ಕಮಗಳೂರು ಉಪವಿಭಾಗಾಧಿಕಾರಿ ದೇವರಾಜ್, ಚಿಕ್ಕಮಗಳೂರು ತಾಲ್ಲೂಕು ತಹಸೀಲ್ದಾರ್ ರೇಷ್ಮಾಶೆಟ್ಟಿ, ತಾಲ್ಲೂಕು ಪಂಚಾಯಿತಿ ಕಾರ್ಯ ನಿರ್ವಹಣಾಧಿಕಾರಿ ಬಿ.ಕೆ.ವಿಜಯಕುಮಾರ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಅಶ್ವತ್ಥಬಾಬು, ಡಿವೈಎಸ್‌ಪಿ ಶೈಲೇಂದ್ರ ಮತ್ತಿತರರು ಸಭೆಯಲ್ಲಿ ಭಾಗವಹಿಸಿದ್ದರು.

# ಗೋವಂಶ ಹತ್ಯೆ ನಿಲ್ಲಿಸಲು ಒತ್ತಾಯಿಸಿ ಜಿಲ್ಲಾಡಳಿತಕ್ಕೆ ಮನವಿ: ನಾಗೇಶ್ ಅಂಗೀರಸ

**ಚಿಕ್ಕಮಗಳೂರು:** ಜಿಲ್ಲೆಯಲ್ಲಿ ಗೋವಂಶ, ಒಂಟೆ ಹತ್ಯೆ ಬಲಿ ನಿಲ್ಲಿಸಲು ಹಾಗೂ ಗೋಸಾಗಾಣಿಕೆ ನಿಷೇಧ ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಲಾಗಿದೆ ಎಂದು ಶ್ರೀ ಕಾಮಧೇನು ಗೋಸೇವಾ ಕೇಂದ್ರದ ಅಧ್ಯಕ್ಷ ನಾಗೇಶ್ ಅಂಗೀರಸ ತಿಳಿಸಿದರು.



ಅವರು ಇಂದು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ರಾಜ್ಯದ ಜಾನುವಾರು ಹತ್ಯಾ ಪ್ರತಿಬಂಧಕ ಹಾಗೂ ಸಂರಕ್ಷಣಾ ಕಾಯ್ದೆಯಂತೆ ಗೋವಂಶ ಅಂದರೆ ಯಾವುದೇ ವಯಸ್ಸಿನ ದನ, ಹೋರಿಕರುಗಳನ್ನು ಕೊಲ್ಲುವುದನ್ನು ಗೋವುಗಳ ವಧೆ ಮಾಡುವುದನ್ನು ನಿಷೇಧಿಸಲಾಗಿದೆ.

ಈ ನಿಟ್ಟಿನಲ್ಲಿ ಜಿಲ್ಲೆಯಲ್ಲಿ ಗೋವಂಶ ವಧೆ ಮಾಡದಂತೆ ಕಾನೂನು ಮತ್ತು ಅದರ ನಿಯಮಾವಳಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕೆಂದು ಮನವಿಯಲ್ಲಿ ಆಗ್ರಹಿಸಲಾಗಿದೆ ಎಂದರು.

2021ರಲ್ಲಿ ಜಾರಿಮಾಡಿರುವ ಹಿಂಸಾತ್ಮಕ ಗೋಸಾಗಾಣೆ ಮತ್ತು ಜಾನುವಾರು ಹತ್ಯೆ ಪ್ರತಿಬಂಧಕ ಸಂರಕ್ಷಣಾ ಕಾಯ್ದೆಯನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸಿ ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿದರು.

ಅಕ್ರಮ ಕಸಾಯಿ ಖಾನೆಗಳನ್ನು ಗುರ್ತಿಸಿ ಬಂದ್ ಮಾಡಬೇಕು, ಖಾಲಿ ಜಾಗ, ಮೈದಾನ, ಪರಿತ್ಯಕ್ತ ಕಟ್ಟಡ ಮುಂತಾದೆಡೆ ಗೋವುಗಳನ್ನು ಬಲಿಕೊಟ್ಟು ಮಾಂಸವನ್ನು ಶೇಖರಿಸುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕೆಂದು ಜಿಲ್ಲಾಡಳಿತವನ್ನು ಆಗ್ರಹಿಸಿದರು.

ಗೋವಂಶ ರಕ್ಷಿಸಲು ಜಿಲ್ಲಾಡಳಿತಕ್ಕೆ ತಾವು ಸಂಪೂರ್ಣ ಬೆಂಬಲ, ಸಹಕಾರ ನೀಡುವುದಾಗಿ ಭರವಸೆ ನೀಡಿದರು.

# ಅಹಲ್ಯರ ಉತ್ತಮ ಆಡಳಿತವು ಸಮಾಜಕ್ಕೆ ಮಾದರಿ : ಮಂಜುಳಾ

**ಚಿಕ್ಕಮಗಳೂರು:** ಭಾರತೀಯರ ಮನದಾಳದಲ್ಲಿ ಸ್ಥಿರಸ್ಥಾಯಿಯಾಗಿ ಉಳಿದಿರುವ ಅಹಲ್ಯಬಾಯಿ ಹೊಳ್ಕರ್ ಉತ್ತಮ ಆಡಳಿತ, ಜನಾನುರಾಗಿ ಕಾರ್ಯ ಮತ್ತು ಧಾರ್ಮಿಕ, ಶೈಕ್ಷಣಿಕ ಮತ್ತು ಸಾಂಸ್ಕೃತಿಕ ಅಭಿವೃದ್ಧಿಗಳಿಂದಾಗಿ ಮಾದರಿಯಾಗಿದ್ದಾರೆ ಎಂದು ಭಾಜಪ ರಾಜ್ಯ ಮಹಿಳಾ ಮೋರ್ಚಾ ಅಧ್ಯಕ್ಷೆ ಮಂಜುಳಾ ಹೇಳಿದರು.

ನಗರದ ಜಿಲ್ಲಾ ಬಿಜೆಪಿ ಕಚೇರಿಯಲ್ಲಿ ಜಿಲ್ಲಾ ಮಹಿಳಾ ಮೋರ್ಚಾದಿಂದ ನಡೆದ ಲೋಕಮಾತೆ ಅಹಲ್ಯಬಾಯಿ ಹೊಳ್ಕರ್ 300ನೇ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.



ಮಹರಾಷ್ಟ್ರದಲ್ಲಿ ಜನಿಸಿ ಮಧ್ಯಪ್ರದೇಶದ ಸೊಸೆಯಾಗಿ ತೆರಳಿದ ಅಹಲ್ಯಬಾಯಿ ಸತತ ಮೂರು ದಶಕದಿಂದ ರಾಜ್ಯದ ಆಳ್ವಿಕೆಯನ್ನು ನಿಭಾಯಿಸಿ ನಾರಿಶಕ್ತಿಯನ್ನು ಎತ್ತಿಹಿಡಿದವರು. ಅತಿ ಕಡಿಮೆ ವಯಸ್ಸಿನಲ್ಲಿ ಬಾಲ್ಯವಿವಾಹವಾಗಿ ಪತಿಯನ್ನೇ ಕಳೆದು ಅಹಲ್ಯರವರು ಇಡೀ ರಾಜ್ಯಭಾರವನ್ನು ಹತೋಟಿಗೆ ತಂದು ಬಾಲ್ಯವಿವಾಹ ಕನಿಷ್ಟ ಪದ್ಧತಿಯನ್ನು ಹೋಗಲಾಡಿಸಿದರು ಎಂದರು.

ಮಹಿಳಾ ಸಬಲೀಕರಣಕ್ಕಾಗಿ ನೇಯ್ಗೆ ವೃತ್ತಿ, ಹತ್ತಿಬೆಳೆ ಕೃಷಿ ಹಾಗೂ ಆಭರಣ ತಯಾರಿಸುವ ತರಬೇತಿಗಳನ್ನು ಹೆಣ್ಣುಮಕ್ಕಳಿಗೆ ಒದಗಿಸಿ ಸ್ವಾವಲಂಬಿ ಬದುಕಿಗೆ ಭದ್ರ ಬುನಾದಿ ಹಾಕಿದ್ದರು. ಅಲ್ಲದೇ ರಾಜ್ಯದ ಆಳ್ವಿಕೆಯಲ್ಲೂ ಮಹಿಳಾ ಸೈನ್ಯವನ್ನು ಬಲಿಷ್ಟಗೊಳಿಸಿ ವಿರೋಧಿ ಪಡೆಗಳ ಆಕ್ರಮಣದಿಂದ ಗೆಲುವು ಸಾಧಿಸಿದ ಕೀರ್ತಿ ಅವರಿಗೆ ದಕ್ಕಿದೆ ಎಂದು ಹೇಳಿದರು.

ದೇಶದ ಹನ್ನೆರಡು ಜ್ಯೋರ್ತಿಲಿಂಗ ಜೀರ್ಣೋದ್ದಾರ, ನಾಡಿನ ಕರಾವಳಿ ಪ್ರದೇಶದ ದೇವಾಲಯ ನಿರ್ಮಾಣಕ್ಕೆ ಸಹಕಾರ ನೀಡಿ ಭವಿಷ್ಯದ ಪ್ರಜೆಗಳಿಗೆ ಭಾರತೀಯ ಸಂಸ್ಕೃತಿ ಜೀವ ತುಂಬಿದವರು. ಆ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರ ಅಹಲ್ಯರ ಹೆಸರಿನಲ್ಲಿ ವಿಮಾನ ನಿಲ್ದಾಣ, ವಿಶ್ವವಿದ್ಯಾಲಯ ಮತ್ತು ಗ್ರಂಥಾಲಯಗಳನ್ನು ನಿರ್ಮಿಸಿ ಗೌರವಿಸಿದೆ ಎಂದರು.

ಕೇಂದ್ರದ ನರೇಂದ್ರ ಮೋದಿ ಸರ್ಕಾರ ಸ್ತ್ರೀ ಸಮಾಜ ಶೈಕ್ಷಣಿಕ, ಆರ್ಥಿಕ ಪ್ರಗತಿ ಹೊಂದಲು ಸ್ತ್ರೀಶಕ್ತಿ ಸಂಜೀವಿನಿಯಡಿ ಸ್ವಾವಲಂಬಿ ಉತ್ಪನ್ನಗಳಿಗೆ ಒತ್ತುನೀಡಿದ ಪರಿಣಾಮ ಸಂಜೀವಿನಿ ಒಕ್ಕೂಟದಿಂದ 500 ಕೋಟಿ ವಹಿವಾಟು ನಡೆಸಿ ಸಾಧನೆ ಮಾಡಿವೆ. ಆದರೆ ರಾಜ್ಯಸರ್ಕಾರ ಶಕ್ತಿ ಯೋಜನೆಯಿಂದ ಮಹಿಳೆಯರು ಬಸ್‌ಗಳಲ್ಲಿ ಗಲಾಟೆ ಮಾಡಿಕೊಳ್ಳುವ ಸ್ಥಿತಿ ನಿರ್ಮಿಸಿದೆ ಎಂದು ಆರೋಪಿಸಿದರು.

ಇಂದಿಗೂ ಕೆಲವು ಜಿಲ್ಲೆಗಳಲ್ಲಿ ಸರ್ಕಾರಿ ಬಸ್‌ಗಳು ಮಹಿಳಾ ಉದ್ಯೋಗಿಗಳು, ಕುಟುಂಬಸ್ಥರು ಕಂಡು ಬಂದರೆ ನಿಲುಗಡೆಗೊಳಿಸುತ್ತಿಲ್ಲ. ಮಹಾನಗರ ಬೆಂಗಳೂರಿನಲ್ಲಿ 10 ನಿಮಿಷಕ್ಕೊಮ್ಮೆ ಬರುವ ಬಸ್‌ಗಳು 40 ನಿಮಿಷ ತಡವಾಗುತ್ತಿವೆ ಎಂದ ಅವರು, ಕೇಂದ್ರವು ಹೆಣ್ಣುಮಕ್ಕಳು ಸ್ವ-ಬದುಕಿಗೆ ಆಧಾರವಾದರೆ, ರಾಜ್ಯಸರ್ಕಾರ ಮಹಿಳೆಯರಿಗೆ ಗ್ಯಾರಂಟಿಗಳಿಂದ ಪರಸ್ಪರ ಬಾಂಧವ್ಯ ಮುರಿಯುತ್ತಿದೆ ಎಂದರು.

ಜಿಲ್ಲಾ ಬಿಜೆಪಿ ಮಹಿಳಾ ಮೋರ್ಚಾ ಅಧ್ಯಕ್ಷೆ ಜಸಂತಾ ಅನಿಲ್‌ಕುಮಾರ್ ಪ್ರಾಸ್ತಾವಿಕವಾಗಿ ಮಾತನಾಡಿ, ಅಹಲ್ಯರವರು ಕಡಿಮೆ ವಯಸ್ಸಿನಲ್ಲೇ ಗಂಡನನ್ನು ಕಳೆದುಕೊಂಡರೂ ಧೃತಿಗೆಡದೆ ರಾಜ್ಯದ ಆಳ್ವಿಕೆಯನ್ನು ಚಾಕ್ಯತೆಯಿಂದ ನಿರ್ವಹಿಸಿ ಮಹಿಳಾ ಲೋಕಕ್ಕೆ ಮಾದರಿಯಾಗಿದ್ದಾರೆ ಎಂದು ತಿಳಿಸಿದರು.

# ಪರವಾನಗಿ ಇಲ್ಲದ ರಸಗೊಬ್ಬರ ದಾಸ್ತಾನು ಜಪ್ತಿ

**ಚಿತ್ರದುರ್ಗ :** ಪರವಾನಿಗೆ ಇಲ್ಲದ ರಸಗೊಬ್ಬರ ದಾಸ್ತಾನು ಮಳಿಗೆ ಮೇಲೆ ಕೃಷಿ ಇಲಾಖೆಯ ಬೆಂಗಳೂರು ಹಾಗೂ ಚಿತ್ರದುರ್ಗ ಜಾರಿದಳ ವಿಭಾಗದವರು ಮಂಗಳವಾರ ದಾಳಿ ನಡೆಸಿ ದಾಸ್ತಾನನ್ನು ಜಪ್ತಿ ಮಾಡಿದ್ದಾರೆ. ಸಾರ್ವಜನಿಕ ದೂರಿನ ಮೇರೆಗೆ ಚಿತ್ರದುರ್ಗ ತಾಲ್ಲೂಕಿನ ಹಿರೇಗುಂಟನೂರು ಹೋಬಳಿಯ ದೊಡ್ಡ ಆಲದಘಟ್ಟ ಗ್ರಾಮದಲ್ಲಿ ಬೆಂಗಳೂರು ಜಾರಿದಳ ವಿಭಾಗದ ಜಂಟಿ ಕೃಷಿ ನಿರ್ದೇಶಕ ಸಿ.ವಿದ್ಯಾನಂದ, ಉಪ ಕೃಷಿ ನಿರ್ದೇಶಕ ಟಿ.ಎನ್. ಅಶೋಕ್ ನೇತೃತ್ವದ ತಂಡ ಕಾರ್ಯಾಚರಣೆ ನಡೆಸಿ ಗ್ರಾಮದ ಕೆ.ಬಿ.ನಟರಾಜ್ ಇವರ ಮಳಿಗೆಯನ್ನು ತನಿಖೆ ಮಾಡಿದ ಸಂದರ್ಭದಲ್ಲಿ ಅನಧಿಕೃತವಾಗಿ ರಸಗೊಬ್ಬರ (ಎಂ.ಸಿ.ಎಫ್ ಸಂಸ್ಥೆಯ) 391 ಚೀಲಗಳು ಹಾಗೂ 20:20:0:13 ಕಾಂಪ್ಲೆಕ್ಸ್ ರಸಗೊಬ್ಬರ (ಎಂ.ಸಿ.ಎಫ್ ಸಂಸ್ಥೆಯ) 272 ಚೀಲಗಳು ಹಾಗೂ ಮೆಕ್ಕೆಜೋಳ ಬಿತ್ತನೆ ಬೀಜದ ದಾಸ್ತಾನು ಒಟ್ಟು 16.76 ಕ್ವಿಂಟಾಲ್‌ನಷ್ಟು ದಾಸ್ತಾನನ್ನು ಶೇಖರಿಸಿ ಯಾವುದೇ ಮಾರಾಟ ಪರವಾನಿಗೆ ಇಲ್ಲದೇ ಅನಧಿಕೃತವಾಗಿ ಮಾರಾಟ ಮಾಡುತ್ತಿರುವುದು ಕಂಡುಬಂದಿದ್ದು,



ಈ ದಾಸ್ತಾನನ್ನು ರಸಗೊಬ್ಬರ ಹಾಗೂ ಬಿತ್ತನೆ ಬೀಜದ ನಿಯಮಾವಳಿಗಳು ಹಾಗೂ ಅಗತ್ಯ ವಸ್ತುಗಳ ಅಧಿನಿಯಮ-1955ರ ಉಲ್ಲಂಘನೆಯಾಗಿರುವ ಮೇರೆಗೆ ಈ ದಾಸ್ತಾನನ್ನು ಮಹಜರ್ ಮೂಲಕ ಪಂಚರ ಸಮಕ್ಷಮದಲ್ಲಿ ಜಪ್ತು ಮಾಡಲಾಯಿತು ಎಂದು ಕೃಷಿ ಇಲಾಖೆಯ ಸಹಾಯಕ ಕೃಷಿ ನಿರ್ದೇಶಕರಾದ (ಜಾರಿದಳ) ಜೆ. ಉಲ್ಫತ್ ಜೈಬಾ ತಿಳಿಸಿದ್ದಾರೆ.

ರಸಗೊಬ್ಬರ ಮತ್ತು ಬಿತ್ತನೆ ಬೀಜದ ಮಾದರಿಗಳನ್ನು ಸಂಗ್ರಹಿಸಿ, ಗುಣಮಟ್ಟ ವಿಶ್ಲೇಷಣೆಗೆ ಪ್ರಯೋಗಾಲಯಕ್ಕೆ ಕಳುಹಿಸಿಕೊಡಲಾಗಿದೆ. ಅಲ್ಲದೇ ರಸಗೊಬ್ಬರ ನಿಯಂತ್ರಣ ಆದೇಶ-1985 ಹಾಗೂ ಬೀಜ ನಿಯಂತ್ರಣ ಆದೇಶ -1983 ಮತ್ತು ಅಗತ್ಯ ವಸ್ತುಗಳ ಅಧಿನಿಯಮ-1955ರ ಉಲ್ಲಂಘನೆ ಮೇರೆಗೆ ಕಾನೂನು ಕ್ರಮ ಕೈಗೊಳ್ಳಲಾಗಿದೆ ಎಂದು ಕೃಷಿ ಇಲಾಖೆ ಅಧಿಕಾರಿಗಳು ತಿಳಿಸಿದ್ದಾರೆ.

ಕಾರ್ಯಚರಣೆ ವೇಳೆ ಚಿತ್ರದುರ್ಗ ವಿಭಾಗದ ಉಪ ಕೃಷಿ ನಿರ್ದೇಶಕ ಕೆ.ಎಸ್.ಶಿವಕುಮಾರ್, ಬೆಂಗಳೂರು ಜಾರಿದಳದ ಸಹಾಯಕ ಕೃಷಿ ನಿರ್ದೇಶಕ ಎಂ.ರೇಣುಕಾ ಪ್ರಸನ್ನ, ಚಿತ್ರದುರ್ಗ ಕೃಷಿ ಇಲಾಖೆ ಜಾರಿದಳದ ಸಹಾಯಕ ಕೃಷಿ ನಿರ್ದೇಶಕರಾದ ಜೆ.ಉಲ್ಫತ್ ಜೈಬಾ, ಎಚ್.ವಿ.ನಾಗರಾಜ, ಚಿತ್ರದುರ್ಗ ಸಹಾಯಕ ಕೃಷಿ ನಿರ್ದೇಶಕ ಎಚ್.ಕೆ.ರಾಮಕೃಷ್ಣ, ಹಿರೇಗುಂಟನೂರು ರೈತ ಸಂಪರ್ಕ ಕೇಂದ್ರದ ಕೃಷಿ ಅಧಿಕಾರಿ ಕೆ.ಧನರಾಜ್, ಮಳಿಗೆಯ ಮಾಲೀಕ ನಟರಾಜ್ ಹಾಗೂ ದೊಡ್ಡ ಆಲದಘಟ್ಟ ಗ್ರಾಮಸ್ಥರು ಇದ್ದರು.

# ಮುಟ್ಟಿನ ಸಮಯದಲ್ಲಿ ಶುಚಿತ್ವ ಕಾಪಾಡಿಕೊಳ್ಳುವುದು ಮುಖ್ಯ

## ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ್




**ಚಿತ್ರದುರ್ಗ:** ಮುಟ್ಟಿನ ಸಂದರ್ಭದಲ್ಲಿ ಮಹಿಳೆಯನ್ನು ದೂರ ಇಡುವುದು, ಆಕೆಯನ್ನು ಅಶುಭ ಎಂದು ಭಾವಿಸುವುದು ಬಹಳ ದೊಡ್ಡ ತಪ್ಪು. ಅಲ್ಲದೇ ಋತು ಚಕ್ರದ ಸಂದರ್ಭದಲ್ಲಿ ಮಹಿಳೆಯರು ಶುಚಿತ್ವ ಕಾಪಾಡಿಕೊಳ್ಳುವುದು ಬಹಳ ಮುಖ್ಯ ಎಂದು ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ್ ಹೇಳಿದರು.

ನಗರದ ಚಳ್ಳಕೆರೆ ರಸ್ತೆಯ ಪದ್ಮಾವತಿ ನರ್ಸಿಂಗ್ ಕಾಲೇಜಿನಲ್ಲಿ ಬುಧವಾರ ಆರೋಗ್ಯ ಇಲಾಖೆ ವತಿಯಿಂದ ವಿಶ್ವ ಋತುಚಕ್ರ ನೈರ್ಮಲ್ಯ ದಿನದ ಅಂಗವಾಗಿ ಹಮ್ಮಿಕೊಂಡಿದ್ದ ಮಾಹಿತಿ ಸಂವಹನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಹೆಣ್ಣಿನ ಜೀವನದಲ್ಲಿ ಋತುಚಕ್ರ ಬಹಳ ಪ್ರಮುಖ ಘಟ್ಟ. ಋತುಚಕ್ರದಿಂದ ಹುಡುಗಿ ಯುವತಿಯಾಗಿ ಬಡ್ತಿ ಪಡೆಯುತ್ತಾಳೆ. ನಂತರ ಆ ಯುವತಿ ಮದುವೆಯಾದ ಮೇಲೆ ಮಹಿಳೆಯಾಗಿ ಬದಲಾಗುತ್ತಾಳೆ. ಈ ಋತುಚಕ್ರ ಮಹಿಳೆ ಗರ್ಭ ಧರಿಸಲು ಅತ್ಯಗತ್ಯಕ್ರಿಯೆ. ಹಾಗಾಗಿ ಹೆಣ್ಣಾಗಿ ಹುಟ್ಟಿದ ಮೇಲೆ ಪಿರಿಯಡ್ಸ್ ಅಥವಾ ಋತುಚಕ್ರ ನೈಸರ್ಗಿಕ ಕ್ರಿಯೆಯನ್ನು ಅನುಭವಿಸಲೇಬೇಕು ಎಂದರು.

ಮುಟ್ಟಿನ ಸಮಯದಲ್ಲಿ ನಿಮ್ಮ ದೇಹವನ್ನು ಕಾಳಜಿ ವಹಿಸುವ ಸಾಮರ್ಥ್ಯವು ಈ ಮೂಲಭೂತ ಸ್ವಾತಂತ್ರ್ಯದ ಅತ್ಯಗತ್ಯ ಭಾಗವಾಗಿದೆ. ನಿಷೇಧಗಳನ್ನು ಮುರಿದು ಮುಟ್ಟಿನ ಸುತ್ತಲಿನ ಕಳಂಕವನ್ನು ಕೊನೆಗೊಳಿಸಿ ಎಂದು ಹೇಳಿದರು.

ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಜಾನಕಿ ಮಾತನಾಡಿ, ಮುಟ್ಟಿನ ಉತ್ಪನ್ನಗಳ ಪ್ರವೇಶ, ಮುಟ್ಟಿನ ಬಗ್ಗೆ ಶಿಕ್ಷಣ ಮತ್ತು ಅವಧಿ ಸ್ನೇಹಿ ನೈರ್ಮಲ್ಯ ಸೌಲಭ್ಯಗಳ ಬಗ್ಗೆ ಸವಾಲುಗಳ ಬಗ್ಗೆ ಜಾಗೃತಿ ಮೂಡಿಸಿದರು. ಮುಟ್ಟಿನ ಬಗ್ಗೆ ಅರಿವು ಮೂಡಿಸುವುದು ಮತ್ತು ಮುಟ್ಟಿನ ಸ್ವಚ್ಛತೆ ಇಂದಿನ ಅಗತ್ಯವಾಗಿದೆ. ಸುರಕ್ಷಿತ ಮುಟ್ಟಿನ ನೈರ್ಮಲ್ಯ ಅಭ್ಯಾಸಗಳನ್ನು ಉತ್ತೇಜಿಸುವ ಮೂಲಕ ಮಹಿಳೆಯರ ಆರೋಗ್ಯವನ್ನು ಖಚಿತಪಡಿಸಿಕೊಳ್ಳೋಣ ಎಂದು ಹೇಳಿದರು.

ಶಿಕ್ಷಣದ ಕೊರತೆ, ನಿರಂತರ ನಿಷೇಧಗಳು ಮತ್ತು ಕಳಂಕ, ನೈರ್ಮಲ್ಯ ಮುಟ್ಟಿನ ಉತ್ಪನ್ನಗಳಿಗೆ ಸೀಮಿತ ಪ್ರವೇಶ ಮತ್ತು ಕಳಪೆ ನೈರ್ಮಲ್ಯ ಮೂಲಸೌಕರ್ಯ, ಆರೋಗ್ಯ, ಪ್ರಪಂಚದಾದ್ಯಂತ ಮಹಿಳೆಯರು ಮತ್ತು ಹುಡುಗಿಯರ ಒಟ್ಟಾರೆ ಸ್ಥಿತಿಯಿಂದಾಗಿ ಕಳಪೆ ಮುಟ್ಟಿನ ಚಕ್ರ ಉಂಟಾಗುತ್ತದೆ ಎಂದು ನಮಗೆ ತಿಳಿದಿದೆ. ಇದರಿಂದಾಗಿ ಲಕ್ಷಾಂತರ ಹುಡುಗಿಯರು ಮತ್ತು ಮಹಿಳೆಯರು ತಮ್ಮ ಸಾಮರ್ಥ್ಯವನ್ನು ತಲುಪಲು ಸಾಧ್ಯವಾಗುತ್ತಿಲ್ಲ ಎಂದರು.

ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಶ್ರೀನಿವಾಸ ಮಾತನಾಡಿದರು. ಕಾರ್ಯಕ್ರಮದಲ್ಲಿ ತಾಲ್ಲೂಕು ಆಶಾ ಭೋಧಕಿ ತಬಿತಾ, ಕಾಲೇಜಿನ ಪ್ರಾಂಶುಪಾಲ ವೆಂಕಟೇಶ, ಉಪನ್ಯಾಸಕರಾದ ರೇಣುಕಾ, ಗಂಗಮ್ಮ, ವೆಂಕಟೇಶ 100ಕ್ಕೂ ಹೆಚ್ಚು ವಿದ್ಯಾರ್ಥಿನಿಯರು ಭಾಗವಹಿಸಿದ್ದರು.

# ಪಿಒಕೆ ಭಾರತಕ್ಕೆ ಮರಳುವ ದಿನ ದೂರವಿಲ್ಲ: ರಾಜನಾಥ್

**ನವದೆಹಲಿ,ಮೇ.29**- ಪಾಕಿಸ್ತಾನ ಆಕ್ರಮಿತ ಕಾಶ್ಮೀರ -ಪಿಒಕೆ ಭಾರತ-ಕ್ಕೆ ಸೇರಿದ್ದು,ಸದ್ಯದಲ್ಲಿಯೇ ಭಾರತಕ್ಕೆ ಮರಳುವ ದಿನ ದೂರವಿಲ್ಲ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹೇಳಿದ್ದಾರೆ.



ಪಿಒಕೆ ಜನರು ಭಾರತದೊಂದಿಗೆ ಆಳವಾದ ಸಂಪರ್ಕ ಹೊಂದಿದ್ದಾರೆ. ಅಂತಿಮವಾಗಿ ಪಾಕ್ ಆಕ್ರಮಿತ ಕಾಶ್ಮೀರವನ್ನು ಭಾರತಕ್ಕೆ ಮರಳಿ ಪಡೆಯುವ ದಿನ ದೂರವಿಲ್ಲ, ಏಕ ಭಾರತ, ಶ್ರೇಷ್ಠ ಭಾರತ-ಕ್ಕೆ ಕೇಂದ್ರ ಬದ್ಧವಾಗಿದೆ ಎಂದು ತಿಳಿಸಿದ್ದಾರೆ

ಭಾರತೀಯ ಕೈಗಾರಿಕಾ ಒಕ್ಕೂಟ ವಾರ್ಷಿಕ ವ್ಯವಹಾರ ಶೃಂಗಸಭೆ 2025 ರ ಉದ್ಘಾಟಿಸಿ ಮಾತನಾಡಿ ಅವರು ಭಾರತದ ರಕ್ಷಣಾ ರಫ್ತು 10 ವರ್ಷಗಳ ಹಿಂದೆ 1000 ಕೋಟಿ ರೂ. ಗಿಂತ ಕಡಿಮೆಯಿತ್ತು ಈಗ ದಾಖಲೆಯ 23,500 ಕೋಟಿ ರೂ.ಗಳನ್ನು ತಲುಪಿದೆ ಎಂದು ಹೇಳಿದರು.

ಪಿಒಕೆಯೊಂದಿಗಿನ ಭಾರತದ ಭಾವನಾತ್ಮಕ ಮತ್ತು ಸಾಂಸ್ಕೃತಿಕ ಸಂಬಂಧ ಹೊಂದಿದೆ. "ಭಾರತ ಯಾವಾಗಲೂ ಹೃದಯಗಳನ್ನು ವಿಭಜಿಸುವುದಿಲ್ಲ" ಬದಲಾಗಿ ಬೆಸೆಯುವ ಕೆಲಸ ಮಾಡುತ್ತಿದೆ. ನಮ್ಮದೇ ಆದ ಭಾಗವಾದ ಪಿಒಕೆ ತನ್ನದೇ ಆದ ಮೇಲೆ ಮರಳುವ ದಿನ ದೂರವಿಲ್ಲ ಎಂದು ತಿಳಿಸಿದ್ದಾರೆ

ಭೌಗೋಳಿಕವಾಗಿ, ರಾಜಕೀಯವಾಗಿ ನಮ್ಮಿಂದ ಬೇರ್ಪಟ್ಟ ಪಿಒಕೆಯ ಜನರ ಮೇಲೆ ತನಗೆ ನಂಬಿಕೆ ಇದೆ,ಅವರು ಒಂದು ದಿನ ಭಾರತದ ಮುಖ್ಯವಾಹಿನಿಗೆ ಮರಳುತ್ತಾರೆ. "ಪಿಒಕೆಯ ಜನರು ನಮ್ಮವರು. "ಒಂದು ಭಾರತ, ಶ್ರೇಷ್ಠ ಭಾರತ" ಎಂಬ ಸಂಕಲ್ಪಕ್ಕೆ ನಾವು ಬದ್ಧರಾಗಿದ್ದೇವೆ" ಎಂದು ಅವರು ಹೇಳಿದರು.

ಆಪರೇಷನ್ ಸಿಂಧೂರ್ ಸಮಯದಲ್ಲಿ, ಇಡೀ ದೇಶದ ಜನರು ಮೇಕ್ ಇನ್ ಇಂಡಿ-ಯಾ ಅಭಿಯಾನದ ಯಶಸ್ಸನ್ನು ನೋಡಿದೆ. ಅರ್ಥಮಾಡಿಕೊಂಡಿದ್ದಾರೆ ಮತ್ತು ಅನುಭವಿಸಿದ್ದಾರೆ, ರಕ್ಷಣೆಯಲ್ಲಿ ಮೇಕ್-ಇನ್-ಇಂಡಿಯಾ ಭಾರತದ ಭದ್ರತೆಗೆ ಮಾತ್ರವಲ್ಲದೆ ಅದರ ಸಮೃದ್ಧಿಗೂ ಅತ್ಯಗತ್ಯ ಎಂದು ಸಾಬೀತಾಗಿದೆ" ಎಂದು ತಿಳಿಸಿದ್ದಾರೆ.

ಆಪರೇಷನ್ ಸಿಂಧೂರ್ ಸಮಯದಲ್ಲಿ, ಭಾರತದ ಸ್ಥಳೀಯ ರಕ್ಷಣಾ ವ್ಯವಸ್ಥೆಗಳು ತಮ್ಮ ಸಾಮರ್ಥ್ಯ ಮತ್ತು ಶಕ್ತಿಯನ್ನು ಪ್ರದರ್ಶಿಸುವ ಮೂಲಕ ಇಡೀ ಜಗತ್ತನ್ನು ಅಚ್ಚರಿಗೊಳಿಸಿದೆ,ಯುದ್ಧ ವಿಮಾನಗಳು ಅಥವಾ ಕ್ಷಿಪಣಿ ವ್ಯವಸ್ಥೆಗಳನ್ನು ತಯಾರಿಸುತ್ತಿಲ್ಲ,ಮುಂದಿನ ಪೀಳಿಗೆಯ ಯುದ್ಧ ತಂತ್ರಜ್ಞಾನಗಳಿಗೂ ತಯಾರಿ ನಡೆಸುತ್ತಿದ್ದೇವೆ," ಸ್ವಾವಲಂಬಿ ಮತ್ತು ಭವಿಷ್ಯಕ್ಕೆ ಸಿದ್ಧವಾಗಿರುವ ರಕ್ಷಣಾ ಪರಿಸರ ವ್ಯವಸ್ಥೆಯನ್ನು ನಿರ್ಮಿಸುವತ್ತ ದೇಶದ ಗಮನ ಹರಿಸಿದೆ ಎಂದಿದ್ದಾರೆ

"ಪಿಒಕೆಯಲ್ಲಿ ವಾಸಿಸುವ ನಮ್ಮ ಸಹೋದರರ ಪರಿಸ್ಥಿತಿ ಭಾರತದೊಂದಿಗೆ ಆಳವಾದ ಸಂಪರ್ಕ ಹೊಂದಿದೆ.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**